23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 317 | ನವದೆಹಲಿ | ಬೆಲೆ ₹10 | ಮೇ 23 2026, ಶನಿವಾರ




ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ವಸತಿ ಇಲಾಖೆ

ಕರ್ನಾಟಕ ಗೃಹ ಮಂಡಳಿ



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

## ಕರ್ನಾಟಕ ಗೃಹ ಮಂಡಳಿ

ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು
ಸೂರ್ಯನಗರ 4ನೇ ಹಂತ, ಕೆ.ಹೆಚ್.ಬಿ. ಸೂರ್ಯ ಕ್ರೀಡಾ ಗ್ರಾಮದಲ್ಲಿ

# ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆ ಸಮಾರಂಭ




**ಸನ್ಮಾನ್ಯ ಮುಖ್ಯಮಂತ್ರಿಗಳ 'ನಮ್ಮ ಮನೆ' ಯೋಜನೆಗೆ ಚಾಲನೆ**

**'ಸೂರ್ಯ ಶೈನ್' ಮತ್ತು 'ಸೂರ್ಯ ಡಿವೈನ್' ವಸತಿ ಸಮುಚ್ಚಯ ಕಾಮಗಾರಿಗಳಿಗೆ ಶಂಕುಸ್ಥಾಪನೆ**

**ವಸತಿ ಯೋಜನೆಗೆ ಭೂಮಿ ನೀಡಿದ ಭೂಮಾಲೀಕರುಗಳಿಗೆ ಸಾಂಕೇತಿಕ ನಿವೇಶನ ಹಂಚಿಕೆ**

**ಮುಖ್ಯಮಂತ್ರಿಯವರ ಅಮೃತ ಹಸ್ತದಿಂದ ಸಾರ್ವಜನಿಕ ಅರ್ಜಿದಾರರಿಗೆ ನಿವೇಶನ ಹಂಚಿಕೆ**



**ದಿನಾಂಕ** 23ನೇ ಮೇ, 2026 ಶನಿವಾರ | **ಸಮಯ** ಬೆಳಿಗ್ಗೆ 11.00 ಗಂಟೆಗೆ | **ಸ್ಥಳ:** ಇಂಡ್ಲವಾಡಿ ಗ್ರಾಮ, 4ನೇ ಹಂತ, ಕೆ.ಹೆಚ್.ಬಿ. ಸೂರ್ಯ ಕ್ರೀಡಾ ಗ್ರಾಮ, ಬೆಂಗಳೂರು

**ಸಮಾರಂಭದ ಉದ್ಘಾಟನೆ**
**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

**ಘನ ಉಪಸ್ಥಿತಿ**
**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು, ಜಲಸಂಪನ್ಮೂಲ ಇಲಾಖೆ ಹಾಗೂ
ಬೆಂಗಳೂರು ನಗರಾಭಿವೃದ್ಧಿ ಸಚಿವರು, ಕರ್ನಾಟಕ ಸರ್ಕಾರ

ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ದರಾಮಯ್ಯ** ಅವರನ್ನು ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಾದ **ಶ್ರೀ ಬಿ.ಝಡ್. ಜಮೀರ್ ಅಹಮದ್ ಖಾನ್** ಅವರು ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರಾದ **ಶ್ರೀ ಕೆ.ಎಂ. ಶಿವಲಿಂಗೇಗೌಡ** ಹಾಗೂ ಆನೇಕಲ್ ವಿಧಾನಸಭಾ ಕ್ಷೇತ್ರದ ಶಾಸಕರಾದ **ಶ್ರೀ ಬಿ. ಶಿವಣ್ಣ** ಅವರೊಂದಿಗೆ ಕಾರ್ಯಕ್ರಮಕ್ಕೆ ಆಹ್ವಾನಿಸುತ್ತಿರುವ ಸಂದರ್ಭ.

**ಸಾರ್ವಜನಿಕ ಹಂಚಿಕೆ ಪತ್ರ ವಿತರಣೆ**
**ಶ್ರೀ ಬಿ.ಝಡ್. ಜಮೀರ್ ಅಹಮದ್ ಖಾನ್**
ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು, ಕರ್ನಾಟಕ ಸರ್ಕಾರ

**ರೈತರಿಗೆ ಹಂಚಿಕೆ ಪತ್ರ ವಿತರಣ**
**ಶ್ರೀ ಕೆ.ಎಂ. ಶಿವಲಿಂಗೇಗೌಡ**
ಮಾನ್ಯ ಅಧ್ಯಕ್ಷರು
ಕರ್ನಾಟಕ ಗೃಹ ಮಂಡಳಿ

**ಅಧ್ಯಕ್ಷತೆ**
**ಶ್ರೀ ಬಿ. ಶಿವಣ್ಣ**
ಮಾನ್ಯ ಶಾಸಕರು
ಆನೇಕಲ್ ವಿಧಾನಸಭಾ ಕ್ಷೇತ್ರ

**ಗೌರವ ಅತಿಥಿ**
**ಡಾ|| ಸಿ.ಎನ್. ಮಂಜುನಾಥ್**
ಮಾನ್ಯ ಸಂಸದರು
ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ

**ಶ್ರೀ ಎಂ. ಕೃಷ್ಣಪ್ಪ**
ಮಾನ್ಯ ಶಾಸಕರು
ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ

**ಗೌರವ ಉಪಸ್ಥಿತಿ**
**ಶ್ರೀ ಡಿ.ಕೆ. ಸುರೇಶ್**
ಮಾನ್ಯ ಅಧ್ಯಕ್ಷರು
ಬೆಂಗಳೂರು ಹಾಲು ಒಕ್ಕೂಟ

ರಾಜ್ಯದ ಎಲ್ಲಾ ಮಾನ್ಯ ಸಚಿವರು, ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ತಿನ ಶಾಸಕರುಗಳು ಹಾಗೂ ಎಲ್ಲಾ ಆಯೋಗ, ನಿಗಮ ಮಂಡಳಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ಆತ್ಮೀಯ ಸ್ವಾಗತ

**ಸರ್ವರಿಗೂ ಆದರದ ಸುಸ್ವಾಗತ**

**ಡಾ. ಶಾಲಿನಿ ರಜನೀಶ್,** ಭಾ.ಆ.ಸೇ
ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ


**ಶ್ರೀ ಕೆ.ಪಿ. ಮೋಹನ್ ರಾಜ್,** ಭಾ.ಆ.ಸೇ
ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ

**ಶ್ರೀ ಕೆ.ಎ. ದಯಾನಂದ,** ಭಾ.ಆ.ಸೇ
ಆಯುಕ್ತರು, ಕರ್ನಾಟಕ ಗೃಹ ಮಂಡಳಿ

ಹಾಗೂ **ಸಮಸ್ತ ಕರ್ನಾಟಕ ಗೃಹ ಮಂಡಳಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ**


ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

## ನಿತ್ಯ ಪಂಚಾಂಗ 23.05.2026 ಶನಿವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ಸಪ್ತಮಿ,

ಆಶ್ಲೇಷ ನಕ್ಷತ್ರ,

4ನೇ ಶನಿವಾರ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ನವ ಕರ್ನಾಟಕ ರೈತ ಸಂಘದಿಂದ ಕಲಬುರಗಿಯಲ್ಲಿ ಮಹತ್ವದ ವಿಚಾರಸಂಕಿರಣ

**ನವದೆಹಲಿ, ಮೇ 22:** ರೈತರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ನವ ಕರ್ನಾಟಕ ರೈತಸಂಘ ಜುಲೈ 25, 26 ಮತ್ತು 27ರಂದು ಕಲಬುರಗಿಯಲ್ಲಿ ಮೂರು ದಿನಗಳ ಬೃಹತ್ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಆಯೋಜಿಸಿದೆ.

ಗ್ರಾಮಸ್ವರಾಜ್ಯ, ಆಹಾರ ಪದ್ಧತಿ ಹಾಗೂ ಬೆಂಬಲ ಬೆಲೆ ವಿಷಯಗಳನ್ನು ಕೇಂದ್ರೀಕರಿಸಿ ಈ ವಿಚಾರ ಸಂಕಿರಣ ನಡೆಯಲಿದೆ ಎಂದು ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ್ ಮತ್ತು ನವ ಕರ್ನಾಟಕ ರೈತಸಂಘದ ಅಧ್ಯಕ್ಷ ದಯಾನಂದ ಸಿ. ಪಾಟೀಲ್ ಹೇಳಿದ್ದಾರೆ. ದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ್, ರೈತರೇ ದೇಶದ ಬೆನ್ನೆಲುಬು. ಆದರೆ ರೈತರ ಬದುಕು ಅಸಹನೀಯವಾಗುತ್ತಿದೆ. ದಲ್ಲಾಳಿಗಳು ರೈತರ ಶ್ರಮವನ್ನು ದುರುಪಯೋಗ ಪಡಿಸಿಕೊಂಡು ಲಾಭ ಪಡೆಯುತ್ತಿದ್ದಾರೆ. ರೈತರಿಗೆ ತಮ್ಮ ಬೆಳೆಗೆ ಸರಿಯಾದ ಬೆಲೆ ಸಿಗುತ್ತಿಲ್ಲ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈ ಸಮಸ್ಯೆಗಳ ಬಗ್ಗೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಈ ವಿಚಾರಸಂಕಿರಣದಲ್ಲಿ ಹಿರಿಯ ಸಾಮಾಜಿಕ ಕಾರ್ಯಕರ್ತ ಅಣ್ಣಾ ಹಜಾರೆ, ನಟ ನಾನಾ ಪಾಟೇಕರ್, ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಸಾವಿರಾರು ಸಂಖ್ಯೆಯಲ್ಲಿ ರೈತರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ. ರೈತರ ಸಮಸ್ಯೆಗಳನ್ನು ಚರ್ಚಿಸಿ, ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಈ ವಿಚಾರ ಸಂಕಿರಣ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು. ನವಕರ್ನಾಟಕ ರೈತ ಸಂಘದ ಅಧ್ಯಕ್ಷ ದಯಾನಂದ ಸಿ. ಪಾಟೀಲ್ ಮಾತನಾಡಿ, ಸ್ವಾತಂತ್ರ್ಯ ಸುವರ್ಣ ಮಹೋತ್ಸವ ಆಚರಿಸುತ್ತಿರುವ ಸಂದರ್ಭದಲ್ಲಿ ಕೃಷಿಯೇತರ ಸಮುದಾಯ ಸಂಭ್ರಮದಲ್ಲಿದ್ದರೆ ಕೃಷಿಕ ಮತ್ತು ಅವನ ಬೆನ್ನೆಲುಬಾಗಿರುವ ಕೃಷಿ ಕಾರ್ಮಿಕರು ಮಾತ್ರ ತಮ್ಮ ಅವಶ್ಯಕತೆಗಳಿಗೆ ಕೈಚಾಚಿ ನಿಲ್ಲುವಂತಾಗಿದೆ. ಅನ್ನಕ್ಕಾಗಿ ರೇಷನ ಅಂಗಡಿ, ಕೆಲಸಕ್ಕಾಗಿ, ಬೀಜಗೊಬ್ಬರಗಳಿಗಾಗಿ ಕಚೇರಿ ಎದುರು ನಿಲ್ಲುವಂತಾಗಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಸ್ವಾವಲಂಬಿಯಾಗಿದ್ದ ರೈತ ಇಂದು ಪರಾವಲಂಬಿಯಾಗಿದ್ದಾನೆ ಇದಕ್ಕೆಲ್ಲ ಕಾರಣ ಕಳೆದ 75 ವರ್ಷಗಳಿಂದ ಬಂದಂತಹ ಕೃಷಿ ಮತ್ತು ಕೃಷಿಯೇತರ ನೀತಿಗಳ ನಿರ್ಣಯಗಳು. ರೈತ ಸಾಲದ ಸುಳಿಯಲ್ಲಿ ಸಿಕ್ಕಿ ಆತ್ಮಹತ್ಯೆಗೆ ಶರಣಾಗುತ್ತಿದ್ದಾನೆ ಯುವ ಪೀಳಿಗೆ ಉದ್ಯೋಗವಿಲ್ಲದೆ. ಪಟ್ಟಣದತ್ತ ಸಾಗಿ ಕಷ್ಟಕರ ಜೀವನ ನಡೆಸುತ್ತಿದ್ದಾರೆ. ಯುವಕರಿಗೆ ಹೆಚ್ಚಿನ ರೀತಿಯಲ್ಲಿ ಉದ್ಯೋಗವಕಾಶ ಕಲ್ಪಿಸಬೇಕು. ದೇಶದ ಮತ್ತು ರಾಜ್ಯದ ಅನೇಕ ಗಣ್ಯರು, ಪ್ರಜ್ಞಾವಂತರು ಗ್ರಾಮಸ್ವರಾಜ್ಯ, ಆಹಾರ ಪದ್ಧತಿ ಹಾಗೂ ಬೆಂಬಲ ಬೆಲೆ ವಿಷಯ ಕುರಿತು ತಜ್ಞರು ಭಾಗವಹಿಸಿ ನಮಗೆಲ್ಲಾ ಮಾರ್ಗದರ್ಶನ ಮಾಡಲಿದ್ದಾರೆ ಎಂದರು.

# ಕಾನೂನಿನಂತೆ 52 ಮೊಕದ್ದಮೆ ವಾಪಸ್: ಪರಂ

## ಸಂಪುಟ ಉಪಸಮಿತಿಯಲ್ಲಿ ಚರ್ಚಿಸಿ ತೀರ್ಮಾನ: ಗೃಹಸಚಿವರ ಸ್ಪಷ್ಟನೆ



**ಬೆಂಗಳೂರು, ಮೇ 22:** ಸಂಪುಟ ಉಪಸಮಿತಿಯಲ್ಲಿ ಚರ್ಚಿಸಿ ಶಿಫಾರಸು ಮಾಡಿದ ಪ್ರಕರಣಗಳನ್ನು ಕೈಬಿಡಲು ತೀರ್ಮಾನಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಮಾಧ್ಯಮದವರೊಂದಿಗೆ ಶುಕ್ರವಾರ ಮಾತನಾಡಿದ ಅವರು, 52 ಪ್ರಕರಣಗಳನ್ನು ವಾಪಸ್ ಪಡೆದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳ ಮೇಲೆ ಇದ್ದ ಕೇಸ್‌ಗಳ ಬಗ್ಗೆ ಸಂಪುಟ ಉಪಸಮಿತಿಗೆ ಸರ್ಕಾರ ಶಿಫಾರಸು ಮಾಡಿತ್ತು. ಈ ಸಮಿತಿಯು ಪ್ರತಿಯೊಂದು ಮೊಕದ್ದಮೆ ಬಗ್ಗೆಯೂ ಚರ್ಚೆ ಮಾಡಿ, ಕಾನೂನಾತ್ಮಕವಾಗಿ ವಾಪಸ್ ತೆಗೆದುಕೊಳ್ಳಲು ಅವಕಾಶವಿದೆ ಎಂದು ತೀರ್ಮಾನ ಮಾಡಿತ್ತು. ಅದರಂತೆ ರಾಜ್ಯದಲ್ಲಿ 52 ಕೇಸ್ ವಾಪಸ್ ತೆಗೆದುಕೊಳ್ಳಬಹುದು ಎಂದು ಸಚಿವ ಸಂಪುಟ ತೀರ್ಮಾನಿಸಿದೆ ಎಂದರು. ಆಳಂದ ದರ್ಗಾ ಪ್ರಕರಣ ವಾಪಸ್ ಪಡೆದ ವಿಚಾರವಾಗಿ ಮಾತನಾಡಿ, ಅದರ ಬಗ್ಗೆ ವಿವರ ಹೇಳಲು ಹೋಗಲ್ಲ. ಯಾಕೆ ಸಂಪುಟ ನಿರ್ಧಾರ ಆಗಿದೆ. ಎಲ್ಲವೂ ಪರಿಗಣಿಸಿಯೇ, ಚರ್ಚೆ ಮಾಡಿಯೇ ತೀರ್ಮಾನ ಮಾಡಲಾಗಿದೆ. ಏಕಾಏಕಿ ತೀರ್ಮಾನ ಮಾಡಿಲ್ಲ. ಚರ್ಚೆ ಮಾಡಿಯೇ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು.

ಕೇಂದ್ರ ಚುನಾವಣಾ ಆಯೋಗದಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ನಮ್ಮ ಶಾಸಕರ ಕ್ಷೇತ್ರಗಳಲ್ಲಿ ಪರಾಮರ್ಶೆ ಮಾಡಬೇಕು. ಸರಿಯಾದ ರೀತಿಯಲ್ಲಿ ಎಸ್‌ಐಆರ್ ಮಾಡುವುದರಲ್ಲಿ ನೀವು ಭಾಗಿಯಾಗಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಗಮನಿಸಬೇಕು ಎಂದು ಹೇಳಿದ್ದಾರೆ ಎಂದರು. ಪೆಟ್ರೋಲ್, ಡೀಸೆಲ್ ಏಖಖಿ ಕಡಿಮೆ ಮಾಡಬೇಕು ಎಂಬ ವಿಚಾರವಾಗಿ ಮಾತನಾಡಿ, ಕೇಂದ್ರ ಸರ್ಕಾರ ಜಾಸ್ತಿ ಮಾಡುವುದು, ನಾವು ಕಡಿಮೆ ಮಾಡುವುದು. ನಾವು ಸಬ್ಸಿಡಿ ನೀಡಲು ಎಲ್ಲಿಂದ ಸಾಧ್ಯತೆಯಿದೆ. ಕೇಂದ್ರ ಸರ್ಕಾರಕ್ಕೆ ಜನಪರ ಚಿಂತನೆ ಇಲ್ಲ. ಜವಾಬ್ದಾರಿ ಇಲ್ಲವಾ ಇದೆಲ್ಲವೂ ಕೇಂದ್ರ ಸರ್ಕಾರ ಗಮನಿಸಬೇಕು.

ಈಗಾಗಲೇ ಅನೇಕ ಯೋಜನೆಗಳಲ್ಲಿ ಅಂದರೆ ಮನರೇಗಾ ಇರಬಹುದು, ನಮಗೆ ಬರಬೇಕಾದ ತೆರಿಗೆ ಹಣ ಬಂದಿಲ್ಲ. ಇದೆಲ್ಲವೂ ನಮ್ಮ ಮೇಲೆ ಹೊರೆಯಿದೆ. ಮತ್ತೆ ಪೆಟ್ರೋಲ್, ಡಿಸೇಲ್ ದರ ಕಡಿಮೆ ಮಾಡಿ ಎಂದು ಹೇಳಲು ಆಗುತ್ತಾ ಎಂದು ಪ್ರಶ್ನಿಸಿದರು.

# ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ ದೆಹಲಿ ಘಟಕದ ಅಧ್ಯಕ್ಷರಾಗಿ ಡಾ. ನಿರಂಜನ್ ನಾಯ್ಕ್ ಆಯ್ಕೆ



**ನವದೆಹಲಿ, ಮೇ 22:** ನಮ್ಮ ಮಣ್ಣಿನಕಲೆ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಯಕ್ಷಗಾನದ ಪಾತ್ರ ಮಹತ್ವವಾದದ್ದು.

ಈ ನಿಟ್ಟಿನಲ್ಲಿ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಸುಮಾರು ಹತ್ತು ವರ್ಷಗಳ ಹಿಂದೆ ಯಕ್ಷಧ್ರುವ ಪಟ್ಲ ಫೌಂಡೇಶನ್ ಘಟಕ ಸ್ಥಾಪಿತವಾಗಿ ಕಲಾವಿದರಿಗೆ ಪ್ರೋತ್ಸಾಹ ನೀಡುತ್ತಾ ಜೊತೆಗೆ ಹೊರನಾಡಿನಲ್ಲಿರುವ ಯಕ್ಷಕಲಾ ಪ್ರೇಮಿಗಳಿಗೆ ನಿರಂತರವಾಗಿ ರಸದೌತಣವನ್ನು ನೀಡುತ್ತಿದೆ. ದೆಹಲಿಯ ಸಾಂಸ್ಕೃತಿಕ ರಾಯಭಾರಿ ಎಂದು ಹೆಸರಾದ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಮಾಜಿ ಅಧ್ಯಕ್ಷ ವಸಂತ ಶೆಟ್ಟಿ ಬೆಳ್ಳಾರೆ ಅವರ ಅಧ್ಯಕ್ಷತೆಯಲ್ಲಿ ದೆಹಲಿ ಘಟಕವು ನಿರಂತರವಾಗಿ ಯಕ್ಷಗಾನಕ್ಕಾಗಿ ಶ್ರಮಿಸುತಿದೆ. ಇತ್ತೀಚೆಗೆ ವಸಂತಶೆಟ್ಟಿ ಬೆಳ್ಳಾರೆ ಅಧ್ಯಕ್ಷತೆಯಲ್ಲಿ ಯಕ್ಷಧ್ರುವ ಫೌಂಡೇಶನ್ ದೆಹಲಿ ಘಟಕದ ನೂತನ ಪದಾಧಿಕಾರಿಗಳ ಸಮಿತಿಯನ್ನು ರಚನೆ ಮಾಡಲಾಯಿತು. ನೂತನ ಅಧ್ಯಕ್ಷರಾಗಿ ಖ್ಯಾತ ಕ್ಯಾನ್ಸರ್ ಚಿಕಿತ್ಸಕ ಡಾ. ನಿರಂಜನ್ ನಾಯ್ಕ್ ಹಾಗೂ ಕಾರ್ಯದರ್ಶಿಯಾಗಿ ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯ ಪ್ರಾಂಶುಪಾಲ ಪ್ರಶಾಂತ್ ಶೆಟ್ಟಿ ಅವರು ಆಯ್ಕೆಯಾಗಿದ್ದಾರೆ.

**ಗೌರವ ಅಧ್ಯಕ್ಷ–** ಟಿ. ಶಿವಪ್ರಸಾದ್ ಶೆಟ್ಟಿ, ಅಧ್ಯಕ್ಷ– ಡಾ. ನಿರಂಜನ್ ನಾಯ್ಕ್, ಉಪಾಧ್ಯಕ್ಷರು– ರಾಧಾಕೃಷ್ಣ ಮತ್ತು ಮಾಲಿನಿ ಪ್ರಹ್ಲಾದ್, ಸಂಚಾಲಕರು– ಕಾರ್ತಿಕ್ ರೈ, ಕಾರ್ಯದರ್ಶಿ– ಪ್ರಶಾಂತ್ ಶೆಟ್ಟಿ, ಖಜಾಂಚಿ – ಕೃಷ್ಣರಾಜ್ ಕೆ.ಎನ್., ಜಂಟಿ ಕಾರ್ಯದರ್ಶಿಗಳು– ನಯನಾ ಭಟ್ ಮತ್ತು ಹರ್ಷಿತಾ ಕುಶಾಲಪ್ಪ

**ಸದಸ್ಯರು** : ವಸಂತ ಶೆಟ್ಟಿ ಬೆಳ್ಳಾರೆ, ಮಂಜುನಾಥ ನಾಯಕ್, ಮಿಥೇಶ್ ಶೆಟ್ಟಿ, ಷರೀಫ್ ಯು.ಎ., ಪೂಜಾ ಪಿ. ರಾವ್, ಶುಭಾ ದೇವಿಪ್ರಸಾದ್, ಸತ್ಯನಾರಾಯಣ, ಪ್ರಕಾಶ್ ಶೆಟ್ಟಿ ಉಳೆಪಾಡಿ, ಅರವಿಂದ ಬಿಜೈ, ನಾಗರಾಜ್, ರಾಘವೇಂದ್ರ ನಾಯ್ಕ್ .

# ಭವಿಷ್ಯದ ಜಲಕ್ಷಾಮ ತಪ್ಪಿಸಲು ಶಾಲಾ ಹಂತದಲ್ಲೇ ಜಾಗೃತಿ: ಸಚಿವ ಬೋಸ್‌ರಾಜು


## ಎನ್‌ಸಿಇಆರ್‌ಟಿ ಪಠ್ಯಕ್ರಮದಲ್ಲಿ ಅಂತರ್ಜಲ ಕುರಿತು ಪ್ರತ್ಯೇಕ ಅಧ್ಯಾಯ ಅಳವಡಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ

**ಬೆಂಗಳೂರು, ಮೇ.22:** ಹವಾಮಾನ ಬದಲಾವಣೆ ಮತ್ತು ಅಂತರ್ಜಲದ ಅತಿಯಾದ ಬಳಕೆಯಿಂದ ಭವಿಷ್ಯದಲ್ಲಿ ಎದುರಾಗ ಬಹುದಾದ ಜಲಕ್ಷಾಮವನ್ನು ತಪ್ಪಿಸಲು ಶಾಲಾ ಹಂತದಲ್ಲೇ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಅತ್ಯಗತ್ಯ. ಈ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿಯ ಪಠ್ಯಕ್ರಮದಲ್ಲಿ 'ಅಂತರ್ಜಲ' ಕುರಿತ ಪ್ರತ್ಯೇಕ ಅಧ್ಯಾಯವನ್ನು ಅಳವಡಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ.

ಈ ಬಗ್ಗೆ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಪ್ರಸ್ತುತ ಎನ್‌ಸಿಇಆರ್‌ಟಿ 10ನೇ ತರಗತಿಯ ಸಮಾಜ ವಿಜ್ಞಾನ ಪಠ್ಯಪುಸ್ತಕದಲ್ಲಿ 'ಜಲ ಸಂಪನ್ಮೂಲಗಳು' ಎಂಬ ಅಧ್ಯಾಯವಿದ್ದರೂ, ಅದರಲ್ಲಿ ಕೇವಲ ಮೇಲ್ಮೈ ಜಲಕ್ಕೆ ಮಾತ್ರ ಹೆಚ್ಚಿನ ಒತ್ತು ನೀಡಲಾಗಿದೆ.

ಭೂಮಿಯ ಮೇಲಿರುವ ಒಟ್ಟು ದ್ರವರೂಪದ ಸಿಹಿನೀರಿನಲ್ಲಿ ಶೇ. 97ರಷ್ಟು ಪಾಲು ಅಂತರ್ಜಲದ ರೂಪದಲ್ಲಿದೆ. ದೇಶದ ಶೇ. 50ರಷ್ಟು ಗೃಹಬಳಕೆ ಹಾಗೂ ಶೇ. 25ರಷ್ಟು ಕೃಷಿಯು ನೀರಿಗಾಗಿ ಅಂತರ್ಜಲವನ್ನೇ ಅವಲಂಬಿಸಿದೆ. ಪ್ರತಿ ವರ್ಷ ನೀರಿನ ಬಳಕೆಯು ಶೇ. 1ರಷ್ಟು ಹೆಚ್ಚಾಗುತ್ತಿದ್ದು, ಹವಾಮಾನ ಬದಲಾವಣೆಯಿಂದಾಗಿ ಮೇಲ್ಮೈ ಜಲದ ಲಭ್ಯತೆ ಕಡಿಮೆಯಾಗುತ್ತಿರುವುದರಿಂದ ಅಂತರ್ಜಲದ ಮೇಲಿನ ಅವಲಂಬನೆ ಇನ್ನಷ್ಟು ತೀವ್ರವಾಗಲಿದೆ. ಅಲ್ಲದೇ, ಕಳೆದ ಎರಡು ದಶಕಗಳಲ್ಲಿ ಅತಿ–ಬಳಕೆಯ ಮತ್ತು ಅಪಾಯಕಾರಿ ಮಟ್ಟದಲ್ಲಿರುವ ಅಂತರ್ಜಲ ಪ್ರದೇಶಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತಿದೆ. ಜೊತೆಗೆ, ಅಂತರ್ಜಲ ಕಲುಷಿತಗೊಳ್ಳುತ್ತಿರುವ ಬೆನ್ನಲ್ಲೇ ಅಂತರ್ಜಲದ ಗುಣಮಟ್ಟವೂ ನಿರಂತರವಾಗಿ ಕುಸಿಯುತ್ತಿದೆ.

ವಿಶ್ವಸಂಸ್ಥೆಯ 169 ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ (ಖಆಉು) 53 ಗುರಿಗಳು ನೇರವಾಗಿ ಅಂತರ್ಜಲಕ್ಕೆ ಸಂಬಂಧಿಸಿದಂತಾಗಿವೆ (ವಿಶೇಷವಾಗಿ ಗುರಿ 6 ಮತ್ತು 13). ಅಮೆರಿಕದ ಶಾಲಾ ಪಠ್ಯದಲ್ಲಿಯೇ ಅಂತರ್ಜಲ, ಅದರ ಇಂಗುವಿಕೆ, ಪೆರ್ಮಿಯಬಲಿಟಿ, ಅಂತರ್ಜಲ ಹರಿವು ಹಾಗೂ ಕಲುಷಿತಗೊಳ್ಳುವಿಕೆ ಕುರಿತು ವಿವರಿಸುವ ಪ್ರತ್ಯೇಕ ಅಧ್ಯಾಯವನ್ನು ಅಳವಡಿಸಲಾಗಿದೆ. ಇದೇ ಮಾದರಿಯಲ್ಲಿ ನಮ್ಮ ದೇಶದಲ್ಲೂ ಭವಿಷ್ಯದ ಪೀಳಿಗೆಗೆ ಅಂತರ್ಜಲ ಸಂಪನ್ಮೂಲದ ಲಭ್ಯತೆ ಹಾಗೂ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಲು ಪ್ರೌಢಶಾಲಾ ಹಂತದಲ್ಲಿಯೇ ಈ ವಿಷಯಗಳ ಸೇರ್ಪಡೆ ಅತ್ಯಗತ್ಯವಾಗಿದೆ ಎಂದು ಪತ್ರದಲ್ಲಿ ಮನವರಿಕೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.



ಭವಿಷ್ಯದ ಜಲಕ್ಷಾಮವನ್ನು ಪರಿಣಾಮಕಾರಿಯಾಗಿ ಎದುರಿಸಲು ಕೇವಲ ಯೋಜನೆಗಳನ್ನು ರೂಪಿಸಿದರೆ ಸಾಲದು, ನಮ್ಮ ಮುಂದಿನ ಪೀಳಿಗೆಗೆ ಜಲ ಸಂರಕ್ಷಣೆಯ ನೈಜ ಮಹತ್ವವನ್ನು ಶಾಲಾ ಹಂತದಲ್ಲಿಯೇ ತಿಳಿಸಿಕೊಡಬೇಕಿದೆ. ಹವಾಮಾನ ಬದಲಾವಣೆಯಿಂದಾಗಿ ಮೇಲ್ಮೈ ಜಲಮೂಲಗಳು ಬತ್ತಿಹೋಗುತ್ತಿದ್ದು, ನಾವಿಂದು ಬಹುತೇಕ ಅಂತರ್ಜಲವನ್ನೇ ಅವಲಂಬಿಸುವಂತಾಗಿದೆ. ಈ ನಿಟ್ಟಿನಲ್ಲಿ, ಜಾಗತಿಕ ಮಾದರಿಯಲ್ಲಿ ನಮ್ಮ ದೇಶದ ಎನ್‌ಸಿಇಆರ್‌ಟಿ ಪಠ್ಯಕ್ರಮದಲ್ಲಿ 'ಅಂತರ್ಜಲ' ಕುರಿತ ಪ್ರತ್ಯೇಕ ಹಾಗೂ ವಿಸ್ತೃತ ಅಧ್ಯಾಯವನ್ನು ಅಳವಡಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ರಾಜ್ಯ ಸರ್ಕಾರದ ಈ ಮಹತ್ವದ ಹಾಗೂ ದೂರದೃಷ್ಟಿಯ ಬೇಡಿಕೆಗೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸುವ ಸಂಪೂರ್ಣ ವಿಶ್ವಾಸ ನಮಗಿದೆ."

– ಎನ್.ಎಸ್. ಬೋಸರಾಜು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ

### ಪಠ್ಯದಲ್ಲಿ ಏನೇನು ಇರಬೇಕು?

**ರಾಷ್ಟ್ರೀಯ ಶಿಕ್ಷಣ ನೀತಿ 2020 ಹಾಗೂ ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟಿನ ಅಡಿಯಲ್ಲಿ ಎನ್‌ಸಿಇಆರ್‌ಟಿ 2027–28ನೇ ಸಾಲಿಗೆ 10ನೇ ತರಗತಿಯ ಹೊಸ ಪಠ್ಯಪುಸ್ತಕಗಳನ್ನು ಸಿದ್ಧಪಡಿಸುತ್ತಿದೆ. ಈ ಹೊಸ ಪಠ್ಯದಲ್ಲಿ ಈ ಕೆಳಗಿನ ಪ್ರಮುಖ ವಿಷಯಗಳನ್ನು ಒಳಗೊಂಡ 'ಅಂತರ್ಜಲ' ಅಧ್ಯಾಯವನ್ನು ಸೇರಿಸಲು ಎನ್‌ಸಿಇಆರ್‌ಟಿ ಜೊತೆ ವ್ಯವಹರಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ.**

# ಕಲಬುರಗಿ ಪಿಎಂ ಮಿತ್ರ ಜವಳಿ ಪಾರ್ಕ್ ಕಾಮಗಾರಿ ಚುರುಕುಗೊಳಿಸಲು ತೀರ್ಮಾನ

## ಅಧಿಕಾರಿಗಳೊಂದಿಗೆ ಸಚಿವರಾದ ಎಂ.ಬಿ.ಪಾಟೀಲ್, ಪ್ರಿಯಾಂಕ್‌ಖರ್ಗೆ, ಮುಖ್ಯಕಾರ್ಯದರ್ಶಿ ಸಭೆ

**ಬೆಂಗಳೂರು, ಮೇ 22:** ಮುಖ್ಯಮಂತ್ರಿಗಳು ಈ ಬಾರಿಯ ಆಯವ್ಯಯದಲ್ಲಿ ಘೋಷಿಸಿರುವಂತೆ ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ ಮಿತ್ರ ಜವಳಿ ಪಾರ್ಕ್' ಯೋಜನೆಯ ಕಾಮಗಾರಿಗಳನ್ನು ಅತ್ಯಂತ ವೇಗವಾಗಿ ಚುರುಕುಗೊಳಿಸಲು ನಿರ್ಧರಿಸಲಾಗಿದೆ.

ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ರಾಜ್ಯದ ಮುಖ್ಯ ಕಾರ್ಯದರ್ಶಿಗಳಾದ ಶಾಲಿನಿ ರಜನೀಶ್ ಅವರು ಕೈಮಗ್ಗ ಮತ್ತು ಜವಳಿ ಇಲಾಖೆ ಹಾಗೂ ಕೈಗಾರಿಕಾ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ನಡೆಸಿದ ಮಹತ್ವದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಆಯವ್ಯಯದ ಘೋಷಣೆಯನ್ನು ಕಾಲಮಿತಿಯಲ್ಲಿ ಜಾರಿಗೆ ತರಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

**ಪರಿಷ್ಕೃತ ಯೋಜನಾ ವರದಿ ಸಿದ್ಧತೆ:**

ಕಲಬುರಗಿ ಪಾರ್ಕ್‌ನ ಬಾಹ್ಯ ಮೂಲಸೌಕರ್ಯ ಕಾಮಗಾರಿಗಳನ್ನು ಒಳಗೊಂಡಂತೆ ಸಮಗ್ರ ಯೋಜನಾ ವರದಿಯನ್ನು ತಕ್ಷಣವೇ ಪರಿಷ್ಕರಿಸಿ, ಭಾರತ ಸರ್ಕಾರದ ಯೋಜನಾ ಅನುಮೋದನೆ ಸಮಿತಿಗೆ ಸಲ್ಲಿಸಲು ಕೈಮಗ್ಗ ಮತ್ತು ಜವಳಿ ಇಲಾಖೆಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮೂಲಕ ಪಾರ್ಕ್‌ನ ಮೊದಲ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ತಕ್ಷಣವೇ ಆರಂಭಿಸಲು ಸಭೆಯಲ್ಲಿ ಚರ್ಚಿಸಲಾಯಿತು. ಮೊದಲ ಹಂತದ ಯಶಸ್ವಿ ಅನುಷ್ಠಾನದ ನಂತರವಷ್ಟೇ, ಉದ್ಯೋಗ ಸೃಷ್ಟಿ ಮತ್ತು ಹೂಡಿಕೆ ಪ್ರಮಾಣವನ್ನು ಆಧರಿಸಿ ಎರಡನೇ ಹಂತದ ಅಭಿವೃದ್ಧಿಗೆ ಚಾಲನೆ ನೀಡಲು ಸಭೆ ನಿರ್ಧರಿಸಿತು ಎಂದೂ ನೀಡಿದ್ದಾರೆ.

ಸಭೆಯಲ್ಲಿ ಕೈಗಾರಿಕ ಹಾಗೂ ವಾಣಿಜ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎಸ್.ಸೆಲ್ವಕುಮಾರ್, ಜವಳಿ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬು ಘೋಯಲ್ ಚೌಧರಿ, ಜವಳಿ ಇಲಾಖೆಯ ಆಯುಕ್ತ ಕೆ.ಬಿ.ಬಸವರಾಜ್, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಗೋವಿಂದರೆಡ್ಡಿ ಹಾಗೂ ಇತರ ಅಧಿಕಾರಿಗಳು ಪಾಲ್ಗೊಂಡಿದ್ದರು.

### ಯೋಜನಾ ವೆಚ್ಚದ ಶೇ.30ರಷ್ಟು ಧನಸಹಾಯ



**ಕೇಂದ್ರ ಸರ್ಕಾರದ ಅಭಿವೃದ್ಧಿ ಬಂಡವಾಳ ಬೆಂಬಲ' ಯೋಜನೆಯಡಿ ಒಟ್ಟು ಯೋಜನಾ ವೆಚ್ಚದ ಶೇ. 30 ರಷ್ಟು (ಗರಿಷ್ಠ 500 ಕೋಟಿ ರೂ.) ಧನಸಹಾಯ ಲಭ್ಯವಾಗಲಿದ್ದು, ಇದನ್ನು ಎರಡು ಹಂತಗಳಲ್ಲಿ ಬಳಸಿಕೊಳ್ಳಲಾಗುವುದು. ಕೇಂದ್ರದ ಮಾರ್ಗಸೂಚಿಗಳ ಪ್ರಕಾರ, ಪಾರ್ಕ್‌ನ ಗೇಟ್‌ನಿಂದ ಹೊರಗಡೆ ನಡೆಯುವ ಬಾಹ್ಯ ಕಾಮಗಾರಿಗಳನ್ನು ಒಟ್ಟಾರೆ ಅನುದಾನದ ಅರ್ಹತೆಗಾಗಿ ಪರಿಗಣಿಸಬಹುದಾದರೂ, ಕೇಂದ್ರದ ನಿಜವಾದ ಧನಸಹಾಯವನ್ನು ಕೇವಲ ಪಾರ್ಕ್‌ನ ಒಳಗಿನ ಆಂತರಿಕ ಮೂಲಸೌಕರ್ಯಗಳಾದ ರಸ್ತೆ, ನೀರು, ವಿದ್ಯುತ್, ತ್ಯಾಜ್ಯ ನೀರು ಸಂಸ್ಕರಣಾ ಘಟಕ ಮತ್ತು ವಸತಿ ನಿಲಯಗಳಿಗಾಗಿ ಬಳಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ. ಕಲಬುರಗಿ ಜಿಲ್ಲೆಯ ಆರ್ಥಿಕ ಚಿತ್ರಣವನ್ನೇ ಬದಲಿಸಬಲ್ಲ ಮತ್ತು ಸಾವಿರಾರು ಜನರಿಗೆ ಉದ್ಯೋಗ ನೀಡಬಲ್ಲ ಈ ಬೃಹತ್ ಜವಳಿ ಪಾರ್ಕ್ ಯೋಜನೆಯ ಮೊದಲ ಕಂತಿನ ಹಣ ಬಿಡುಗಡೆಗೆ ಅನುವಾಗುವಂತೆ, ರಾಜ್ಯ ಅನುಷ್ಠಾನ ಸಂಸ್ಥೆಯು ಕನಿಷ್ಠ 25 ಕೋಟಿ ರೂ. ಗಳನ್ನು ಭೌತಿಕ ಮೂಲಸೌಕರ್ಯಗಳಿಗಾಗಿ ವಿನಿಯೋಗಿಸುವ ಪ್ರಕ್ರಿಯೆಗೆ ಚಾಲನೆ ನೀಡಲು ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸಲಾಯಿತು ಎಂದೂ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.**

# 50 ಸಾವಿರ ಕೋಟಿ ರೂ. ಮೌಲ್ಯದ ಅರಣ್ಯಭೂಮಿ ವಶಕ್ಕೆ ಕಾನೂನು ಹೋರಾಟ: ಸಚಿವ ಈಶ್ವರ ಖಂಡ್ರೆ ಸ್ಪಷ್ಟನೆ

**ಬೆಂಗಳೂರು, ಮೇ 22:** ತುಡುವೆ ಜೇನು ಮತ್ತು ಮಲೆನಾಡಿನ ಮರಗಂತಿ ಕಪ್ಪೆಯನ್ನು ಅನುಕ್ರಮವಾಗಿ ರಾಜ್ಯ ಕೀಟ ಮತ್ತು ರಾಜ್ಯ ಉಭಯಜೀವಿ ಎಂದು ಅಧಿಕೃತವಾಗಿ ಘೋಷಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ವಿಶ್ವ ಜೀವವೈವಿಧ್ಯ ದಿನದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜೀವವೈವಿಧ್ಯದ ರಕ್ಷಣೆಯ ಮಹತ್ವವನ್ನು ಸಾರಲು ಹಲವು ದೇಶಗಳು ತನ್ನದೇ ಆದ ರಾಷ್ಟ್ರೀಯ ಪಕ್ಷಿ, ರಾಷ್ಟ್ರೀಯ ಪ್ರಾಣಿ ಮತ್ತು ರಾಷ್ಟ್ರೀಯ ವೃಕ್ಷವನ್ನು ಘೋಷಿಸುತ್ತವೆ. ರಾಜ್ಯ ಸರ್ಕಾರ ಕೂಡ ಶ್ರೀಗಂಧವನ್ನು ತನ್ನ ರಾಜ್ಯ ವೃಕ್ಷವೆಂದು, ಆನೆಯನ್ನು ರಾಜ್ಯ ಪ್ರಾಣಿ ಎಂದು ಹಾಗೂ ನಿಲಕಂಠ ಪಕ್ಷಿಯನ್ನು ರಾಜ್ಯಪಕ್ಷಿ ಎಂದು ಘೋಷಿಸಿದೆ, ಇದರ ಜೊತೆಗೆ ಹಳದಿ ಕೆಂಪು ಬಣ್ಣದ ರೆಕ್ಕೆಯ ದೊಡ್ಡಚಿಟ್ಟೆಯನ್ನು ರಾಜ್ಯಚಿಟ್ಟೆ ಎಂದು ಘೋಷಣೆ ಮಾಡಿದೆ ಎಂದು ತಿಳಿಸಿದರು.

ಎಚ್.ಎಂ.ಟಿ., ಭಾರತೀಯ ವಾಯುಪಡೆ, ಖಾಸಗಿ ರಬ್ಬರ್ ತೋಟ ಕಂಪನಿಗಳ ವಶದಲ್ಲಿರುವ ಸುಮಾರು 50 ಸಾವಿರ ಕೋಟಿ ರೂ.ಗೆ ಹೆಚ್ಚು ಬೆಲೆಬಾಳುವ ಅರಣ್ಯಭೂಮಿಯನ್ನು ಮರಳಿ ಪಡೆದು, ಹಸಿರು ಹೊದಿಕೆ ರಕ್ಷಿಸಲು, ಅರಣ್ಯ ಸಂವರ್ಧನೆ ಮಾಡಲು ರಾಜ್ಯ ಸರ್ಕಾರ ನ್ಯಾಯಾಲಯದಲ್ಲಿ ಹೋರಾಟ ನಡೆಸುತ್ತಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

ಪರಿಸರ ಸಮತೋಲನ ಕಾಪಾಡಲು ಜೀವವೈವಿಧ್ಯದ ರಕ್ಷಣೆ ಅತ್ಯಂತ ಮಹತ್ವದ್ದಾಗಿದ್ದು, ಇದನ್ನು ಮನಗಂಡು ರಾಜ್ಯ ಸರ್ಕಾರ ಬೆಂಗಳೂರು ಹೆಸರುಘಟ್ಟ ಕೆರೆಯ ಸುತ್ತಮುತ್ತಲಿನ 5678 ಎಕರೆ ಪ್ರದೇಶವನ್ನು ಗ್ರೇಟರ್ ಹೆಸರುಘಟ್ಟ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿದೆ. ಇದರ ಜೊತೆಗೆ ಬೆಂಗಳೂರು ಉತ್ತರ ತಾಲೂಕು ಯಲಹಂಕ ಬಳಿಯ ಮಾದಪ್ಪನ ಹಳ್ಳಿಯಲ್ಲಿ 153 ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಬೃಹತ್ ಜೈವಿಕ ಉದ್ಯಾನ ಅಭಿವೃದ್ಧಿಗೆ ಕ್ರಮ ವಹಿಸಲಾಗಿದೆ, 250 ಕೋಟಿ ರೂ. ವೆಚ್ಚದ ಈ ಉದ್ಯಾನಕ್ಕೆ ಮುಖ್ಯಮಂತ್ರಿಗಳು ಮೊದಲ ಹಂತದ ಕಾಮಗಾರಿಗೆ 50 ಕೋಟಿ ರೂ. ಹಂಚಿಕೆ ಮಾಡಿದ್ದಾರೆ ಎಂದರು. ಮುಂದಿನ ಪೀಳಿಗೆ ನಮ್ಮನ್ನು ಶಪಿಸಬಾರದು ಎಂದರೆ,ನಾವು ಆರೋಗ್ಯಪೂರ್ಣ ಪ್ರಕೃತಿ ಪರಿಸರವನ್ನು ಬಿಟ್ಟು ಹೋಗಬೇಕು, ಇದಕ್ಕಾಗಿ ಅರಣ್ಯ, ವನ್ಯಜೀವಿ ಸಂರಕ್ಷಣೆ ಮಾಡಬೇಕು ಎಂದು ಈಶ್ವರ ಖಂಡ್ರೆ ಹೇಳಿದರು. ವನ್ಯಜೀವಿ– ಮಾನವ ಸಂಘರ್ಷವನ್ನು ತಡೆಗಟ್ಟುವುದು ಸರ್ಕಾರದ ಆದ್ಯತೆಯಾಗಿದೆ. ದುಬಾರೆಯಲ್ಲಿ ಇತ್ತೀಚೆಗೆ ನಡೆದ ದುರ್ಘಟನೆ ಅತ್ಯಂತ ಆಘಾತಕಾರಿ. ರಾಜ್ಯ ಕಂಡು ಕೇಳರಿಯದಂತಹ ಘಟನೆಗಳು ನಡೆಯುತ್ತಿದ್ದು, ಮಾನವ–ವನ್ಯಜೀವಿ ಸಂಘರ್ಷ ಹೆಚ್ಚಳಕ್ಕೆ ಆನೆಗಳ ಕಾರಿಡಾರ್ ವಿಭಜನೆ, ಹುಲಿಗಳ ಪಥದಲ್ಲಿನ ಬದಲಾವಣೆ, ಹೆಚ್ಚುತ್ತಿರುವ ವನ್ಯಮೃಗಗಳ ಸಂಖ್ಯೆ ಹಾಗೂ ಕ್ಷೀಣಿಸುತ್ತಿರುವ ಅರಣ್ಯ ಕಾರಣವಾಗಿದೆ ಎಂದರು.

ಹೀಗಾಗಿಯೇ ಸರ್ಕಾರ ಅರಣ್ಯ ಒತ್ತುವರಿ ತೆರವಿಗೆ ಕಠಿಣ ಕ್ರಮಗಳನ್ನು ಕೈಗೊಂಡಿದ್ದು, ಕಳೆದ 3 ವರ್ಷಗಳಲ್ಲಿ ಸುಮಾರು 12204 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವುಗೊಳಿಸಲಾಗಿದೆ. ಯಾವುದೇ ಹೊಸ ಒತ್ತುವರಿಗೆ ಅವಕಾಶ ನೀಡದಂತೆ ಸೂಚಿಸಲಾಗಿದೆ ಎಂದರು.

ಆನೆ, ಹುಲಿ ಕಾರಿಡಾರ್ ವಿಭಜನೆ ಆಗಿರುವ ಕಡೆಯಲ್ಲಿ ಕಾರಿಡಾರ್ ಮರು ಸ್ಥಾಪನೆ ಕುರಿತಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ, 3 ವರ್ಷದಲ್ಲಿ ರಾಜ್ಯದಾದ್ಯಂತ 11 ಕೋಟಿ ಸಸಿಗಳನ್ನು ನೆಟ್ಟು ಪೋಷಿಸಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

### ಐದು ಪಾರಂಪರಿಕ ಜೀವವೈವಿಧ್ಯದ ತಾಣ ಘೋಷಣೆ



**ದೇವನಹಳ್ಳಿ ಬಳಿಯ ನಲ್ಲೂರು ಹುಣಸೇತೋಪು, ಬೆಂಗಳೂರಿನ ಗಾಂಧಿಕೃಷಿ ವಿಜ್ಞಾನ ಕೇಂದ್ರ ಪರಿಸರ, ಚಿಕ್ಕಮಗಳೂರು ಹೊಗರೆಖಾನ್, ಸಾಗರ ತಾಲೂಕಿನ ಅಂಬರಗುಡ್ಡ ಮತ್ತು ವಿಜಯಪುರ, ಮಮದಾಪುರದ ಸಸ್ಯಕಾಶಿಯನ್ನು ಶ್ರೀಸಿದ್ಧೇಶ್ವರ ಸ್ವಾಮೀಜಿ ಪಾರಂಪರಿಕ ಜೀವವೈವಿಧ್ಯ ತಾಣ ಎಂದು ಘೋಷಣೆ ಮಾಡಲಾಗಿದೆ, ಇದರ ಜೊತೆಗೆ ದೇಶದ ಪ್ರಥಮ ವನ್ಯಜೀವಿಧಾಮ ಅಪ್ಸರಕೊಂಡ ಮುಗಳಿಯ ಘೋಷಣೆ ಮಾಡಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.**

# ಜಾಹೀರಾತು ನೀತಿ ಪತ್ರಿಕೆ ನಡೆಸುವವರ ಕಾಳಜಿ ಹೊಂದಿದೆ: ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್

**ಬೆಂಗಳೂರು ಮೇ 22:** ಮಾಧ್ಯಮ ಸಲಹೆಗಾರ ಹೊಣೆಗಾರಿಕೆ ಸವಾಲಿನದ್ದು. ಸದಾ ಎಚ್ಚರದ ಸ್ಥಿತಿಯಲ್ಲಿ ಗಮನಿಸಬೇಕಾಗುತ್ತದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಬಳಿಕ "ಮಾಧ್ಯಮ ಸಂವಾದ"ದಲ್ಲಿ ಮಾತನಾಡಿ, ಮಾಧ್ಯಮ ಸಲಹೆಗಾರ ಹುದ್ದೆ ಪ್ರತಿದಿನ ಸವಾಲಿನದ್ದು. ಬೆಳಗ್ಗೆ ಎದ್ದು ಪತ್ರಿಕೆಗಳನ್ನು ತಿರುವಿ ಹಾಕುವವರೆಗೂ ದುಗುಡ ಇದ್ದೇ ಇರುತ್ತದೆ. ಈ ಸವಾಲುಗಳನ್ನು ಪ್ರತಿದಿನ ನಿರ್ವಹಿಸುತ್ತಿದ್ದೇನೆ ಎನ್ನುವ ಸಮಾಧಾನ ಕೂಡ ಇದೆ. ಆದರೆ, ನನಗೆ ಒದಗಿ ಬಂದಿರುವ ಹೊಣೆಗಾರಿಕೆ ಬಗ್ಗೆ ನನಗೆ ಯಾವತ್ತೂ ಭ್ರಮನಿರಸನ ಆಗಿಲ್ಲ ಎಂದರು.

ಇವತ್ತಿನವರೆಗೂ ಮುಖ್ಯಮಂತ್ರಿಗಳು ಒಂದು ದಿನ ಕೂಡ, " ತಮ್ಮ ವಿರುದ್ಧ ಇಂಥಾ ಚಾನಲ್‌ನಲ್ಲಿ ಸುದ್ದಿ ಬಂದಿದೆ. ನೋಡು" ಎನ್ನುವ ಒಂದು ಮಾತನ್ನೂ ಹೇಳಿಲ್ಲ. ಮಾಧ್ಯಮ ಸ್ವಾತಂತ್ರ್ಯಕ್ಕೆ ಮುಖ್ಯಮಂತ್ರಿಗಳು ಯಾವತ್ತೂ ಧಕ್ಕೆ ಆಗದಂತೆ ನೋಡಿಕೊಂಡಿದ್ದಾರೆ ಎಂದರು.

ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್‌ಪಾಸ್ ನೀಡಲು ವಿಧಿಸಿರುವ ಕಠಿಣವಾದ ಎರಡು ಷರತ್ತುಗಳನ್ನು ಸಡಿಲಗೊಳಿಸಲು ಸಭೆ ಮಾಡಿ ತೀರ್ಮಾನಿಸಲಾಗಿದೆ. ಇದರಿಂದ ಆರು ಸಾವಿರಕ್ಕೂ ಹೆಚ್ಚಿನ ಪತ್ರಕರ್ತರಿಗೆ ಸವಲತ್ತು ಸಿಗುವ ಸಾಧ್ಯತೆಗಳಿವೆ ಎಂದರು. ಮಾಧ್ಯಮ ಸಂಸ್ಥೆಗಳು, ಪತ್ರಕರ್ತರ ಸಂಘಟನೆಗಳು ಮತ್ತು ಪತ್ರಕರ್ತ ಸಮುದಾಯದ ಒತ್ತಡದಿಂದಲೇ ರಾಜ್ಯದಲ್ಲಿ ಜಾಹಿರಾತು ನೀತಿ ತರಲಾಗಿದೆ. ವೃತ್ತಿಪರವಾಗಿ ಕಷ್ಟಪಟ್ಟು ಪತ್ರಿಕೆ ಮಾಡುವವರಿಗೆ ನೆರವಾಗಬೇಕು ಎನ್ನುವ ಕಾಳಜಿ ಜಾಹಿರಾತು ನೀತಿಯ ಹಿಂದಿದೆ. ಜಾಹಿರಾತಿ ದರ ಪರಿಷ್ಕರಣೆ ಕೂಡ ಚರ್ಚೆಯಲ್ಲಿದೆ ಎಂದರು.



### ಸ್ಥಳೀಯ ಪತ್ರಿಕೆಗಳೇ ಸಿಎಂಗೆ ಆದ್ಯತೆ

**ಸ್ಥಳೀಯ ಪತ್ರಿಕೆಗಳು ಮುಖ್ಯಮಂತ್ರಿಗಳ ಮೊದಲ ಆದ್ಯತೆಯಾಗಿದೆ. ಸ್ಥಳೀಯ ಮತ್ತು ಸಣ್ಣ ಪತ್ರಿಕೆಗಳಿಗೆ ಜಾಹಿರಾತಿನಲ್ಲಿ ತೊಂದರೆ ಆಗಬಾರದು ಎನ್ನುವ ನಿಲುವು ಮುಖ್ಯಮಂತ್ರಿಗಳದ್ದೂ ಆಗಿದೆ, ನನ್ನದೂ ಆಗಿದೆ ಎಂದು ಕೆ.ವಿ. ಪ್ರಭಾಕರ್ ತಿಳಿಸಿದರು. ತಮಗೆ ಸಿಗುವ ಸಾರ್ವಜನಿಕ ಸನ್ಮಾನಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೋಲಾರದ ಪತ್ರಕರ್ತರು ಮತ್ತು ರಾಜ್ಯದ ಪತ್ರಕರ್ತ ಸಮುದಾಯಕ್ಕೆ ಅರ್ಪಿಸಿದ ಕೆ.ವಿ.ಪ್ರಭಾಕರ್ ಅವರು, ಇದಕ್ಕಾಗಿ ಕೃತಜ್ಞತೆ ಸಲ್ಲಿಸಿದರು. ಓದಿದ ಶಾಲೆಗೆ ನೆರವಾಗಿದ್ದು ಸಮಾಧಾನ ತಂದಿದೆ. ಪತ್ರಕರ್ತ ಸಮುದಾಯಕ್ಕೆ, ಪತ್ರಿಕಾ ವಿತರಕ ಸಮುದಾಯಕ್ಕೆ ನೆರವಾಗುವ ಜೊತೆಗೆ ನೂರಾರು ರೀತಿಯ ನೆರವು ಸರ್ಕಾರದಿಂದ ಒದಗಿಸಲಾಗಿದೆ ಎಂದರು. ಅಧ್ಯಕ್ಷ ಶಿವಾನಂದ ತಗಡೂರು, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಷಾ ಖಾನುಂ, ರಾಜ್ಯ ಪದಾಧಿಕಾರಿಗಳಾದ ಸೋಮಶೇಖರ್ ಕೆರಗೋಡು, ವಾಸುದೇವ ಹೊಳ್ಳ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.**

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 23 2026, ಶನಿವಾರ

## ಒಳಪುಟಗಳಲ್ಲಿ

ಎರಡು ನೂತನ ವೇಗದೂತ ಸೇವೆಗೆ ಸಚಿವ ರಾಮಲಿಂಗಾರೆಡ್ಡಿ ಚಾಲನೆ- ಬೆಂಗಳೂರು ಹೊರವಲಯ ಪ್ರಯಾಣಿಕರಿಗೆ ಬಿಎಂಟಿಸಿಯಿಂದ ಮತ್ತೊಂದು ಕೊಡುಗೆ - ಪು.5

ಜೂ.1ರಂದು ಕೆಪಿಎಸ್ ಶಾಲೆಗಳ ಉದ್ಘಾಟನೆ: ಕಾರ್ಯಕ್ರಮದ ವೇದಿಕೆ ಕಾಮಗಾರಿ ವೀಕ್ಷಿಸಿದ ಸಚಿವ ಮಧು ಬಂಗಾರಪ್ಪ - ಪು.6

ವಚನಾನಂದ ಸ್ವಾಮೀಜಿ ಜಾಮೀನು ರದ್ದುಗೊಳಿಸುವಂತೆ ಕೋರ್ಟ್‌ಗೆ ಹರಿಹರ ಪೊಲೀಸರ ಮನವಿ - ಪು.7

# ಆಳಂದ ಲಾಡ್ಲೆ ಮಶಾಕ್ ದರ್ಗಾ ಗಲಭೆ ಸೇರಿ 52 ಕ್ರಿಮಿನಲ್ ಪ್ರಕರಣ ವಾಪಸ್

## ಕಾವೇರಿ, ಕನ್ನಡಪರ ಕಳಸಾ-ಬಂಡೂರಿ ಹೋರಾಟಗಾರರ ವಿರುದ್ಧ ಮೊಕದ್ದಮೆ ಹಿಂಪಡೆಯಲು ಸಂಪುಟಸಭೆ ನಿರ್ಧಾರ

**ಬೆಂಗಳೂರು, ಮೇ 22: ಕಲಬುರಗಿ ಜಿಲ್ಲೆಯ ಆಳಂದದ ವಿವಾದಿತ ಲಾಡ್ಲೆ ಮಶಾಕ್ ದರ್ಗಾ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲಾಗಿದ್ದ ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯಲು ಕರ್ನಾಟಕ ಸರ್ಕಾರ ಅಧಿಕೃತವಾಗಿ ಒಪ್ಪಿಗೆ ನೀಡಿದೆ.**

ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಕಲಬುರಗಿಯ ಆಳಂದದ ಲಾಡ್ಲೆ ಮಶಾಕ್ ದರ್ಗಾ ಗಲಾಟೆ ಪ್ರಕರಣ ವಾಪಸ್ ಪಡೆದಿದೆ. ವಿಧಾನಸಭಾ ಸಭಾಧ್ಯಕ್ಷ ಯು.ಟಿ. ಖಾದರ್ ಅವರ ಲಿಖಿತ ಶಿಫಾರಸಿನ ಮೇರೆಗೆ ಸರ್ಕಾರ ಈ ನಿರ್ಧಾರ ಕೈಗೊಂಡಿದ್ದು, ಇದು ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿದೆ. 2022ರ ಮಹಾಶಿವರಾತ್ರಿಯಂದು ದರ್ಗಾ ಆವರಣದಲ್ಲಿರುವ ರಾಘವ ಚೈತನ್ಯ ಶಿವಲಿಂಗದ ಪೂಜೆ ವೇಳೆ ಭಾರಿ ಕೋಮುಗಲಭೆ ನಡೆದಿತ್ತು. ಈ ವೇಳೆ ಕಲ್ಲುತೂರಾಟ, ಪೊಲೀಸರ ಮೇಲಿನ ಹಲ್ಲೆ ಮತ್ತು ಸಾರ್ವಜನಿಕ ಆಸ್ತಿ ಪಾಸ್ತಿ ಹಾನಿಯಾಗಿತ್ತು. ಈ ಸಂಬಂಧ ದಾಖಲಾಗಿದ್ದ ಒಟ್ಟು 13 ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂಪಡೆದಿದೆ. ಇದರಂತೆ ಗಲಭೆಯಲ್ಲಿ ಭಾಗಿಯಾಗಿದ್ದವರ ಮೇಲಿನ ಕೇಸ್‌ಗಳನ್ನು ಕೈಬಿಟ್ಟಿರುವುದಕ್ಕೆ ಹಿಂದೂ ಸಂಘಟನೆಗಳು ಹಾಗೂ ವಿರೋಧ ಪಕ್ಷಗಳು ತೀವ್ರ ಆಕ್ರೋಶ ಹೊರಹಾಕಿದ್ದು, ಸರ್ಕಾರದ ವಿರುದ್ಧ ಪ್ರತಿಭಟನೆಯ ಎಚ್ಚರಿಕೆ ನೀಡಿವೆ. ಇದಲ್ಲದೆ, ಕನ್ನಡಪರ ಹೋರಾಟಗಾರರ ವಿರುದ್ಧವು ಸೇರಿದಂತೆ 52 ಕ್ರಿಮಿನಲ್ ಪ್ರಕರಣ ಹಿಂಪಡೆಯಲು ಸಚಿವ ಸಂಪುಟ ತೀರ್ಮಾನಿಸಿದೆ.

ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ವಿರುದ್ಧದ 10 ಪ್ರಕರಣಗಳು, ಕಾವೇರಿ ಹೋರಾಟಗಾರರ ವಿರುದ್ಧದ ಪ್ರಕರಣಗಳು, ಕನ್ನಡಪರ ಹೋರಾಟ, ಕಳಸಾ–ಬಂಡೂರಿ ಯೋಜನೆ ಹೋರಾಟಕ್ಕೆ ಸಂಬಂಧಿಸಿದ ಪ್ರಕರಣಗಳು ಸೇರಿದಂತೆ ರೈತರು ಹಾಗೂ ದಲಿತ ಹೋರಾಟಗಾರರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನೂ ಹಿಂಪಡೆಯಲು ಸರ್ಕಾರ ನಿರ್ಧಾರ ಕೈಗೊಂಡಿದೆ.

## ಗಲಭೆಕೋರರ ಹಿತಾಸಕ್ತಿಗೆ ಒತ್ತು: ಪ್ರಹ್ಲಾದ್ ಜೋಶಿ



■ ತುಷ್ಟೀಕರಣಕ್ಕಾಗಿ ಸಂವಿಧಾನ, ಕಾನೂನನ್ನೇ ಬಲಿಕೊಡುತ್ತಿದೆ ಕಾಂಗ್ರೆಸ್ ಎಂದು ಕಿಡಿ

**ನವದೆಹಲಿ, ಮೇ22:** ಕರ್ನಾಟಕ ಕಾಂಗ್ರೆಸ್ ಸರ್ಕಾರ ಕನ್ನಡಪರ ಹೋರಾಟಗಾರರ ಪ್ರಕರಣಗಳನ್ನು ಮುಂದಿಟ್ಟುಕೊಂಡು ಕೋಮು ಗಲಭೆಕೋರರ ಖುಲಾಸೆಗೆ ಮುಂದಾಗಿದ್ದು, ತುಷ್ಟೀಕರಣಕ್ಕಾಗಿ ಶ್ರೇಷ್ಠ ಸಂವಿಧಾನ ಮತ್ತು ದೇಶದ ಕಾನೂನನ್ನೇ ಬಲಿ ಕೊಡುತ್ತಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕಿಡಿ ಕಾರಿದ್ದಾರೆ.

ರಾಜ್ಯದಲ್ಲಿ ಪ್ರತಿಭಟನೆ–ಗಲಭೆ ಮೇಲಿನ 52 ಕ್ರಿಮಿನಲ್ ಪ್ರಕರಣ ಹಿಂಪಡೆಯಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದ್ದು, ಇದು ಕನ್ನಡ ಪರ ಹೋರಾಟಗಾರರ ಮೇಲಿನ ಕಾಳಜಿಗಿಂತ ಮುಸ್ಲಿಂ ಗಲಭೆಕೋರರ ಮೇಲಿನ ಹಿತಾಸಕ್ತಿಗಾಗಿ ಎಂದು ಆರೋಪಿಸಿದ್ದಾರೆ.

ಕಲಬುರಗಿ ಜಿಲ್ಲೆ ಆಳಂದ ಮಾತ್ರವಲ್ಲದೆ, ಹುಬ್ಬಳ್ಳಿ ಗಲಭೆ ಪ್ರಕರಣದಲ್ಲೂ ಆರೋಪಿಗಳ ಮೇಲಿನ ಕ್ರಿಮಿನಲ್ ಕೇಸ್ ಹಿಂಪಡೆದ ಕಾಂಗ್ರೆಸ್ ದೇಶಕ್ಕೆ ದೊಡ್ಡ ಗಂಡಾಂತರವಾಗಿ ಪರಿಣಮಿಸಿದೆ. ಆಳಂದ ಕೋಮುಗಲಭೆಯಲ್ಲಿ 100ಕ್ಕೂ ಹೆಚ್ಚು ಆರೋಪಿಗಳ ಮೇಲಿದ್ದ ಕ್ರಿಮಿನಲ್ ಕೇಸ್‌ಗಳನ್ನು ಹಿಂಪಡೆದಿರುವುದು ಅತ್ಯಂತ ಖಂಡನೀಯ. ಕೋಮುಗಲಭೆ ಸೃಷ್ಟಿಸಿ ಪೊಲೀಸರ ಮೇಲೇ ಮಾರಣಾಂತಿಕ ಹಲ್ಲೆ ನಡೆಸಿದ್ದ ಗುಂಪಿನ ಮೇಲಿನ ಕ್ರಿಮಿನಲ್ ಕೇಸ್ ಹಿಂಪಡೆದ ಕಾಂಗ್ರೆಸ್ ಸರ್ಕಾರದ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣ ಎಲ್ಲೆಮೀರಿದೆ ಎಂದು ಹರಿಹಾಯ್ದಿದ್ದಾರೆ.

ಕೋಮು ಗಲಭೆ ಸೃಷ್ಟಿಸಿದ್ದ ಉದ್ರಿಕ್ತ ಮುಸ್ಲಿಂ ಯುವಕರ ಗುಂಪು ಧಾರ್ಮಿಕ ಘೋಷಣೆ ಕೂಗುತ್ತ ಪೊಲೀಸರ ಮೇಲೇ ಮಾರಕಾಸ್ತ್ರ ಬೀಸಿದ್ದು, ಪರಿಣಾಮ DSP ಮತ್ತು ಪೇದೆ ತೀವ್ರ ಗಾಯಗೊಂಡಿದ್ದರು. ಇದ್ಯಾವುದನ್ನೂ ಲೆಕ್ಕಿಸದೆ ಕೋಮು ಗಲಭೆಕೋರರನ್ನೂ ಬಿಡುಗಡೆ ಮಾಡಿರುವುದು ಓಲೈಕೆ ಪರಮಾವಧಿ ಎಂದು ಕಿಡಿಕಾರಿದ್ದಾರೆ.

ಇದನ್ನೆಲ್ಲಾ ನೋಡಿದರೆ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಕಾನೂನು ರಕ್ಷಕರಿಗೇ ರಕ್ಷಣೆ ಇಲ್ಲದಾಗಿದೆ ಎಂಬುದು ಸ್ಪಷ್ಟ. ಗಲಭೆಕೋರರನ್ನು ಸರ್ಕಾರ ಸನ್ಮಾನದ ರೀತಿಯಲ್ಲಿ ಬಿಡುಗಡೆ ಮಾಡುತ್ತಿರುವುದು ನಿಜಕ್ಕೂ ದುರಂತ ಎಂದು ಖಂಡಿಸಿದ್ದಾರೆ. ರೈತರು, ಕನ್ನಡಪರ ಹೋರಾಟಗಾರರ ಪ್ರತಿಭಟನೆ ಪ್ರಕರಣಗಳ ಜೊತೆ ಈ ಗಲಭೆಕೋರರ ಕೇಸ್‌ಗಳನ್ನೂ ಸೇರಿಸಿ ಹಿಂಪಡೆದು ಜನರ ಕಣ್ಣಿಗೆ ಮಣ್ಣೆರಚಲು ಯತ್ನಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಸಾರ್ವಜನಿಕರ ರಕ್ಷಣೆಗಿಂತ ರಾಹುಲ್ ಗಾಂಧಿ ಮತ್ತು ಗಲಭೆಕೋರರ ಓಲೈಕೆಯೇ ಮುಖ್ಯವಾಯಿತೇ ಎಂದು ಪ್ರಶ್ನಿಸಿರುವ ಜೋಶಿ, ಇದು ತುಷ್ಟೀಕರಣದ ಪರಮಾವಧಿ. ಕರ್ತವ್ಯನಿರತ ಪೊಲೀಸರಿಗೇ ರಕ್ಷಣೆ ಇಲ್ಲದಿದ್ದರೆ ಹೇಗೆ. ಇನ್ನು, ರಾಜ್ಯದ ಕಾನೂನು ಸುವ್ಯವಸ್ಥೆ ಗತಿಯೇನು ಎಂದು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

## ಉಮರ್ ಖಾಲಿದ್‌ಗೆ 3 ದಿನ ಮಧ್ಯಂತರ ಜಾಮೀನು ನೀಡಿದ ದೆಹಲಿ ಹೈಕೋರ್ಟ್




**ನವದೆಹಲಿ, ಮೇ 22:** 2020ರ ಈಶಾನ್ಯ ದೆಹಲಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದ ಯುಎಪಿಎ ಅಡಿಯಲ್ಲಿ ದಾಖಲಾಗಿರುವ ಪಿತೂರಿ ಪ್ರಕರಣದ ಆರೋಪಿ ಉಮರ್ ಖಾಲಿದ್‌ಗೆ ದೆಹಲಿ ಹೈಕೋರ್ಟ್ ಮೂರು ದಿನಗಳ ಮಧ್ಯಂತರ ಜಾಮೀನು ಮಂಜೂರು ಮಾಡಿದೆ. ನ್ಯಾಯಮೂರ್ತಿಗಳಾದ ಪ್ರತಿಭಾ ಎಂ. ಸಿಂಗ್ ಮತ್ತು ಮಧು ಜೈನ್ ಅವರನ್ನು ಒಳಗೊಂಡ ವಿಭಾಗೀಯ ಪೀಠವು, ಕಠಿಣ ಷರತ್ತುಗಳ ಮೇರೆಗೆ ಜೂನ್ 1ರಿಂದ ಜೂನ್ 3ರವರೆಗೆ ಖಾಲಿದ್ ಅವರನ್ನು ಬಿಡುಗಡೆ ಮಾಡುವಂತೆ ಆದೇಶಿಸಿತು. ತಮ್ಮ ದಿವಂಗತ ಚಿಕ್ಕಪ್ಪನ 40 ದಿನದ ಕಾರ್ಯಕ್ರಮದಲ್ಲಿ ಭಾಗವಹಿಸಲು ಹಾಗೂ ಜೂನ್ 2ರಂದು ನಡೆಯಲಿರುವ ತಾಯಿಯ ಶಸ್ತ್ರಚಿಕಿತ್ಸೆಯ ವೇಳೆ ಅವರೊಂದಿಗೆ ಇರಲು ಅವಕಾಶ ನೀಡುವಂತೆ ಕೋರಿ ಖಾಲಿದ್ 15 ದಿನಗಳ ಮಧ್ಯಂತರ ಜಾಮೀನು ಅರ್ಜಿ ಸಲ್ಲಿಸಿದ್ದರು. ಮೇ 19ರಂದು ವಿಚಾರಣಾ ನ್ಯಾಯಾಲಯ ಮಧ್ಯಂತರ ಜಾಮೀನು ನಿರಾಕರಿಸಿದ್ದರಿಂದ, ಅದರ ವಿರುದ್ಧ ಖಾಲಿದ್ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.



ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಭಾರತ–ಸೈಪ್ರಸ್ ನಡುವೆ ಶುಕ್ರವಾರ ಏರ್ಪಟ್ಟ ಒಪ್ಪಂದಗಳಿಗೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡೌಲೈಡ್ಸ್ ಸಾಕ್ಷಿಯಾದರು. ಎರಡೂ ದೇಶಗಳ ವಿದೇಶಾಂಗ ಸಚಿವರು ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡರು.

## ರಾಜ್ಯಸಭೆ 24 ಸ್ಥಾನಗಳಿಗೆ ಜೂ.21ರಿಂದ ಜುಲೈ 19ರ ನಡುವೆ ಚುನಾವಣೆ



ಕರ್ನಾಟಕದ ನಾಲ್ಕು ಸ್ಥಾನಗಳು ಸೇರಿ 10 ರಾಜ್ಯಗಳಲ್ಲಿ ಖಾಲಿಯಾಗಲಿರುವ 24 ಸ್ಥಾನ

ನಾಮಪತ್ರ ಸಲ್ಲಿಕೆಗೆ ಜೂ.8 ಕೊನೆಯ ದಿನ

**ನವದೆಹಲಿ, ಮೇ 22:** ಕರ್ನಾಟಕದ ನಾಲ್ಕು ಸ್ಥಾನಗಳು ಸೇರಿದಂತೆ 10 ರಾಜ್ಯಗಳಲ್ಲಿ ಖಾಲಿಯಾಗಲಿರುವ 24 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ನಿಗದಿಯಾಗಿದೆ. ಜೂನ್ 18 ರಂದು ಚುನಾವಣೆ ನಡೆಸಲು ಕೇಂದ್ರ ಚುನಾವಣಾ ಆಯೋಗ ದಿನಾಂಕ ನಿಗಧಿ ಮಾಡಿದೆ.


10 ರಾಜ್ಯಗಳ ಪ್ರಸ್ತುತ ಸಂಸದರು ಜೂನ್ 21 ರಿಂದ ಜುಲೈ 19 ರವರೆಗೆ ವಿಭಿನ್ನ ದಿನಾಂಕಗಳಲ್ಲಿ ರಾಜ್ಯಸಭೆಯಿಂದ ನಿವೃತ್ತರಾಗುತ್ತಿದ್ದಾರೆ. ಆಂಧ್ರಪ್ರದೇಶ, ಗುಜರಾತ್ ಮತ್ತು ಕರ್ನಾಟಕದಲ್ಲಿ ತಲಾ ನಾಲ್ಕು ಸ್ಥಾನಗಳಿಗೆ, ಮಧ್ಯಪ್ರದೇಶ ಮತ್ತು ರಾಜಸ್ಥಾನದಲ್ಲಿ ತಲಾ ಮೂರು ಸ್ಥಾನಗಳಿಗೆ, ಜಾರ್ಖಂಡ್‌ನಲ್ಲಿ ಎರಡು ಸ್ಥಾನಗಳಿಗೆ ಮತ್ತು ಮಣಿಪುರ, ಮೇಘಾಲಯ, ಅರುಣಾಚಲ ಪ್ರದೇಶ ಮತ್ತು ಮಿಜೋರಾಂನಲ್ಲಿ ತಲಾ ಒಂದು ಸ್ಥಾನಕ್ಕೆ ರಾಜ್ಯಸಭೆ ಚುನಾವಣೆ ನಡೆಯಲಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ದಿಗ್ವಿಜಯ್ ಸಿಂಗ್ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರಂತಹ ಪ್ರಮುಖ ನಾಯಕರು ರಾಜ್ಯಸಭೆಯಿಂದ ನಿವೃತ್ತರಾಗಲಿದ್ದಾರೆ. ರಾಜಸ್ಥಾನದ ರಾಜೇಂದ್ರ ಗೆಹ್ಲೋತ್, ನೀರಜ್ ಡಾಂಗಿ ಮತ್ತು ರವನೀತ್ ಸಿಂಗ್ ಅವರ ಸ್ಥಾನಗಳು ಸಹ ಖಾಲಿಯಾಗಲಿವೆ.

ಚುನಾವಣಾ ವೇಳಾಪಟ್ಟಿಯ ಪ್ರಕಾರ, ಜೂನ್ 1 ರಂದು ಅಧಿಸೂಚನೆ ಹೊರಡಿಸಲಾಗುವುದು. ಜೂನ್ 8 ರವರೆಗೆ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಲು ಕಡೆಯ ದಿನಾಂಕವಾಗಿದೆ. ಜೂನ್ 9 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ ಮತ್ತು ಜೂನ್ 11 ರವರೆಗೆ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಲು ಕಡೆಯ ದಿನಾಂಕವಾಗಿದ್ದು ಜೂನ್ 18 ರಂದು ಮತದಾನ ನಡೆಯಲಿದೆ.

ಕರ್ನಾಟಕದಲ್ಲಿ ಎಚ್‌ಡಿ ದೇವೇಗೌಡ, ಮಲ್ಲಿಕಾರ್ಜುನ್ ಖರ್ಗೆ, ಈರಣ್ಣ ಕಡಾಡಿ, ನಾರಾಯಣ ಕೊರಗಪ್ಪ ಅವರ ಸ್ಥಾನಗಳು ಖಾಲಿಯಾಗುತ್ತಿದೆ. ನಾಲ್ಕು ಸ್ಥಾನಗಳ ಪೈಕಿ ಈ ಬಾರಿ ಕಾಂಗ್ರೆಸ್‌ಗೆ ಮೂರು ಸ್ಥಾನಗಳು ಲಭಿಸಲಿದ್ದು ಈ ಪೈಕಿ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಮುಂದುವರಿಸಬಹುದು ಬಾಕಿ ಉಳಿದ ಎರಡು ಸ್ಥಾನಗಳಿಗೆ ಪೈಪೋಟಿ ಹೆಚ್ಚಲಿದೆ ಬಿಜೆಪಿ ಪಾಲಿನ ಒಂದು ಸ್ಥಾನದ ಮೇಲೆ ಜೆಡಿಎಸ್ ಕಣ್ಣಿಟ್ಟಿದ್ದು ಎಚ್‌ಡಿ ದೇವೇಗೌಡರನ್ನು ಮುಂದುವರಿಸುವ ಲೆಕ್ಕಚಾರ ನಡೆದಿದೆ. ಕಳೆದ ಬಾರಿ ಕಾಂಗ್ರೆಸ್ ಜೆಡಿಎಸ್ ಮೈತ್ರಿಯಲ್ಲಿ ದೇವೇಗೌಡರು ರಾಜ್ಯಸಭಾ ಸದಸ್ಯರಾಗಿದ್ದರು.

## ಮೇ 29ರೊಳಗೆ 30–35 ಸಚಿವ ಸ್ಥಾನ ಆಕಾಂಕ್ಷಿ ಶಾಸಕರು ದೆಹಲಿಗೆ




■ ಈ ಬಾರಿ "ಮಾಡು ಇಲ್ಲವೆ ಮಡಿ" ಎಂಬ ಪರಿಸ್ಥಿತಿ ನಮ್ಮದು: ಬೇಳೂರು ಗೋಪಾಲಕೃಷ್ಣ

**ಶಿವಮೊಗ್ಗ, ಮೇ 22:** ಕಾಂಗ್ರೆಸ್ ಪಕ್ಷದ ಕನಿಷ್ಠ 30–35 ಶಾಸಕರು ಮೇ 28 ಅಥವಾ 29ರೊಳಗೆ ದೆಹಲಿಗೆ ತೆರಳಲಿದ್ದು, ಈ ಪೈಕಿ 20 ಜನರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಸಚಿವ ಸಂಪುಟ ಪುನರ್ ರಚನೆ ಮಾಡುವಂತೆ ಪಕ್ಷದ ನಾಯಕತ್ವದ ಮೇಲೆ ಒತ್ತಡ ಹೇರಲಿದ್ದಾರೆ ಎಂದು ಕಾಂಗ್ರೆಸ್ ಶಾಸಕ ಬೇಳೂರು ಗೋಪಾಲಕೃಷ್ಣ ಹೇಳಿದ್ದಾರೆ.

ಮಾಧ್ಯಮಗಳ ಜತೆ ಶುಕ್ರವಾರ ಮಾತನಾಡಿದ ಅವರು, ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಪೂರೈಸಿದ 15 ದಿನಗಳ ಒಳಗೆ ಸಂಪುಟ್ ಪುನಾರಚನೆ ನಡೆಯಬೇಕೆಂದು ಒತ್ತಾಯಿಸಿದರು. ಸಂಪುಟ ಪುನರ್ ರಚನೆ ನಡೆಯದಿದ್ದರೆ ಮತ್ತು ಹೊಸಮುಖಗಳನ್ನು ಸಂಪುಟಕ್ಕೆ ಸೇರಿಸಿಕೊಳ್ಳದಿದ್ದರೆ ಬೇರೆಯದೇ ನಿರ್ಧಾರ ತೆಗೆದುಕೊಳ್ಳಬಹುದು ಎಂದು ಎಚ್ಚರಿಕೆ ನೀಡಿದರು.

ಕೇರಳ ಮುಖ್ಯಮಂತ್ರಿ ಆಯ್ಕೆಯಾದ ನಂತರ ದೆಹಲಿಗೆ ಹೋಗಲು ಮೊದಲೇ ನಿರ್ಧರಿಸಲಾಗಿತ್ತು. ಈಗ ಮುಖ್ಯಮಂತ್ರಿ ಆಯ್ಕೆಯಾದ ನಂತರ, ನಾವು ಎರಡು–ಮೂರು ದಿನಗಳಲ್ಲಿ ಸಭೆ ಸೇರುತ್ತೇವೆ ಮತ್ತು ನಮ್ಮಲ್ಲಿ 30–35 ಶಾಸಕರು ದೆಹಲಿಗೆ ಹೋಗುತ್ತೇವೆ. ಈ ಬಾರಿ, ಸರ್ಕಾರ ಅಧಿಕಾರ ವಹಿಸಿಕೊಂಡು ಮೂರು ವರ್ಷ ಕಳೆದಿವೆ, ಆದರೆ ಇನ್ನೂ ಯಾರೂ ಸಚಿವ ಸಂಪುಟ ಪುನರ್ ರಚನೆ ಬಗ್ಗೆ ಚರ್ಚಿಸುತ್ತಿಲ್ಲವಾದ್ದರಿಂದ ಮಾಡು ಇಲ್ಲವೇ ಮಡಿ ಪರಿಸ್ಥಿತಿ ನಮ್ಮದು ಎಂದು ಹೇಳಿದರು.

## ಅಲ್ಪಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿ ಅಗ್ನಿ–1 ಯಶಸ್ವಿ ಪರೀಕ್ಷೆ




■ ಸಂಪೂರ್ಣ ಸ್ವದೇಶಿ ನಿರ್ಮಿತ

■ ಡಿಆರ್‌ಡಿಒದಿಂದ ಅಭಿವೃದ್ಧಿ

■ 12 ಮೀ. ಉದ್ದ, 12 ಟನ್ ತೂಕ, 1 ಟನ್ ಸ್ಫೋಟಕ ಹೊತ್ತೊಯ್ಯುವ ಸಾಮರ್ಥ್ಯ

ನವದೆಹಲಿ, ಮೇ 22: ದೇಶದ ರಕ್ಷಣಾ ವಲಯದಲ್ಲಿ ಮತ್ತೊಂದು ಐತಿಹಾಸಿಕ ಮೈಲಿಗಲ್ಲು ಸಾಧಿಸಲಾಗಿದೆ. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ (ಡಿಆರ್‌ಡಿಒ) ಶುಕ್ರವಾರ ಸಂಜೆ ಒಡಿಶಾದ ಕರಾವಳಿಯ ಡಾ. ಎಪಿಜೆ ಅಬ್ದುಲ್ ಕಲಾಂ ದ್ವೀಪದಲ್ಲಿ ಅಗ್ನಿ–1 ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಯಶಸ್ವಿಯಾಗಿ ಪರೀಕ್ಷಿಸಿದೆ.

ಅಗ್ನಿ–1 ಡಿಆರ್‌ಡಿಒ ಅಭಿವೃದ್ಧಿಪಡಿಸಿದ ಸಂಪೂರ್ಣವಾಗಿ ಸ್ವದೇಶಿ ನಿರ್ಮಿತ ಅಲ್ಪಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿ ಆಗಿದೆ. ಈ ಕ್ಷಿಪಣಿ ಯುದ್ಧತಂತ್ರದ ಪರಮಾಣು ಶಸ್ತ್ರಾಸ್ತ್ರಗಳು ಮತ್ತು ಸಾಂಪ್ರದಾಯಿಕ ಸಿಡಿತಲೆಗಳನ್ನು ಸಾಗಿಸುವ ಸಾಮರ್ಥ್ಯವನ್ನು ಹೊಂದಿದೆ.

ಭಾರತೀಯ ಸಶಸ್ತ್ರ ಪಡೆಗಳ ಕಾರ್ಯತಂತ್ರದ ಪಡೆಗಳ ಕಮಾಂಡ್ ಈ ಕ್ಷಿಪಣಿಯನ್ನು ನಿರ್ವಹಿಸುತ್ತದೆ.

**ಕ್ಷಿಪಣಿ ವೈಶಿಷ್ಟ್ಯಗಳು:** ಈ ಕ್ಷಿಪಣಿ 700 ಕಿಲೋಮೀಟರ್‌ಗಳಿಂದ 1,200 ಕಿಲೋಮೀಟರ್‌ಗಳವರೆಗಿನ ಶತ್ರು ಗುರಿಗಳನ್ನು ನಿಖರತೆಯೊಂದಿಗೆ ನಾಶಪಡಿಸುತ್ತದೆ. ಕ್ಷಿಪಣಿಯ ಒಟ್ಟು ಉದ್ದ 12 ಮೀಟರ್ ಮತ್ತು ಸುಮಾರು 12 ಟನ್ ತೂಕವಿದೆ. ಇದು 1,000 ಕಿಲೋಗ್ರಾಂಗಳಷ್ಟು (1 ಟನ್) ಪರಮಾಣು ಅಥವಾ ಸಾಂಪ್ರದಾಯಿಕ ಸ್ಫೋಟಕಗಳನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದೆ. ಕ್ಷಿಪಣಿ ಘನ ಪ್ರೊಪೆಲ್ಲಂಟ್ ಅನ್ನು ಬಳಸುತ್ತದೆ. ಇದು ಬಹಳ ಕಡಿಮೆ ಸಮಯದಲ್ಲಿ ತ್ವರಿತ ಉಡಾವಣೆಗೆ ಸಿದ್ಧವಾಗಲು ಅನುವು ಮಾಡಿಕೊಡುತ್ತದೆ.

## ಎಸ್‌ಐಆರ್ ಮೂಲಕ ಬಡವರ ಮತ ಕಸಿಯಲು ಸಂಚು: ಡಿ.ಕೆ.ಶಿ ಆಕ್ರೋಶ



**ಬೆಂಗಳೂರು, ಮೇ 22:** ಎಸ್‌ಐಆರ್ ಮೂಲಕ ಬಡವರ ಮತಗಳನ್ನು ತೆಗೆಯಲು ಸಂಚು ಮಾಡಲಾಗಿದೆ. ನಾವುಗಳು ಬಹಳ ಎಚ್ಚರಿಕೆಯಿಂದ ಇರಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ಹೇಳಿದ್ದೇನೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಶಾಸಕರು, ಬಿಎಲ್‌ಎಗಳಿಗೆ ಎಸ್‌ಐಆರ್ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದೇವೆ. ಆದ ಕಾರಣಕ್ಕೆ ಸಭೆ ಕರೆಯಲಾಗುತ್ತಿದೆ. ಏಕೆಂದರೆ ಈಗಾಗಲೇ ದಿನಾಂಕ ಘೋಷಣೆಯಾಗಿದೆ. ಆದ ಕಾರಣಕ್ಕೆ ಜಾಗೃತಿಗೆ ಮುಂದಾಗಿದ್ದೇವೆ. ಪ್ರತಿಯೊಬ್ಬರೂ ಅರ್ಜಿ ಸಲ್ಲಿಸಬೇಕಿದೆ. ಇಲ್ಲದಿದ್ದರೆ ನಾಗರಿಕರು ತಮ್ಮ ಮತವನ್ನು ಕಳೆದುಕೊಳ್ಳುತ್ತಾರೆ. ಬೇರೆ ರಾಜ್ಯಗಳಲ್ಲಿ ಇದೇ ರೀತಿ ಆಗಿದ್ದನ್ನು ನೋಡಿದ್ದೇವೆ. ಮತದಾನದ ಹಕ್ಕು ಹೋದರೆ ಪಿಂಚಣಿ, ಗೃಹಲಕ್ಷ್ಮಿ ಯೋಜನೆ ಸೇರಿದಂತೆ ಅನೇಕ ಅನುಕೂಲಗಳಿಂದ ನಾಗರಿಕರು ವಂಚಿತರಾಗುತ್ತಾರೆ. ಅದಕ್ಕೆ ನಾವು ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದೇವೆ ಎಂದರು.

ಮುಸ್ಲಿಮರ ಮೇಲಿನ ಮೊಕದ್ದಮೆಗಳನ್ನು ಹಿಂಪಡೆಯುವ ತೀರ್ಮಾನದ ಬಗ್ಗೆ ಕೇಳಿದಾಗ, ರಾಜಕೀಯ ಪ್ರೇರಿತ ಪ್ರಕರಣಗಳನ್ನು ಹಿಂಪಡೆಯಲಾಗಿದೆ. ಜೊತೆಗೆ ರೈತರ ಮೇಲಿನ, ಕನ್ನಡ ಚಳುವಳಿಗಾರರ ಮೇಲಿನ ಪ್ರಕರಣಗಳನ್ನು ವಾಪಸ್ ಪಡೆದಿದ್ದು ಇದರಲ್ಲಿ ತಪ್ಪೇನಿಲ್ಲ ಎಂದು ತಿಳಿಸಿದರು.

# ಭಾರತಕ್ಕೆ ಎಷ್ಟು ಪ್ರಮಾಣದ ಇಂಧನ ಬೇಕಿದ್ದರೂ ಮಾರಾಟಕ್ಕೆ ಸಿದ್ಧ: ಅಮೆರಿಕ ಸ್ಪಷ್ಟನೆ

**ವಾಷಿಂಗ್ಟನ್, ಮೇ 22:** ಭಾರತಕ್ಕೆ ಎಷ್ಟು ಪ್ರಮಾಣದ ಇಂಧನ ಬೇಕಿದ್ದರೂ ಅಷ್ಟನ್ನೂ ಮಾರಾಟ ಮಾಡಲು ಅಮೆರಿಕಾ ಸಿದ್ಧವಿದೆ ಎಂದು ಅಮೆರಿಕಾದ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೋ ತಿಳಿಸಿದ್ದಾರೆ.

ಶನಿವಾರದಿಂದ (ಮೇ 23) ಆರಂಭವಾಗಲಿರುವ ನಾಲ್ಕು ದಿನಗಳ ಭಾರತ ಪ್ರವಾಸಕ್ಕೂ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಭಾರತ ಎಷ್ಟು ಇಂಧನ ಖರೀದಿಸಲು ಸಿದ್ಧವಿದೆಯೋ, ಅಷ್ಟನ್ನೂ ಮಾರಾಟ ಮಾಡಲು ಬಯಸುತ್ತೇವೆ. ಭಾರತದ ಇಂಧನ ಅಗತ್ಯದಲ್ಲಿ ಅಮೆರಿಕಾ ದೊಡ್ಡ ಪಾಲನ್ನು ಹೊಂದಬೇಕೆಂಬುದು ನಮ್ಮ ಆಶಯ" ಎಂದು ತಿಳಿಸಿದ್ದಾರೆ.

ಇದೇ ವೇಳೆ ಭಾರತವನ್ನು ಅತ್ಯಂತ ಮಹತ್ವದ "ಮಿತ್ರ ಮತ್ತು ಬಲಿಷ್ಠ ಪಾಲುದಾರ" ಎಂದು ಬಣ್ಣಿಸಿರುವ ರೂಬಿಯೋ, ಅಮೆರಿಕಾ ಮತ್ತು ಭಾರತ ಈಗಾಗಲೇ ಇಂಧನ ಸಹಕಾರವನ್ನು ವಿಸ್ತರಿಸುವ ಕುರಿತು ಉನ್ನತ ಮಟ್ಟದ ಮಾತುಕತೆಗಳಲ್ಲಿ ತೊಡಗಿವೆ. ಭಾರತವು ಅಗಾಧವಾದ ಆರ್ಥಿಕ ಸಾಮರ್ಥ್ಯವನ್ನು ಹೊಂದಿದ್ದು, ಮುಂಬರುವ ದಿನಗಳಲ್ಲಿ ಕೋಟ್ಯಂತರ ಜನರನ್ನು ಬಡತನದಿಂದ ಮುಕ್ತಗೊಳಿಸಿ ಬೃಹತ್ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲು ಸಜ್ಜಾಗಿದೆ. ಈ ಬೆಳವಣಿಗೆಯಲ್ಲಿ ಅಮೆರಿಕಾ ಭಾಗಿಯಾಗಲು ಹೆಚ್ಚು ಆಸಕ್ತಿ ಹೊಂದಿದೆ ಎಂದಿದ್ದಾರೆ.

ಮೇ 26 ರಂದು ನವದೆಹಲಿಯಲ್ಲಿ ನಡೆಯಲಿರುವ ಕ್ವಾಡ್ ವಿದೇಶಾಂಗ ಸಚಿವರ ಸಭೆಯು ಅತ್ಯಂತ ಮಹತ್ವದ್ದಾಗಿದೆ. ತಾವು ವಿದೇಶಾಂಗ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿಕೊಂಡ ತಕ್ಷಣ ನಡೆಸಿದ ಮೊದಲ ಸಭೆಯೇ ಕ್ವಾಡ್ ದೇಶಗಳೊಂದಿಗಾಗಿತ್ತು ಎಂದು ಸ್ಮರಿಸಿದ ಅವರು, ಈ ಪ್ರವಾಸದಲ್ಲಿ ಕ್ವಾಡ್ ಮೈತ್ರಿಕೂಟವನ್ನು ಮತ್ತಷ್ಟು ಬಲಪಡಿಸಲು ಚರ್ಚಿಸಲಾಗುವುದು ಎಂದಿದ್ದಾರೆ.




ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರು ಭಾರತಕ್ಕೆ ಭೇಟಿ ನೀಡುತ್ತಿರುವುದು ಉಭಯ ದೇಶಗಳ ಆರ್ಥಿಕ ಮತ್ತು ರಾಜತಾಂತ್ರಿಕ ಬಾಂಧವ್ಯದಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ.

ಕ್ವಾಡ್ ಸಭೆಯಲ್ಲಿ ಭಾಗವಹಿಸಲಿರುವ ಮಾರ್ಕೋ ರೂಬಿಯೋ ಅವರು ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರೊಂದಿಗೆ ದ್ವಿಪಕ್ಷೀಯ ಬಾಂಧವ್ಯ, ರಕ್ಷಣೆ ಮತ್ತು ಇಂಧನ ಒಪ್ಪಂದಗಳ ಕುರಿತು ಪ್ರಮುಖ ಮಾತುಕತೆ ನಡೆಸಲಿದ್ದಾರೆ. ನಾಲ್ಕು ದಿನಗಳ ಪ್ರವಾಸದಲ್ಲಿ ಮಾರ್ಕೊ ರುಬಿಯೊ ಅವರು ನವದೆಹಲಿ, ಕೋಲ್ಕತಾ, ಆಗ್ರಾ ಮತ್ತು ಜೈಪುರ ನಗರಗಳಿಗೆ ಭೇಟಿ ನೀಡಲಿದ್ದಾರೆ.

ಇದು ವಿದೇಶಾಂಗ ಕಾರ್ಯದರ್ಶಿಯಾಗಿ ಅವರ ಮೊದಲ ಭಾರತ ಭೇಟಿಯಾಗಿದ್ದು, ದ್ವಿಪಕ್ಷೀಯ ಮಾತುಕತೆಗಳಲ್ಲಿ ಇಂಧನ ಭದ್ರತೆಯ ಜೊತೆಗೆ ರಕ್ಷಣೆ, ಜಾಗತಿಕ ವ್ಯಾಪಾರ ಮತ್ತು ಪ್ರಾದೇಶಿಕ ಭದ್ರತೆಯೂ ಪ್ರಮುಖ ಆದ್ಯತೆ ಪಡೆಯಲಿವೆ.

ಈ ಭೇಟಿಯ ಮತ್ತೊಂದು ವಿಶೇಷವೆಂದರೆ, ಭಾರತಕ್ಕೆ ತೈಲ ಪೂರೈಸುವ ನಿಟ್ಟಿನಲ್ಲಿ ವೆನೆಜುವೆಲಾ ದೇಶವನ್ನು ಬಳಸಿಕೊಳ್ಳುವ ಹೊಸ ಸಾಧ್ಯತೆಗಳ ಬಗ್ಗೆಯೂ ಚರ್ಚೆಗಳು ನಡೆಯಲಿವೆ. ಇದೇ ಸಮಯದಲ್ಲಿ ವೆನೆಜುವೆಲಾದ ಅಧ್ಯಕ್ಷರು ಕೂಡ ಭಾರತಕ್ಕೆ ಬರಲಿರುವುದು ಈ ಮಾತುಕತೆಗೆ ಹೆಚ್ಚಿನ ಪ್ರಾಮುಖ್ಯ ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್, ಆಸ್ಟ್ರೇಲಿಯಾದ ಪೆನ್ನಿ ವಾಂಗ್ ಮತ್ತು ಜಪಾನಿನ ಮೊಟೆಗಿ ತೊಶಿಮಿತ್ಸು ಅವರೊಂದಿಗೆ ನಡೆಸುವ ಈ ಸಭೆಯು ಇಂಡೋ– ಪೆಸಿಫಿಕ್ ವಲಯದ ಸುರಕ್ಷತೆ ಹಾಗೂ ಮುಕ್ತ ನೌಕಾಯಾನದ ಕುರಿತು ಗಮನ ಹರಿಸಲಿದೆ.

ಸ್ವೀಡನ್‌ನಲ್ಲಿ ನಡೆದ ನ್ಯಾಟೋ ವಿದೇಶಾಂಗ ಮಂತ್ರಿಗಳ ಸಭೆಯ ಬೆನ್ನಲ್ಲೇ ರುಬಿಯೊ ಅವರು ಭಾರತಕ್ಕೆ ಆಗಮಿಸುತ್ತಿರುವುದು, ವಾಷಿಂಗ್ಟನ್ ಪಾಲಿಗೆ ನವದೆಹಲಿ ಎಷ್ಟು ಪ್ರಮುಖವಾದ ಪಾಲುದಾರ ದೇಶ ಎಂಬುದನ್ನು ಎತ್ತಿ ತೋರಿಸುತ್ತದೆ.

# ಬಂಗಾಳ ಎಸ್‌ಐಆರ್: ಮೇ 14ರವರೆಗೆ 4,000 ಹೆಸರು ಮತಪಟ್ಟಿಗೆ ಮರುಸೇರ್ಪಡೆ

**ಕೋಲ್ಕತ್ತಾ, ಮೇ 22:** ಪಶ್ಚಿಮ ಬಂಗಾಳದಲ್ಲಿ ಚುನಾವಣೆಗೂ ಮುನ್ನ ನಡೆದ ಎಸ್‌ಐಆರ್‌ನಲ್ಲಿ ಬರೋಬ್ಬರಿ 91 ಲಕ್ಷ ಮತದಾರರನ್ನು ಮತಪಟ್ಟಿಯಿಂದ ಹೊರಹಾಕಲಾಗಿದೆ. ಈ ಪೈಕಿ, 27 ಲಕ್ಷ ಮತದಾರರು ಆಕ್ಷೇಪಣಾ ಅರ್ಜಿ ಸಲ್ಲಿಸಿದ್ದಾರೆ. ಆ ಅರ್ಜಿಗಳನ್ನು ವಿಚಾರಣೆ ನಡೆಸಿ, ವಿಲೇವಾರಿ ಮಾಡಲು 19 ಅಪೀಲು ನ್ಯಾಯಮಂಡಳಿಗಳನ್ನು ಸುಪ್ರೀಂ ಕೋರ್ಟ್ ಸ್ಥಾಪಿಸಿದೆ. ಮಾರ್ಚ್ 20ರಂದು ಸ್ಥಾಪನೆಯಾದ ಈ ನ್ಯಾಯಮಂಡಳಿಗಳಲ್ಲಿ 12 ಮಂಡಳಿಗಳು ಅಂದಿನಿಂದ ಮೇ 14ರವರೆಗೆ ಕೇವಲ 6,581 (ಶೇ.0.26 ರಷ್ಟು) ಅರ್ಜಿಗಳನ್ನು ಮಾತ್ರ ವಿಲೇವಾರಿ ಮಾಡಿವೆ. ಅದರಲ್ಲಿ, 4,043 ಹೆಸರುಗಳನ್ನು ಮರಳಿ ಮತಪಟ್ಟಿಗೆ ಸೇರಿಸಲಾಗಿದ್ದು, ಉಳಿದ 1,267 ಮಂದಿಯ ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಎಂದು ವರದಿಯಾಗಿದೆ.

ರಾಜ್ಯದ 23 ಜಿಲ್ಲೆಗಳ ಪೈಕಿ 17 ಜಿಲ್ಲೆಗಳನ್ನು ಒಳಗೊಂಡಿರುವ ಈ 12 ನ್ಯಾಯಮಂಡಳಿಗಳಿಂದ ಅಧಿಕೃತ ದತ್ತಾಂಶಗಳನ್ನು ಪಡೆದುಕೊಂಡಿರುವುದಾಗಿ ವರದಿಯಾಗಿದೆ. ಅದರಂತೆ; ತಿರಸ್ಕರಿಸಲಾದ 1,271 ಮೇಲ್ಮನವಿಗಳ ಸ್ಥಿತಿಗತಿಯ ಬಗ್ಗೆ ದತ್ತಾಂಶದಲ್ಲಿ ಉಲ್ಲೇಖವಿಲ್ಲ. ಆದರೂ, ಕೋಲ್ಕತ್ತಾ ಮತ್ತು ದೆಹಲಿಯ ಚುನಾವಣಾ ಆಯೋಗದ ಮೂಲಗಳು ತಿಳಿಸಿರುವಂತೆ, ಇವುಗಳಲ್ಲಿ ಕೆಲವು ಮೇಲ್ಮನವಿಗಳನ್ನು ಚುನಾವಣೆಗೆ ಮೊದಲು ಪ್ರಕಟಿಸಲಾದ ಪೂರಕ ಪಟ್ಟಿಗಳ ಮೂಲಕ ಈಗಾಗಲೇ ಮತದಾರರ ಪಟ್ಟಿಗೆ ಸೇರ್ಪಡೆಗೊಂಡವರೇ ಸಲ್ಲಿಸಿದ್ದಾರೆ. ಹೀಗಾಗಿ, ಅವರ ಮೇಲ್ಮನವಿಗಳ ಮೇಲೆ ಯಾವುದೇ ಪ್ರತ್ಯೇಕ ಕ್ರಮದ ಅಗತ್ಯವಿರಲಿಲ್ಲ ಎಂದು ತಿಳಿಸಿದೆ.

ವಿಲೇವಾರಿಯಾದ ಒಟ್ಟು ಪ್ರಕರಣಗಳ ಪೈಕಿ 27%ರಷ್ಟು (ಅಂದರೆ 1,777) ಮೇಲ್ಮನವಿಗಳು ಕೋಲ್ಕತ್ತಾ ಉತ್ತರ ಮತ್ತು ಕೋಲ್ಕತ್ತಾ ದಕ್ಷಿಣ ಜಿಲ್ಲೆಗಳಿಗೆ ಸಂಬಂಧಿಸಿದ್ದಾಗಿದ್ದವು. ಇವುಗಳನ್ನು ಕಲ್ಕತ್ತಾ ಹೈಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಟಿ. ಎಸ್. ಶಿವಜ್ಞಾನಂ ನೇತೃತ್ವದ ನ್ಯಾಯಮಂಡಳಿ ನಿರ್ವಹಿಸುತ್ತಿತ್ತು. ಅವರು ಮೇ 7 ರಂದು ವೈಯಕ್ತಿಕ ಕಾರಣಗಳನ್ನು ನೀಡಿ ರಾಜೀನಾಮೆ ನೀಡಿದ್ದರು. ಸದ್ಯ ಈ ಎರಡು ಜಿಲ್ಲೆಗಳಲ್ಲಿ ಒಟ್ಟು 51,234 ಮೇಲ್ಮನವಿಗಳು ಬಾಕಿ ಉಳಿದಿವೆ.



ಅತಿಹೆಚ್ಚು ಮೇಲ್ಮನವಿ ಸಲ್ಲಿಕೆಯಾಗಿದ್ದ ಮತ್ತು ಅತಿ ಹೆಚ್ಚು ಹೆಸರುಗಳನ್ನು ಕೈಬಿಡಲಾಗಿದ್ದ ಮುರ್ಷಿದಾಬಾದ್ ಮತ್ತು ಮಾಲ್ಡಾ ಜಿಲ್ಲೆಗಳಲ್ಲಿ ಮೇ 14ರ ವೇಳೆಗೆ, 6,29,392 ಮೇಲ್ಮನವಿಗಳಿದ್ದ ಮುರ್ಷಿದಾಬಾದ್‌ನಲ್ಲಿ 112 ಮತ್ತು 5,26,215 ಮೇಲ್ಮನವಿಗಳಿದ್ದ ಮಾಲ್ಡಾದಲ್ಲಿ 185 ಪ್ರಕರಣಗಳು ಮಾತ್ರವೇ ವಿಲೇವಾರಿಯಾಗಿವೆ.

ಈ 12 ನ್ಯಾಯಮಂಡಳಿಗಳ ಮುಂದೆ 98 ಮೇಲ್ಮನವಿದಾರರು ಆನ್‌ಲೈನ್ ಮೂಲಕ ಮತ್ತು 21 ಜನರು ಆಫ್‌ಲೈನ್ ಮೂಲಕ ಹಾಜರಾಗಿದ್ದರು. ಕೇಂದ್ರ ಚುನಾವಣಾ ಆಯೋಗ ಮತ್ತು ಹಿಂದಿನ ಟಿಎಂಸಿ ಸರ್ಕಾರದ ನಡುವಿನ ಪರಸ್ಪರ ಅಪನಂಬಿಕೆಯನ್ನು ಗಮನಿಸಿದ ಸುಪ್ರೀಂ ಕೋರ್ಟ್, ಫೆಬ್ರವರಿ 20 ರಂದು ಪಶ್ಚಿಮ ಬಂಗಾಳದಲ್ಲಿ ಮತದಾರರ ಅರ್ಹತೆಯನ್ನು ನಿರ್ಧರಿಸುವ ಜವಾಬ್ದಾರಿಯನ್ನು ನ್ಯಾಯಾಂಗ ಅಧಿಕಾರಿಗಳಿಗೆ ವಹಿಸಿತ್ತು. ನ್ಯಾಯಾಲಯದ ಆದೇಶದಂತೆ ಕೋಲ್ಕತ್ತಾ ಹೈಕೋರ್ಟ್ ಈ ಕಾರ್ಯಕ್ಕಾಗಿ 700 ನ್ಯಾಯಾಂಗ ಅಧಿಕಾರಿಗಳನ್ನು ನಿಯೋಜಿಸಿತ್ತು. ಈ ಅಧಿಕಾರಿಗಳು ಎಸ್‌ಐಆರ್ ಪ್ರಕ್ರಿಯೆ ಸಂದರ್ಭದಲ್ಲಿ ಸಲ್ಲಿಕೆಯಾದ ಗುರುತಿನ ದಾಖಲೆಗಳಲ್ಲಿ ತಾರ್ಕಿಕ ವ್ಯತ್ಯಾಸಗಳನ್ನು ಹೊಂದಿದ್ದ ಕಾರಣಕ್ಕೆ ಚುನಾವಣಾ ಆಯೋಗದ ಆಲ್ಗಾರಿದಮ್ ಮೂಲಕ ಗುರುತಿಸಲ್ಪಟ್ಟ 60.06 ಲಕ್ಷ ಮತದಾರರ ಅರ್ಹತೆಯನ್ನು ಪರಿಶೀಲಿಸಿದ್ದರು. ಏಪ್ರಿಲ್ 23 ಮತ್ತು 29 ರಂದು ನಡೆದ ವಿಧಾನಸಭಾ ಚುನಾವಣೆಗೆ ಕೆಲವೇ ವಾರಗಳ ಮೊದಲು, ಅವರು ಒಟ್ಟು 27.16 ಲಕ್ಷ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಹೊರಗಿಟ್ಟಿದ್ದರು.

ನ್ಯಾಯಾಂಗ ಅಧಿಕಾರಿಗಳ ಈ ನಿರ್ಧಾರದಿಂದ ಸಂತ್ರಸ್ತರಾದವರಿಗೆ ಮೇಲ್ಮನವಿ ಸಲ್ಲಿಸಲು ಒಂದು ವ್ಯವಸ್ಥೆಯನ್ನು ಕಲ್ಪಿಸುವಂತೆ ಮಾರ್ಚ್ 10 ರಂದು ಸುಪ್ರೀಂ ಕೋರ್ಟ್ ಆದೇಶಿಸಿತು. ಕಲ್ಕತ್ತಾ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸುಜಯ್ ಪಾಲ್ ಅವರ ಶಿಫಾರಸಿನ ಮೇರೆಗೆ, ಚುನಾವಣಾ ಆಯೋಗವು ನಿವೃತ್ತ ಹೈಕೋರ್ಟ್ ನ್ಯಾಯಾಧೀಶರನ್ನು ಒಳಗೊಂಡ 19 ಮೇಲ್ಮನವಿ ನ್ಯಾಯಮಂಡಳಿಗಳನ್ನು ಮಾರ್ಚ್ 20 ರಂದು ಅಧಿಸೂಚಿಸಿತು.

ಚುನಾವಣೆ ಹತ್ತಿರವಾಗುತ್ತಿದ್ದರೂ ಈ ನ್ಯಾಯಮಂಡಳಿಗಳ ಕಾರ್ಯವೈಖರಿ ಮಂದಗತಿಯಲ್ಲಿತ್ತು. ಮತದಾನಕ್ಕೆ 48 ಗಂಟೆಗಳ ಮೊದಲು ನ್ಯಾಯಮಂಡಳಿಗಳಿಂದ ಅನುಮತಿ ಪಡೆದ ಎಲ್ಲರ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರಿಸಬೇಕು ಎಂದು ಸುಪ್ರೀಂ ಕೋರ್ಟ್ ಆದೇಶಿಸಿದ ನಂತರ, ಕೇವಲ 1,607 ಹೆಸರುಗಳನ್ನು ಮಾತ್ರವೇ ಮತಪಟ್ಟಿಗೆ ಮರುಸೇರ್ಪಡೆ ಮಾಡಲಾಗಿತ್ತು. ಇದರ ಪರಿಣಾಮವಾಗಿ, ಪಟ್ಟಿಯಿಂದ ಕೈಬಿಡಲಾದ ಉಳಿದ 27.16 ಲಕ್ಷ ಮತದಾರರು ವಿಧಾನಸಭಾ ಚುನಾವಣೆಯಲ್ಲಿ ಮತದಾನ ಮಾಡಲು ಸಾಧ್ಯವಾಗಲೇ ಇಲ್ಲ.

# 19ನೇ ರೋಜಗಾರ್ ಮೇಳದಲ್ಲಿ ಪ್ರಧಾನಿಯಿಂದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಣೆ ಇಂದು

**ನವದೆಹಲಿ, ಮೇ 22:** 19ನೇ ಆವೃತ್ತಿಯ ರೋಜಗಾರ್ ಮೇಳದಡಿಯಲ್ಲಿ, ಮೇ 23ರ ಶನಿವಾರದಂದು ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ 51,000 ಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ ಎಂದು ಸರ್ಕಾರ ಶುಕ್ರವಾರ ತಿಳಿಸಿದೆ. ಅಧಿಕೃತ ಹೇಳಿಕೆಯ ಪ್ರಕಾರ, ಪ್ರಧಾನಿ ಬೆಳಗ್ಗೆ 11 ಗಂಟೆಗೆ ವೀಡಿಯೊ ಸಂವಾದದ ಮೂಲಕ ಮೂಲಕ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ ಮತ್ತು ಈ ಸಂದರ್ಭದಲ್ಲಿ ಹೊಸದಾಗಿ ಸೇರ್ಪಡೆಗೊಂಡವರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರದ ಉದ್ಯೋಗ ಸೃಷ್ಟಿ ಅಭಿಯಾನದ ಭಾಗವಾಗಿ ಪ್ರಾರಂಭಿಸಲಾದ ರೋಜ್‌ಗರ್ ಮೇಳವು ದೇಶಾದ್ಯಂತ ಯುವಕರಿಗೆ ಉದ್ಯೋಗಾವಕಾಶಗಳನ್ನು ಒದಗಿಸುವ ಮತ್ತು ಸರ್ಕಾರಿ ಇಲಾಖೆಗಳಲ್ಲಿ ನೇಮಕಾತಿಯನ್ನು



ತ್ವರಿತಗೊಳಿಸುವ ಗುರಿಯನ್ನು ಹೊಂದಿದೆ. ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡುವ ಪ್ರಧಾನ ಮಂತ್ರಿಯವರ ಬದ್ಧತೆಯನ್ನು ಈ ಉಪಕ್ರಮವು ಪ್ರತಿಬಿಂಬಿಸುತ್ತದೆ ಎಂದು ಸರ್ಕಾರ ಹೇಳಿದೆ. "ಉದ್ಯೋಗ ಸೃಷ್ಟಿಯ ಬಗ್ಗೆ ಪ್ರಧಾನ ಮಂತ್ರಿಯವರ ದೃಷ್ಟಿಕೋನವನ್ನು ವಾಸ್ತವಕ್ಕೆ ಭಾಷಾಂತರಿಸುವ ಗುರಿಯನ್ನು ಹೊಂದಿರುವ ಪ್ರಮುಖ ಉಪಕ್ರಮ ರೋಜ್‌ಗರ್ ಮೇಳವಾಗಿದೆ" ಎಂದು ಹೇಳಿಕೆ ತಿಳಿಸಿದೆ. 19ನೇ ರೋಜಗಾರ್ ಮೇಳವನ್ನು ದೇಶಾದ್ಯಂತ 47 ಸ್ಥಳಗಳಲ್ಲಿ ಆಯೋಜಿಸಲಾಗುವುದು, ಭಾರತದ ವಿವಿಧ ರಾಜ್ಯಗಳು ಮತ್ತು ಪ್ರದೇಶಗಳಿಂದ ಆಯ್ಕೆಯಾದ ಅಭ್ಯರ್ಥಿಗಳು ಭಾರತ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರುತ್ತಾರೆ. ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳು ರೈಲ್ವೆ ಸಚಿವಾಲಯ, ಗೃಹ ವ್ಯವಹಾರಗಳ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಹಣಕಾಸು ಸೇವೆಗಳ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆ ಸೇರಿದಂತೆ ಹಲವಾರು ಪ್ರಮುಖ ಇಲಾಖೆಗಳಲ್ಲಿ ಹುದ್ದೆಗಳನ್ನು ಅಲಂಕರಿಸಲಿದ್ದಾರೆ. ಈ ಉಪಕ್ರಮವನ್ನು ಪ್ರಾರಂಭಿಸಿದಾಗಿನಿಂದ, ದೇಶಾದ್ಯಂತ ನಡೆಸಲಾದ 18 ರೋಜಗಾರ್ ಮೇಳಗಳ ಮೂಲಕ 12 ಲಕ್ಷ ನೇಮಕಾತಿ ಪತ್ರಗಳನ್ನು ನೀಡಲಾಗಿದೆ ಎಂದು ಸರ್ಕಾರ ತಿಳಿಸಿದೆ.

# ಶೇ.100ರಷ್ಟು ದೋಷರಹಿತ ನೀಟ್–ಯುಜಿ ಪರೀಕ್ಷೆ

**ನವದೆಹಲಿ, ಮೇ 22:** ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಬಳಿಕ ಕೇಂದ್ರ ಸರ್ಕಾರ ಕಠಿಣ ನಿರ್ಧಾರ ತೆಗೆದುಕೊಂಡಿದ್ದು, ಶೇ.100ರಷ್ಟು ದೋಷರಹಿತ ಮರು ಪರೀಕ್ಷೆ ನಡೆಸಲಾಗುತ್ತದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ.

ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ಕುರಿತು ಸರ್ಕಾರದ ಕ್ರಮವನ್ನು ಸಮರ್ಥಿಸಕೊಂಡಿರುವ ಅವರು, ಪರೀಕ್ಷೆಯಲ್ಲಿ ಅಕ್ರಮಗಳು ಪತ್ತೆಯಾದ ಬಳಿಕ ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಯಿತು ಎಂದು ಹೇಳಿದರು. ದೆಹಲಿಯಲ್ಲಿ ನಡೆದ 2026ರ ಜಾಗರಣ್ ಭಾರತ್ ಎಜುಕೇಶನ್ ಸಮ್ಮೇಳನದಲ್ಲಿ ಮಾತನಾಡಿ, ಎಜುಕೇಷನ್ ಮಾಫಿಯಾ ಕಾರಣದಿಂದ ಒಬ್ಬ ಅರ್ಹ ವಿದ್ಯಾರ್ಥಿಯೂ ತನ್ನ ವೈದ್ಯಕೀಯ ಸೀಟನ್ನು ಕಳೆದುಕೊಳ್ಳಬಾರದು ಎಂಬುದು ಸರ್ಕಾರದ ಉದ್ದೇಶವಾಗಿತ್ತು. ಜೂನ್ 21ರಂದು ನಡೆಯಲಿರುವ ನೀಟ್–ಯುಜಿ ಮರುಪರೀಕ್ಷೆಯನ್ನು ಶೇ.100 ದೋಷರಹಿತವಾಗಿ ನಡೆಸಲು ಸರ್ಕಾರ



ಬದ್ಧವಾಗಿದೆ ಎಂದು ತಿಳಿಸಿದರು.

**22 ಲಕ್ಷ ವಿದ್ಯಾರ್ಥಿಗಳಿಗೆ ಮಾನಸಿಕ ಸಂಕಟ**

ಪ್ರಶ್ನೆಪತ್ರಿಕೆ ಸೋರಿಕೆ ವಿವಾದದಿಂದ ಸುಮಾರು 22 ಲಕ್ಷ ವಿದ್ಯಾರ್ಥಿಗಳು ತೀವ್ರ ಮಾನಸಿಕ ವೇದನೆ ಅನುಭವಿಸಿದ್ದು ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಆ ಮಕ್ಕಳ ನೋವನ್ನು ಅರ್ಥಮಾಡಿಕೊಂಡು, ಅದರ ಹೊಣೆಗಾರಿಕೆಯನ್ನು ಸ್ವೀಕರಿಸಿ ನಾನು ಇಂದು ಹೇಳುತ್ತಿದ್ದೇನೆ. ನಮಗೆ ಕೆಲವು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಲೇಬೇಕಾಯಿತು. ದೋಷರಹಿತ ಮರು ಪರೀಕ್ಷೆ ನಡೆಸುತ್ತೇವೆ ಎಂದು ಹೇಳಿದರು.

**ಮೌಲ್ಯಮಾಪನ ಪ್ರಕ್ರಿಯೆ ಹಾನಿಗೊಳಗಾಗಿತ್ತು**

ಕೆಲವು ಮೌಲ್ಯಮಾಪನ ಪ್ರಕ್ರಿಯೆಗಳು ಹಾನಿಗೊಳಗಾಗಿದ್ದವು ಎಂಬ ಮಾಹಿತಿ ದೊರೆತ ಬಳಿಕ ಸರ್ಕಾರ ಪರೀಕ್ಷೆಯನ್ನು ರದ್ದುಪಡಿಸುವ ನಿರ್ಧಾರ ಕೈಗೊಳ್ಳಲಾಯಿತು. ಶಿಕ್ಷಣ ವ್ಯವಸ್ಥೆ ಮತ್ತು ಪರೀಕ್ಷಾ ಮಾಫಿಯಾದ ಅಕ್ರಮಗಳ ಸಂಚಿನಿಂದ ಒಬ್ಬ ವಿದ್ಯಾರ್ಥಿಯೂ ತನ್ನ ಹಕ್ಕಿನ ಸೀಟನ್ನು ಕಳೆದುಕೊಳ್ಳಬಾರದು ಎಂಬುದು ಸರ್ಕಾರದ ಉದ್ದೇಶವಾಗಿತ್ತು ಎಂದು ತಿಳಿಸಿದರು.

ಪ್ರಕರಣ ನಿರ್ವಹಣೆಯಲ್ಲಿ ಸರ್ಕಾರ ಎದುರಿಸುತ್ತಿರುವ ಟೀಕೆಗಳನ್ನು ಒಪ್ಪಿಕೊಂಡ ಪ್ರಧಾನ್, ವ್ಯವಸ್ಥೆಯನ್ನು ಸರಿಪಡಿಸುವುದು ಸರ್ಕಾರದ ಹೊಣೆಯಾಗಿದೆ. ನಾವು ಟೀಕೆ ಮತ್ತು ಸವಾಲುಗಳನ್ನು ಎದುರಿಸುತ್ತಿದ್ದೇವೆ. ಸಮಸ್ಯೆಯನ್ನು ನೋಡಿ ಕಣ್ಣು ಮುಚ್ಚಿಕೊಳ್ಳುವುದು ನಮ್ಮ ಕರ್ತವ್ಯವಲ್ಲ ಎಂದು ಹೇಳಿದರು.

# ಸಿಬಿಎಸ್‌ಇ ಹೊಸ ತ್ರಿಭಾಷಾ ನೀತಿಯ ವಿರುದ್ಧ ಸುಪ್ರೀಂಗೆ ಅರ್ಜಿ: ಮುಂದಿನ ವಾರ ವಿಚಾರಣೆ

**ನವದೆಹಲಿ, ಮೇ 22:** 9ನೇ ತರಗತಿಯ ವಿದ್ಯಾರ್ಥಿಗಳಿಗೆ ಮೂರು ಭಾಷೆಗಳನ್ನು ಕಡ್ಡಾಯಗೊಳಿಸುವ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯ ಹೊಸ ನೀತಿಯನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಪೋಷಕರು ಸಲ್ಲಿಸಿದ್ದ ಅರ್ಜಿಯನ್ನು ಹಿರಿಯ ವಕೀಲ ಮುಕುಲ್ ರೋಹಟಗಿ ಅವರು ಸಿಜೆಐ ಸೂರ್ಯಕಾಂತ್ ನೇತೃತ್ವದ ತ್ರಿ ಸದಸ್ಯ ಪೀಠದ ಮುಂದೆ ಪ್ರಸ್ತಾಪಿಸಿದರು.

9ನೇ ತರಗತಿಯಲ್ಲಿ ಎರಡು ಹೆಚ್ಚುವರಿ ಭಾಷೆಗಳನ್ನು ಕಲಿಯುವ ಹಠಾತ್ ಅಗತ್ಯವು 10ನೇ ತರಗತಿಯ ಬೋರ್ಡ್ ಪರೀಕ್ಷೆಗಳ ತಯಾರಿಗೆ ಅಡ್ಡಿಯಾಗುತ್ತದೆ ಮತ್ತು ವಿದ್ಯಾರ್ಥಿಗಳ ಮೇಲೆ ಅಸಮಂಜಸ ಹೊರೆಯನ್ನು ಹೇರುತ್ತದೆ ಎಂದು ರೋಹಟಗಿ ವಾದಿಸಿದರು. ಇದ್ದಕ್ಕಿದ್ದಂತೆ ಕಲಿತು 10ನೇ ತರಗತಿಯಲ್ಲಿ ಕಾಣಿಸಿಕೊಳ್ಳುವುದು ಹೇಗೆ? ಇದು ಅವ್ಯವಸ್ಥೆಯನ್ನು ಸೃಷ್ಟಿಸುತ್ತದೆ ಎಂದು ರೋಹಟಗಿ ವಾದಿಸಿದರು. ವಾದ



ಆಲಿಸಿದ ಬಳಿಕ ಪೀಠವು, ಮುಂದಿನ ವಾರ ವಿಚಾರಣೆಗೆ ಈ ವಿಷಯವನ್ನು ಪಟ್ಟಿ ಮಾಡುವುದಾಗಿ ಹೇಳಿದೆ.

ತ್ರಿಭಾಷಾ ಸೂತ್ರಕ್ಕೆ ಒತ್ತು ನೀಡುವ ರಾಷ್ಟ್ರೀಯ ಶಿಕ್ಷಣ ನೀತಿ 2020 ನೊಂದಿಗೆ ಹೊಂದಿಕೊಂಡ ವಿಶಾಲ ಬದಲಾವಣೆಯ ಭಾಗವಾಗಿದೆ. ಈ ನೀತಿಯು ವಿದ್ಯಾರ್ಥಿಗಳು ಕನಿಷ್ಠ ಎರಡು ಭಾರತೀಯ ಭಾಷೆಗಳನ್ನು ಒಳಗೊಂಡಂತೆ ಬಹು ಭಾಷೆಗಳನ್ನು ಕಲಿಯಲು ಪ್ರೋತ್ಸಾಹಿಸುತ್ತದೆ, ರಾಜ್ಯಗಳು ಮತ್ತು ಶಾಲೆಗಳಿಗೆ ಆದ್ಯತೆ ಬಿಡಲಾಗಿದೆ.


ಅಃಖಇ ವಿದ್ಯಾರ್ಥಿಗಳು 10 ನೇ ತರಗತಿಯವರೆಗೆ ಎರಡು ಭಾಷೆಗಳನ್ನು ಅಧ್ಯಯನ ಮಾಡುತ್ತಿದ್ದರು. ಈ ಭಾಷೆಗಳು ಸಾಮಾನ್ಯವಾಗಿ ಇಂಗ್ಲಿಷ್ ಮತ್ತು ಎರಡನೇ ಭಾಷೆ (ಹಿಂದಿ ಅಥವಾ ಪ್ರಾದೇಶಿಕ ಭಾಷೆಯಂತಹವು) ಆಗಿದ್ದವು. ಆದಾಗ್ಯೂ, ಹೊಸ ಚೌಕಟ್ಟು 9 ನೇ ತರಗತಿಗೆ ಪ್ರವೇಶಿಸುವ ವಿದ್ಯಾರ್ಥಿಗಳು ಹೆಚ್ಚುವರಿ ಭಾಷಾ ಘಟಕವನ್ನು ತೆಗೆದುಕೊಳ್ಳುವ ಅಗತ್ಯವನ್ನು ಹೆಚ್ಚಿಸುವ ಮೂಲಕ ಇದನ್ನು ವಿಸ್ತರಿಸುತ್ತದೆ ಎಂದು ವರದಿಯಾಗಿದೆ, ಇದು ಮಾಧ್ಯಮಿಕ ಹಂತದಲ್ಲಿ ಅಧ್ಯಯನ ಮಾಡುವ ಭಾಷೆಗಳ ಸಂಖ್ಯೆಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸುತ್ತದೆ.



ನೀಟ್ ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷೆ ರದ್ದತಿ, ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ವಿರುದ್ಧ ಲಖನೌದ ಹಜರತ್‌ಗಂಜ್ ಕ್ರಾಸಿಂಗ್‌ನಲ್ಲಿ ಸಮಾಜವಾದಿ ಪಕ್ಷದ ಕಾರ್ಯಕರ್ತರು ಶುಕ್ರವಾರ ಪ್ರತಿಭಟನೆ ನಡೆಸಿದರು.

# ಸಿಜೆಪಿ ಸ್ಥಾಪಕ ಅಭಿಜೀತ್ ಡಿಪ್ಕೆ ಬಂಧನದ ಭೀತಿಯಲ್ಲಿ ಪೋಷಕರು

**ನವದೆಹಲಿ, ಮೇ 22:** ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಸಂಚಲನ ಸೃಷ್ಟಿಸಿರುವ ಹಾಗೂ ಕೇವಲ ಕೆಲವೇ ದಿನಗಳಲ್ಲಿ 1.9 ಕೋಟಿಗೂ ಹೆಚ್ಚು ಇನ್ಸ್ಟಾಗ್ರಾಮ್ ಫಾಲೋವರ್ಗಳನ್ನು ಹೊಂದಿರುವ ವ್ಯಂಗ್ಯಾತ್ಮಕ ಡಿಜಿಟಲ್ ರಾಜಕೀಯ ಪಕ್ಷ ಕಾಕ್ರೋಚ್ ಜನತಾ ಪಾರ್ಟಿ ಸ್ಥಾಪಕ ಅಭಿಜೀತ್ ಡಿಪ್ಕೆ ಅವರ ಪೋಷಕರು ತಮ್ಮ ಮಗನ ಬಂಧನವಾಗಬಹುದು ಎಂಬ ಆತಂಕವನ್ನು ವ್ಯಕ್ತಪಡಿಸಿದ್ದಾರೆ. ಸದ್ಯದ ರಾಜಕೀಯ ಪರಿಸ್ಥಿತಿಯನ್ನು ನೋಡಿದರೆ ಆತಂಕ ಸಹಜ ಎಂದಿರುವ ಅವರು, ಮಗನಿಗೆ ರಾಜಕೀಯ ಬೇಡವೇ ಬೇಡ ಎಂದು ಆಗ್ರಹಿಸಿದ್ದಾರೆ. ಅಭಿಜೀತ್ ಅವರ ತಂದೆ ಭಗವಾನ್ ಹಾಗೂ ತಾಯಿ ಅನಿತಾ ಡಿಪ್ಕೆ



ಅವರು ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರದಲ್ಲಿ ನೆಲೆಸಿದ್ದಾರೆ. ಮರಾಠಿ ಸುದ್ದಿವಾಹಿನಿಯೊಂದಿಗೆ ಮಾತನಾಡಿದ ಅವರು, ಅಭಿಜೀತ್ ನಡೆಯನ್ನು ಕಂಡು ನಮಗೆ ನಿದ್ದೆ ಹಾರಿದೆ. ಅವನು ರಾಜಕೀಯ ಪ್ರವೇಶಿಸುವುದು ನಮಗೆ ಇಷ್ಟವಿಲ್ಲ, ಎಂದಿದ್ದಾರೆ. ಅಭಿಜೀತ್ ಅಮೆರಿಕದ ಬೋಸ್ಟನ್ ವಿಶ್ವವಿದ್ಯಾಲಯದಲ್ಲಿ ಸಾರ್ವಜನಿಕ ಸಂಪರ್ಕ ವಿಭಾಗದಲ್ಲಿ ಪದವಿ ಪಡೆದಿದ್ದು, ಈ ಹಿಂದೆ ಆಮ್ ಆದ್ಮಿ ಪಾರ್ಟಿ ಜೊತೆ ಗುರುತಿಸಿಕೊಂಡಿದ್ದರು. ಇತ್ತೀಚಿನ ರಾಜಕೀಯ ಪರಿಸ್ಥಿತಿಯನ್ನು ನೋಡಿದರೆ, ಅವರಿಗೆ ಎಷ್ಟೇ ಅನುಯಾಯಿಗಳಿದ್ದರೂ ಭಯ ಸಹಜ. ತನ್ನ ಒಂದು ಸಂದರ್ಶನದಲ್ಲಿ, ಭಾರತಕ್ಕೆ ಹಿಂದಿರುಗಿದ ಮೇಲೆ ತನ್ನ ಬಂಧನವಾಗಬಹುದು ಎಂಬ ಆತಂಕವನ್ನು ಅಭಿಜೀತ್ ಸ್ವತಃ ವ್ಯಕ್ತಪಡಿಸಿದ್ದಾನೆ. ದಿನಪತ್ರಿಕೆಗಳಲ್ಲಿ ಇಂತಹ ಘಟನೆಗಳ ಬಗ್ಗೆ ನಾವು ಓದುತ್ತಿರುತ್ತೇವೆ. ಈ ಚಿಂತೆಯಿಂದ ನನಗೆ ಕಳೆದ ಎರಡು ರಾತ್ರಿಗಳಿಂದ ನಿದ್ದೆ ಬಂದಿಲ್ಲ. ನನಗೆ ರಾಜಕೀಯ ಎಂದರೆ ಆಗಬಾರದು ಹಾಗೂ ಅದರಲ್ಲಿ ಆಸಕ್ತಿಯೂ ಇಲ್ಲ,? ಎಂದು ತಂದೆ ಭಗವಾನ್ ಡಿಪ್ಕೆ ಹೇಳಿದ್ದಾರೆ. ಸಿಜೆಪಿ ವೇದಿಕೆಯು ಮೀಮ್ಸ್‌ಗಳು, ಅನಿಮೇಷನ್ ಹಾಗೂ ಗ್ರಾಫಿಕ್ಸ್‌ಗಳ ಮೂಲಕ ರಾಜಕೀಯ ವ್ಯಂಗ್ಯ ಹಾಗೂ ವಿಮರ್ಶೆಯನ್ನು ಮಾಡುತ್ತಿದೆ. ಮುಖ್ಯವಾಗಿ ಯುವಜನರ ಸಮಸ್ಯೆಗಳಾದ ನಿರುದ್ಯೋಗ, ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಶಿಕ್ಷಣದ ಬಗ್ಗೆ ಪ್ರಣಾಳಿಕೆ ರೀತಿಯಲ್ಲಿ ಬೇಡಿಕೆಗಳನ್ನು ಮುಂದಿಟ್ಟು ಭಾರಿ ಜನಪ್ರಿಯತೆ ಗಳಿಸಿದೆ. ಇದರ ಜನಪ್ರಿಯತೆ ಹೆಚ್ಚಾದಂತೆ, ಭಾರತದಲ್ಲಿ ಸಿಜೆಪಿಯ ಎಕ್ಸ್ ಖಾತೆಯನ್ನು ಇತ್ತೀಚೆಗಷ್ಟೇ ತಡೆಹಿಡಿಯಲಾಗಿತ್ತು.

# ತಮಿಳುನಾಡು ಸಚಿವ ಸಂಪುಟ ವಿಸ್ತರಣೆ

## ಐಯುಎಂಎಲ್, ವಿಸಿಕೆಯ ತಲಾ ಒಬ್ಬ ನಾಯಕರು ಸಚಿವರಾಗಿ ಪ್ರಮಾಣವಚನ

**ಚೆನ್ನೈ, ಮೇ 22:** ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ ಸರ್ಕಾರದಲ್ಲಿ ಮತ್ತೊಮ್ಮೆ ಸಚಿವ ಸಂಪುಟ ವಿಸ್ತರಣೆಯಾಗಿದೆ. ಇಂದು ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಮತ್ತು ವಿಡುದಲೈ ಚಿರುತ್ತೈಗಲ್ ಕಚ್ಚಿ ಪಕ್ಷಗಳ ನಾಯಕರು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ಚೆನ್ನೈನ ಲೋಕಭವನದಲ್ಲಿ ನಡೆದ ಸರಳ ಸಮಾರಂಭದಲ್ಲಿ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ನಾಯಕ ಪಾಪನಾಶಂ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿರುವ ಎ.ಎಂ. ಶಾಹಜಹಾನ್, ವಿಸಿಕೆ ಪಕ್ಷದ ನಾಯಕ, ತಿಂಡಿವನಂ ಶಾಸಕ ವನ್ನಿ ಅರಸು ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಎ.ಎಂ. ಶಾಹಜಹಾನ್ ಅವರಿಗೆ ಅಲ್ಪ ಸಂಖ್ಯಾತ ಸಮುದಾಯಗಳ ಕಲ್ಯಾಣ ಖಾತೆ ನೀಡಿದ್ದು ವಕ್ಫ್ ಬೋರ್ಡ್ ಅನ್ನೂ ನೋಡಿಕೊಳ್ಳಲಿದ್ದಾರೆ ವನ್ನಿ ಅರಸು ಅವರಿಗೆ

ಸಾಮಾಜಿಕ ನ್ಯಾಯ ಖಾತೆ ನೀಡಲಾಗಿದೆ. ಇದರ ಅಡಿಯಲ್ಲಿ ಆದಿದ್ರಾವಿಡ ಕಲ್ಯಾಣ ಮತ್ತು ಹಿಲ್ ಟ್ರೈಬ್ಸ್ ವೆಲ್ಫೇರ್ ಖಾತೆಗಳು ಸೇರಿವೆ.

ಈ ವಿಸ್ತರಣೆಯೊಂದಿಗೆ ಟಿವಿಕೆ ಸರ್ಕಾರದಲ್ಲಿ ಸಹಯೋಗಿ ಪಕ್ಷಗಳ ಪಾಲು ಹೆಚ್ಚಾಗಿದೆ. ಇದಕ್ಕೂ ಮುನ್ನ ನಡೆದ ವಿಸ್ತರಣೆಯಲ್ಲಿ 23 ಮಂದಿ ಸಚಿವರನ್ನು ನೇಮಕ ಮಾಡಲಾಗಿತ್ತು. ಆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವು ಸುಮಾರು 59 ವರ್ಷಗಳ ನಂತರ ತಮಿಳುನಾಡಿನಲ್ಲಿ ಸರ್ಕಾರದಲ್ಲಿ ಮೊದಲ ಬಾರಿಗೆ ಸ್ಥಾನ ಪಡೆದುಕೊಂಡಿತ್ತು.

# ಮತ್ತೆ ಕುಸ್ತಿ ಕಣಕ್ಕೆ ಫೋಗಟ್: ಆಯ್ಕೆ ಪ್ರಕ್ರಿಯೆಯಲ್ಲಿ ಅವಕಾಶಕ್ಕೆ ಸುಪ್ರೀಂ ಆದೇಶ


**ನವದೆಹಲಿ, ಮೇ 22:** ಕುಸ್ತಿಪಟು ವಿನೇಶ್ ಫೋಗಟ್ ಅವರನ್ನು ದೇಶೀಯ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹರಲ್ಲ ಎಂದು ಘೋಷಿಸಿದ ಕುರಿತು ಭಾರತೀಯ ಕುಸ್ತಿ ಒಕ್ಕೂಟದ ಕ್ರಮಕ್ಕೆದೆಹಲಿ ಹೈಕೋರ್ಟ್ ಶುಕ್ರವಾರ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಫೋಗಟ್ ಪ್ರಕರಣವನ್ನು ಪರಿಶೀಲಿಸಲು ತಜ್ಞರ ಸಮಿತಿ ರಚಿಸುವಂತೆ ಕೇಂದ್ರ ಸರ್ಕಾರಕ್ಕೆ ನ್ಯಾಯಾಲಯ ಸೂಚಿಸಿದೆ.

ಮೇ 18ರಂದು ಏಕಸದಸ್ಯ ನ್ಯಾಯಮೂರ್ತಿ ನೀಡಿದ್ದ ಆದೇಶವನ್ನು ಪ್ರಶ್ನಿಸಿ ಫೋಗಟ್ ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಡಿ.ಕೆ. ಉಪಾಧ್ಯಾಯ ಹಾಗೂ ನ್ಯಾಯಮೂರ್ತಿ ತೇಜಸ್ ಕಾರಿಯಾ ಅವರಿದ್ದ ಪೀಠ, ಖ್ಯಾತ ಆಟಗಾರರಿಗೆ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ನೀಡುತ್ತಿದ್ದ ಹಿಂದಿನ ಪದ್ಧತಿಯಿಂದ ಡಬ್ಲ್ಯುಎಫ್ಐ ಹಿಂದೆ ಸರಿದಿರುವುದು ಬಹಳ ವಿಷಯಗಳನ್ನು ಹೇಳುತ್ತದೆ ಎಂದು ಅಭಿಪ್ರಾಯಪಟ್ಟಿದೆ. ಮಾತೃತ್ವ ವಿರಾಮದ ಬಳಿಕ ಮತ್ತೆ ಕುಸ್ತಿ ಕಣಕ್ಕೆ ಮರಳಲು ಯತ್ನಿಸುತ್ತಿರುವ ಫೋಗಟ್‌ಗೆ ಮೇ 30 ಮತ್ತು 31ರಂದು ನಡೆಯಲಿರುವ ಈ ವರ್ಷದ ಏಷ್ಯನ್ ಕ್ರೀಡಾಕೂಟ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

**ಹೈಕೋರ್ಟ್ ಅಭಿಮತ:**

ಇದಕ್ಕೂ ಮೊದಲು ಮೇ 30 ಮತ್ತು 31ರಂದು ನಡೆಯಲಿರುವ ಏಷ್ಯನ್ ಗೇಮ್ಸ್ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಫೋಗಟ್ ಗೆ ಅನುಮತಿಸಲು ಹೈಕೋರ್ಟ್ ನಿರಾಕರಿಸಿತ್ತು. ಫೋಗಟ್ ಈಗಾಗಲೇ ದೇಶೀಯ ಟೂರ್ನಿಗಳಲ್ಲಿ ಭಾಗವಹಿಸಲು ಅನರ್ಹ ಎಂದು ಘೋಷಿಸಲ್ಪಟ್ಟಿರುವುದರಿಂದ ತಾತ್ಕಾಲಿಕ ಪರಿಹಾರ ನೀಡಲು ಸಾಧ್ಯವಿಲ್ಲ ಎಂದು ಹೇಳಿತ್ತು. ಅವರು ಡಬ್ಲ್ಯುಎಫ್ಐ ಏಷ್ಯನ್ ಗೇಮ್ಸ್ ಆಯ್ಕೆ ನೀತಿ ಹಾಗೂ ಮೇ 9ರ ನೋಟಿಸ್ ಪ್ರಶ್ನಿಸಿ ಅರ್ಜಿ ಸಲ್ಲಿಸಿದ್ದರು. ಆ ನೋಟಿಸ್ ಪ್ರಕಾರ, ಜೂನ್ 26ರವರೆಗೆ ರಾಷ್ಟ್ರೀಯ ಓಪನ್ ರ್‍ಯಾಂಕಿಂಗ್ ಟೂರ್ನಿ ಸೇರಿ ಯಾವುದೇ ದೇಶೀಯ ಸ್ಪರ್ಧೆಗಳಲ್ಲಿ ಫೋಗಟ್ ಭಾಗವಹಿಸಲು ಅವಕಾಶ ಇರಲಿಲ್ಲ.

ಡಬ್ಲ್ಯುಎಫ್ಐ ಫೆಬ್ರವರಿ 25ರ ಆಯ್ಕೆ



ನೀತಿ ಮತ್ತು ಮೇ 6ರ ಸರ್ಕ್ಯುಲರ್ ಪ್ರಕಾರ, 2025ರ ಸೀನಿಯರ್ ನ್ಯಾಷನಲ್ ರೆಸ್ಲಿಂಗ್ ಚಾಂಪಿಯನ್‌ಶಿಪ್, 2026ರ ಸೀನಿಯರ್ ಫೆಡರೇಷನ್ ಕಪ್, 2026ರ ಅಂಡರ್–20 ಮತ್ತು ಅಂಡರ್–23 ರಾಷ್ಟ್ರೀಯ ಚಾಂಪಿಯನ್‌ಶಿಪ್‌ಗಳಲ್ಲಿ ಪದಕ ವಿಜೇತರಾದವರಿಗೆ ಮಾತ್ರ ಏಷ್ಯನ್ ಕ್ರೀಡಾಕೂಟ ಆಯ್ಕೆ ಪ್ರಕ್ರಿಯೆಗೆ ಅರ್ಹತೆ ಇರುತ್ತದೆ. ಈ ಸ್ಪರ್ಧೆಗಳು ಆಯ್ಕೆಗೂ ಮುನ್ನ ನಡೆದಿರಬೇಕು ಎಂಬ ಷರತ್ತೂ ಇತ್ತು. ಮೇ 6ರ ಸುತ್ತೋಲೆಯಲ್ಲಿ ಹಿಂದಿನ ಸಾಧನೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿತ್ತು.


ಮೇ 9ರ ನೋಟಿಸ್‌ನಲ್ಲಿ ಡಬ್ಲ್ಯುಎಫ್ಐ, ಫೋಗಟ್ ವಿರುದ್ಧ ಶಿಸ್ತುಲಂಘನೆ ಹಾಗೂ ಡೋಪಿಂಗ್ ನಿಯಮ ಉಲ್ಲಂಘನೆ ಆರೋಪ ಮಾಡಿತ್ತು. ನಿವೃತ್ತಿಯಿಂದ ಮರಳುವ ಆಟಗಾರರು ಕಡ್ಡಾಯವಾಗಿ ಆರು ತಿಂಗಳ ಮುಂಚಿತ ನೋಟಿಸ್ ನೀಡಬೇಕು ಎಂಬ ಜಾಗತಿಕ ಕುಸ್ತಿ ಒಕ್ಕೂಟದ ಡೋಪಿಂಗ್ ನಿಯಮಗಳನ್ನು ಫೋಗಟ್ ಪಾಲಿಸಿಲ್ಲ ಎಂದು ಫೆಡರೇಷನ್ ಆರೋಪಿಸಿತ್ತು.

ಫೋಗಟ್ ಮಾತೃತ್ವ ರಜೆಯಲ್ಲಿದ್ದರೂ, ಕ್ರೀಡೆಯಲ್ಲಿ ರಾಷ್ಟ್ರದ ಹಿತಾಸಕ್ತಿಯನ್ನೂ ಪರಿಗಣಿಸಬೇಕಾಗಿದೆ ಎಂದು ನ್ಯಾಯಪೀಠ ಹೇಳಿತ್ತು. ಫೋಗಟ್‌ಗೆ ಮೇ 9ರ ಶೋಕಾಸ್ ನೋಟಿಸ್‌ಗೆ ಸವಿಸ್ತಾರ ಉತ್ತರ ಸಲ್ಲಿಸಲು ನ್ಯಾಯಾಲಯ ಅವಕಾಶ ನೀಡಿದ್ದು, ಜುಲೈ 6ರ ಮುಂದಿನ ವಿಚಾರಣೆಗೆ ಮುನ್ನ ಅಂತಿಮ ತೀರ್ಮಾನ ಕೈಗೊಳ್ಳುವಂತೆ ಡಬ್ಲ್ಯುಎಫ್ಐಗೆ ಸೂಚಿಸಿತ್ತು. ಈ ಪ್ರಕರಣದಲ್ಲಿ ಕೇಂದ್ರ ಸರ್ಕಾರ, ಭಾರತೀಯ ಕುಸ್ತಿ ಒಕ್ಕೂಟ ಮತ್ತು ಭಾರತೀಯ ಒಲಿಂಪಿಕ್ಸ್ ಸಂಸ್ಥೆಗೆ ನೋಟಿಸ್ ಜಾರಿಗೊಳಿಸಲಾಗಿತ್ತು.

# ನೀಟ್ ಭೌತಶಾಸ್ತ್ರ ಪ್ರಶ್ನೆಪತ್ರಿಕೆ ಸೋರಿಕೆ ಪುಣೆಯ ಉಪನ್ಯಾಸಕಿ ಬಂಧನ

**ಪುಣೆ, ಮೇ 22:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಅಧಿಕಾರಿಗಳು ಮತ್ತೊಂದು ಬಂಧನ ಮಾಡಿದ್ದಾರೆ. ನೀಟ್–ಯುಜಿ ಭೌತಶಾಸ್ತ್ರ ಪ್ರಶ್ನೆಪತ್ರಿಕೆಯನ್ನು ಆಯ್ದ ವಿದ್ಯಾರ್ಥಿಗಳಿಗೆ ಸೋರಿಕೆ ಮಾಡಿದ ಆರೋಪದ ಮೇಲೆ ಪುಣೆಯ ಉಪನ್ಯಾಸಕಿಯನ್ನು ಬಂಧಿಸಲಾಗಿದೆ ಎಂದು ಸಿಬಿಐ ಅಧಿಕಾರಿಗಳು ತಿಳಿಸಿದ್ದಾರೆ.

ಬಂಧಿತ ಉಪನ್ಯಾಸಕಿಯನ್ನು ಮನಿಶಾ ಸಂಜಯ್ ಹವಾಲ್ದಾರ್ ಎಂದು ಗುರುತಿಸಲಾಗಿದೆ. ಪ್ರಸ್ತುತ ಪುಣೆಯ ಶಾಲೆಯೊಂದರಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಆಕೆಯೇ ಮೂಲವ್ಯಕ್ತಿ ಎಂದು ಸಿಬಿಐ ಆರೋಪಿಸಿದೆ. ನೀಟ್–ಯುಜಿ 2026ರ ಭೌತಶಾಸ್ತ್ರ ಪ್ರಶ್ನೆಪತ್ರಿಕೆ ಸೋರಿಕೆಯ ಪ್ರಮುಖ ಆರೋಪಿಗಳಲ್ಲಿ ಮತ್ತೊಬ್ಬರನ್ನು ಗುರುತಿಸಲಾಗಿದೆ ಎಂದು ಸಿಬಿಐ ವಕ್ತಾರರು ತಿಳಿಸಿದ್ದಾರೆ. ಎನ್‌ಟಿಎ ತಜ್ಞೆಯಾಗಿದ್ದ ವೇಳೆ ಪ್ರಶ್ನೆಪತ್ರಿಕೆ ಕಳವು CBI ಮಾಡಿರುವ ಆರೋಪದಂತೆ ಮನೀಷಾ ಅವರನ್ನು ರಾಷ್ಟ್ರೀಯ




ಪರೀಕ್ಷಾ ಸಂಸ್ಥೆ ಪರೀಕ್ಷಾ ತಜ್ಞೆಯಾಗಿ ನೇಮಿಸಲಾಗಿತ್ತು. ಈ ಕಾರಣದಿಂದ ಅವರಿಗೆ ಭೌತಶಾಸ್ತ್ರ ಪ್ರಶ್ನೆಪತ್ರಿಕೆಗೆ ಸಂಪೂರ್ಣ ಪ್ರವೇಶವಿತ್ತು. ಏಪ್ರಿಲ್ ತಿಂಗಳಲ್ಲಿ ಆರೋಪಿ ಉಪನ್ಯಾಸಕಿ ಕೆಲವು ಪ್ರಶ್ನೆಗಳನ್ನು ಮಂಡಾರೆಗೆ ಹಂಚಿಕೊಂಡಿದ್ದರು ಎಂದು ಸಿಬಿಐ ಹೇಳಿದೆ. ಈ ಹಿಂದೆ ಮೇ 16ರಂದುಪುಣೆಯ ಸಸ್ಯಶಾಸ್ತ್ರ ಶಿಕ್ಷಕಿ ಮನೀಷಾ ಮಂಧಾರೆ ಎಂಬುವವರನ್ನು ಇದೇ ಪ್ರಕರಣದಲ್ಲಿ ಸಿಬಿಐ ಬಂಧಿಸಿತ್ತು. ತನಿಖೆಯಲ್ಲಿ ಹವಾಲ್ದಾರ್ ಹಂಚಿಕೊಂಡಿದ್ದ ಪ್ರಶ್ನೆಗಳು ನೀಟ್ –ಯುಜಿ ಭೌತಶಾಸ್ತ್ರ ಪ್ರಶ್ನೆಪತ್ರಿಕೆಯೊಂದಿಗೆ ಹೊಂದಿಕೆಯಾಗಿರುವುದು ಪತ್ತೆಯಾಗಿದೆ ಎಂದು ಸಂಸ್ಥೆ ತಿಳಿಸಿದೆ.

### ಎರಡು ನೂತನ ವೇಗದೂತ ಸೇವೆಗೆ ಸಚಿವ ರಾಮಲಿಂಗಾರೆಡ್ಡಿ ಚಾಲನೆ

## ಬೆಂಗಳೂರು ಹೊರವಲಯ ಪ್ರಯಾಣಿಕರಿಗೆ ಬಿಎಂಟಿಸಿಯಿಂದ ಮತ್ತೊಂದು ಕೊಡುಗೆ



**ಬೆಂಗಳೂರು, ಮೇ 22:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ನಗರದ ಹೊರವಲಯದ ಪ್ರಯಾಣಿಕರಿಗೆ ಮತ್ತೊಂದು ಕೊಡುಗೆ ನೀಡಿದೆ. ಸಾರ್ವಜನಿಕರು, ಉದ್ಯೋಗಿಗಳು ಹಾಗೂ ವಿದ್ಯಾರ್ಥಿಗಳ ವೇಗವಾದ ಮತ್ತು ಸುಲಭ ಪ್ರಯಾಣದ ಹಿತದೃಷ್ಟಿಯಿಂದ ಎರಡು ನೂತನ ವೇಗದೂತ (ಸೀಮಿತ ನಿಲುಗಡೆ) ಸಾರಿಗೆ ಸೇವೆಗಳಿಗೆ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಚಾಲನೆ ನೀಡಿದ್ದಾರೆ. ಐಟಿಐ ಕಾರ್ಖಾನೆಯಿಂದ ಎಚ್.ಕ್ರಾಸ್‌ಗೆ ಹಾಗೂ ಹೊಸಕೋಟೆಯಿಂದ ನೆಲಮಂಗಲಕ್ಕೆ ಈ ನೂತನ ಬಸ್ ಸೇವೆಗಳನ್ನು ಆರಂಭಿಸಲಾಗಿದೆ.

**ನೂತನ ವೇಗದೂತ ಸಾರಿಗೆ ಸೇವೆಗಳ ಸಂಪೂರ್ಣ ಮಾಹಿತಿ:**

1) ಐಟಿಐ ಫ್ಯಾಕ್ಟರಿ – ಎಚ್.ಕ್ರಾಸ್ ಸೇವೆ: ಮೇ 22ರಿಂದ ಆರಂಭ ಪ್ರತಿ 30 ನಿಮಿಷಗಳಿಗೆ ಒಂದರಂತೆ ಪ್ರತಿದಿನ 60 ಸುತ್ತುವಳಿ, ಪ್ರಯಾಣದರ ರೂ. 60.

2) ಹೊಸಕೋಟೆ – ನೆಲಮಂಗಲ ಸೇವೆ (ಮಾರ್ಗ ಸಂಖ್ಯೆ: EX-STRR–1): ನೆಲಮಂಗಲ, ರೈಲ್ವೆ ಗೊಲ್ಲಹಳ್ಳಿ, ಕನಸವಾಡಿ, ಮಧುರ ದೇವಸ್ಥಾನ, ದೊಡ್ಡಬಳ್ಳಾಪುರ, ಡಿ ಕ್ರಾಸ್, ಚಪ್ಪರದಕಲ್ಲು, ವಿಶ್ವನಾಥಪುರ, ದೇವನಹಳ್ಳಿ, ಎಂ.ವಿ.ಜೆ. ಮೆಡಿಕಲ್ ಕಾಲೇಜು ಹಾಗೂ ಹೊಸಕೋಟೆ ಈ ಮಾರ್ಗದ ಪ್ರಮುಖ ನಿಲುಗಡೆಗಳಾಗಿವೆ. ಪ್ರಯಾಣ ದರ: ಕನಿಷ್ಠ 25 ರೂ., ಗರಿಷ್ಠ 110 ರೂ. ಈ ಸೇವೆಯಿಂದ ಕೆ.ಆರ್.ಪುರಂ, ಹೊಸಕೋಟೆ, ನಂದಗುಡಿ, ಹಿಂಡಿಗನಾಳ, ಎಚ್.ಕ್ರಾಸ್, ನೆಲಮಂಗಲ, ದೊಡ್ಡಬಳ್ಳಾಪುರ ಮತ್ತು ದೇವನಹಳ್ಳಿ ಭಾಗದ ಸಾವಿರಾರು ವಿದ್ಯಾರ್ಥಿಗಳು, ಉದ್ಯೋಗಿಗಳು ಹಾಗೂ ಸಾರ್ವಜನಿಕರಿಗೆ ನಿತ್ಯದ ಪ್ರಯಾಣ ಸುಲಭವಾಗಲಿದೆ.

**ವಿಸ್ತರಣೆಗೊಂಡ ಬಿಎಂಟಿಸಿ ವ್ಯಾಪ್ತಿ ಮತ್ತು ಆದಾಯ:**

ಸರ್ಕಾರದ ಆದೇಶದನ್ವಯ ಬಿಎಂಟಿಸಿ ಕಾರ್ಯಾಚರಣೆ ವ್ಯಾಪ್ತಿಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಿಂದ 40 ಕಿ.ಮೀ ವರೆಗೆ ವಿಸ್ತರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕನಕಪುರ, ಚನ್ನಪಟ್ಟಣ, ಚಿಕ್ಕಬಳ್ಳಾಪುರ ಹಾಗೂ ತುಮಕೂರಿಗೆ ಒಟ್ಟು 4 ಮಾರ್ಗಗಳಲ್ಲಿ 32 ವಜ್ರ ವಿಸ್ತಾರ ಹವಾನಿಯಂತ್ರಿತ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಸದ್ಯ ಹೊಸಕೋಟೆ ರಸ್ತೆಯಲ್ಲಿ ಈಗಾಗಲೇ ಒಟ್ಟು 188 ಅನುಸೂಚಿಗಳಿಂದ 1,686 ಸುತ್ತುವಳಿಗಳನ್ನು ಚಲಾಯಿಸಲಾಗುತ್ತಿದ್ದು, ಹೊಸಕೋಟೆಯಿಂದ ಮುಂದಕ್ಕೆ 42 ಅನುಸೂಚಿಗಳಿಂದ 378 ಸುತ್ತುವಳಿಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ ಸುತ್ತಮುತ್ತಲಿನ 9 ಪ್ರಮುಖ ಪಟ್ಟಣಗಳಿಗೆ ಒಟ್ಟು 11 ಮಾರ್ಗಗಳಲ್ಲಿ 124 ಎಕ್ಸ್‌ಪ್ರೆಸ್ ಬಸ್‌ಗಳು ಸಂಚರಿಸುತ್ತಿದ್ದು, ಪ್ರತಿದಿನ ಸರಾಸರಿ 60 ಸಾವಿರ ಪ್ರಯಾಣಿಕರು ಇದರ ಸೌಲಭ್ಯ ಪಡೆಯುತ್ತಿದ್ದಾರೆ. ಇದರಿಂದ ಸಂಸ್ಥೆಗೆ ಪ್ರತಿದಿನ ಸರಾಸರಿ ರೂ. 18.0 ಲಕ್ಷ ಆದಾಯ ಬರುತ್ತಿದೆ.

**ಬಿಎಂಟಿಸಿ ನೌಕರರ ಕಲ್ಯಾಣಕ್ಕೆ ಭರ್ಜರಿ ಕ್ರಮಗಳು:**

ಸಾರಿಗೆ ಸಂಸ್ಥೆಯು ಸಾರ್ವಜನಿಕ ಸೇವೆಯ ಜೊತೆಗೆ ನೌಕರರ ಹಿತರಕ್ಷಣೆಗೂ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ.

ನಾಲ್ಕು ಸಾರಿಗೆ ನಿಗಮಗಳ ನೌಕರರ 2020ನೇ ಸಾಲಿನ ವೇತನ ಪರಿಷ್ಕರಣೆ ಬಾಕಿಗೆ ಒಟ್ಟು 1,271.92 ಕೋಟಿ ರೂ. ಮಂಜೂರಾಗಿದ್ದು, ಅದರಲ್ಲಿ ಬಿಎಂಟಿಸಿಗೆ 137.24 ಕೋಟಿ ರೂ. ಬಿಡುಗಡೆಯಾಗಿದೆ. ನಿವೃತ್ತ, ರಾಜೀನಾಮೆ ನೀಡಿದ ಹಾಗೂ ಮೃತಪಟ್ಟ ಅರ್ಹ ನೌಕರರಿಗೆ ಮೇ 21 ಮತ್ತು 22, 2026ರಂದು ಪಾವತಿಸಲಾಗುತ್ತಿದೆ. ಜಯದೇವ ಹೃದ್ರೋಗ ಸಂಸ್ಥೆಯ ಸಹಯೋಗದಲ್ಲಿ 40 ವರ್ಷ ಮೇಲ್ಪಟ್ಟ 13,668 ನೌಕರರಿಗೆ ಉಚಿತ ಹೃದಯ ತಪಾಸಣೆ ಮಾಡಿಸಲಾಗಿದೆ. ಹಾಗೆಯೇ, ಜಯನಗರ ಏರ್ ಚೆಸ್ಟ್ ಆಸ್ಪತ್ರೆಯ ಮೂಲಕ 4,186 ಮುಂಚೂಣಿ ಸಿಬ್ಬಂದಿಗೆ ಶ್ವಾಸಕೋಶ ತಪಾಸಣೆ ನಡೆಸಲಾಗಿದೆ. ಸಾರಿಗೆ ಆಶಾಕಿರಣ ಯೋಜನೆಯಡಿ ಸಿ–ಕ್ಯಾಂಪ್ ಸಹಯೋಗದಲ್ಲಿ ಸಂಸ್ಥೆಯ 50 ಘಟಕಗಳು ಹಾಗೂ 4 ಕಾರ್ಯಾಗಾರಗಳಲ್ಲಿ ನೌಕರರಿಗೆ ಉಚಿತ ಕಣ್ಣಿನ ತಪಾಸಣೆ ನಡೆಸಿ, ಉಚಿತ ಕನ್ನಡಕ ವಿತರಿಸಲಾಗುತ್ತಿದೆ. ಕಾರ್ಯಕ್ಷಮತೆ ಹೆಚ್ಚಿಸಲು ನೇರ ನೇಮಕಾತಿ ಮೂಲಕ ಹೊಸದಾಗಿ 2,500 ನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

ಬಿಎಂಟಿಸಿಯ ಉತ್ತಮ ಕಾರ್ಯಾಚರಣೆಯನ್ನು ಗುರುತಿಸಿ ಹಾಗೂ ವಿವಿಧ ರಾಷ್ಟ್ರೀಯ ಮಟ್ಟದ ಸಂಸ್ಥೆಗಳಿಂದ ಇದುವರೆಗೆ ಒಟ್ಟು 156 ಪ್ರಶಸ್ತಿ ಮತ್ತು ಮಾನ್ಯತೆಗಳು ಲಭಿಸಿವೆ.

## ಗೃಹಲಕ್ಷ್ಮೀಯಲ್ಲಿ 5,000 ಕೋಟಿ ಹಗರಣ: ಸರ್ಕಾರ ವಿರುದ್ಧ ನಿಖಿಲ್ ಕುಮಾರಸ್ವಾಮಿ ಗಂಭೀರ ಆರೋಪ



**ಬೆಂಗಳೂರು, ಮೇ 22:** ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮಿ ಹೆಸರಿನಲ್ಲಿ ಭಾರಿ ಅವ್ಯವಹಾರ ನಡೆದಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿ ನೇರ ಸವಾಲುಗಳನ್ನು ಎಸೆದರು.

ಈ ವೇಳೆ ಗೃಹಲಕ್ಷ್ಮಿ ಬಾಕಿ ಕಂತಿನ ಬಗ್ಗೆ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, "2024–25ನೇ ಸಾಲಿನಲ್ಲಿ ಹತ್ತು ತಿಂಗಳ ಕಂತು ಕೊಟ್ಟಿದ್ದಾರೆ. ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಹಣ ಬಂದಿಲ್ಲ. ಸುಮಾರು ?5,000 ಕೋಟಿ ಹಣ. ಬಜೆಟ್‌ನಲ್ಲಿ ಪ್ರಾವಿಜನ್ ತೋರಿಸಿದ್ದಾರೆ. ಆದರೆ ಹಣ ಕೊಟ್ಟಿಲ್ಲ. ಈ ಹಣ ಯಾವಾಗ ಕೊಡ್ತೀವಿ ಅಂತಾದರೂ ಹೇಳಬೇಕು. ಇಲ್ಲ ಬೇರೆಯದಕ್ಕೆ ಬಳಸಿಕೊಂಡಿದ್ದಾರಾ ಅನ್ನೋ ಲೆಕ್ಕನಾದರೂ ತೋರಿಸಿ" ಎಂದು ಪ್ರಶ್ನಿಸಿದರು.

"ಮಿಸ್ ಆಗಿರುವ ಎರಡು ತಿಂಗಳ ಹಣದ ಬಗ್ಗೆ ಸಚಿವರು ಉತ್ತರ ಕೊಡಲೇ ಇಲ್ಲ. ನಾಡಿನ ಹೆಣ್ಣುಮಕ್ಕಳು, ತೆರಿಗೆದಾರರು ಕ್ಷಮಿಸುವ ವಿಚಾರ ಅಲ್ಲ. ನಿಮ್ಮಲ್ಲಿ ಸ್ಪಷ್ಟತೆ ಇದ್ದರೆ, ಇಷ್ಟರಲ್ಲಿ ಉತ್ತರ ಕೊಡಬೇಕಿತ್ತು. ಆರ್ಥಿಕ ಇಲಾಖೆಯಿಂದ ಸಕಾಲದಲ್ಲಿ ಹಣ ಬಿಡುಗಡೆ ಆಗದ ಕಾರಣ ಫಲಾನುಭವಿಗಳಿಗೆ ಸಕಾಲದಲ್ಲಿ ಹಣ ಬಿಡುಗಡೆ ಆಗಿಲ್ಲ ಎಂದು ಸದನದಲ್ಲಿ ಹೇಳ್ತಾರೆ" ಎಂದು ಕಿಡಿಕಾರಿದರು.

ಈ 5,000 ಕೋಟಿ ರೂ. ಹಣ ಎಲ್ಲಿ ಹೋಯಿತು, ಇದನ್ನು ಚುನಾವಣೆಗೆ ಬಳಕೆ ಮಾಡಿದ್ದೀರಾ ಅಥವಾ ಬೇರೆ ಯಾವುದಕ್ಕೆ ವರ್ಗಾಯಿಸಿದ್ದೀರಾ? ಇದಕ್ಕೆ ಮುಖ್ಯಮಂತ್ರಿಗಳೇ ನೇರ ಹೊಣೆ, ಅವರು ಉತ್ತರ ನೀಡಬೇಕು ಎಂದು ನಿಖಿಲ್ ಒತ್ತಾಯಿಸಿದರು.

ಯೋಜನೆ ಆರಂಭವಾದಾಗಿನಿಂದ ಒಟ್ಟು 21 ಕಂತುಗಳನ್ನು ನೀಡಬೇಕಿತ್ತು. ಆದರೆ 2023–24ರಲ್ಲಿ 8 ಕಂತು, 2024–25ರಲ್ಲಿ 10 ಕಂತು ಮಾತ್ರ ನೀಡಲಾಗಿದೆ. ಸದನದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸುಳ್ಳು ಹೇಳಿ ಎರಡು ಕಂತಿನ ಹಣವನ್ನು ಮುಚ್ಚಿಟ್ಟಿದ್ದಾರೆ. ಶಾಸಕ ಮಹೇಶ್ ತೆಂಗಿನಕಾಯಿ ಈ ವಿಚಾರವನ್ನು ಬಹಿರಂಗಪಡಿಸಿದ್ದು, ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. 2025ರ ಡಿಸೆಂಬರ್ ಅಧಿವೇಶನದಲ್ಲಿ ಕೇಳಿದ ಪ್ರಶ್ನೆಗೆ 5 ತಿಂಗಳಾದರೂ ಉತ್ತರವಿಲ್ಲ. ಇದು ಸಿಎಂ ಕಚೇರಿಯಲ್ಲಿ ಮುಚ್ಚಿಡುವ ದಾಖಲೆಯಲ್ಲ, ಜನರ ಮುಂದೆ ಇಡಬೇಕಾದ ವಿಚಾರ" ಎಂದರು.


ಈಗಾಗಲೇ ಈ ಕುರಿತು ಮಹಿಳೆಯರು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದು, ನ್ಯಾಯಾಲಯ ಸರ್ಕಾರಕ್ಕೆ ಚಾಟಿ ಬೀಸಲಿದೆ. ಇದರ ವಿರುದ್ಧ ಜೆಡಿಎಸ್ ದೊಡ್ಡ ಮಟ್ಟದ ಹೋರಾಟ ರೂಪಿಸಲಿದೆ ಎಂದು ನಿಖಿಲ್ ಕುಮಾರಸ್ವಾಮಿ ಎಚ್ಚರಿಸಿದರು.



ಬೆಂಗಳೂರಿನ ನೃಪತುಂಗ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಉದ್ಯೋಗಮೇಳಕ್ಕೆ ಹಾಜರಾದ ವಿದ್ಯಾರ್ಥಿಗಳು.

### ಧರ್ಮಸ್ಥಳದ ಪರ ನ್ಯಾಯಾಲಯ

## ಹೊರಡಿಸಿರುವ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ




**ಬೆಂಗಳೂರು, ಮೇ 22:** ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಮತ್ತು ಅವರ ಕುಟುಂಬದ ಪರವಾಗಿ ಸಿವಿಲ್ ನ್ಯಾಯಾಲಯಗಳು ಹೊರಡಿಸಿರುವ ಪ್ರತಿಬಂಧಕಾದೇಶವನ್ನು ಕಾರ್ಯಗತಗೊಳಿಸಲು ರಾಜ್ಯ ಸರ್ಕಾರಕ್ಕೆ ಕರ್ನಾಟಕ ಹೈಕೋರ್ಟ್ ನಿರ್ದೇಶಿಸಿದೆ.

ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕ ಶೀನಪ್ಪ, ನಂದೀಶ್ ಕುಮಾರ್ ಜೈನ್ ಮತ್ತು ಡಿ. ನಿಶ್ಚಲ್ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಸಿ ಎಂ ಪೂಣಚ್ಚ ಅವರ ರಜಾಕಾಲೀನ ಏಕಸದಸ್ಯ ಪೀಠ ನಡೆಸಿತು.


ವಾದ ಆಲಿಸಿದ ಪೀಠವು ಸಂಬಂಧಿತ ಪೊಲೀಸರು ಕಾನೂನಿನ ಅನ್ವಯ 17 ಮಾಧ್ಯಮ ಮತ್ತು ಯೂಟ್ಯೂಬ್ ಚಾನಲ್‌ಗಳ ವಿರುದ್ಧ ಕಾನೂನಿನ ಅನ್ವಯ ಕ್ರಮ ಕೈಗೊಳ್ಳಬೇಕು ಮತ್ತು ಮುಂದಿನ ವಿಚಾರಣೆ ವೇಳೆಗೆ ಅನುಪಾಲನಾ ವರದಿ ಸಲ್ಲಿಸಬೇಕು ಎಂದು ನ್ಯಾಯಾಲಯ ನಿರ್ದೇಶಿಸಿದೆ.

ಅರ್ಜಿದಾರರನ್ನು ಪ್ರತಿನಿಧಿಸಿದ್ದ ವಕೀಲ ಎಸ್. ರಾಜಶೇಖರ್ ಅವರು ಪ್ರತಿಬಂಧಕಾದೇಶಗಳಿದ್ದರೂ ಪ್ರತಿವಾದಿಗಳು ಅವುಗಳನ್ನು ಉಲ್ಲಂಘಿಸಿ, ಮಾನಹಾನಿ ವಿಚಾರ ಗಳನ್ನು ಹಂಚಿಕೆ ಮಾಡುವ ಕೃತ್ಯದಲ್ಲಿ ತೊಡಗಿದ್ದಾರೆ ಎಂದರು.

ಹಲವು ವ್ಯಕ್ತಿಗಳು ತಮ್ಮ ಗುರುತನ್ನು ಮರೆಮಾಚಲು ನಕಲಿ ಫೇಸ್‌ಬುಕ್ ಮತ್ತು ಇನ್‌ಸ್ಟಾಗ್ರಾಮ್ ಖಾತೆಗಳನ್ನು ನಿರ್ವಹಿಸುತ್ತಿದ್ದಾರೆ ಮತ್ತು ಅರ್ಜಿ ದಾರರನ್ನು ಗುರಿಯಾಗಿಸಿ ಕೊಂಡು ಮಾನ ಹಾನಿಕರ ವಿಡಿಯೊಗಳು, ತಿರುಚಿದ ವಿಷಯ, ಸುಳ್ಳು ಆರೋಪಗಳು ಮತ್ತು ದಾರಿತಪ್ಪಿಸುವ ನಿರೂಪಣೆ ಗಳನ್ನು ಪ್ರಸಾರ ಮಾಡುತ್ತಿದ್ದಾರೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಹಿಂದಿನ ಖಾತೆಗಳನ್ನು ನಿರ್ಬಂಧಿಸಿದ ಅಥವಾ ತೆಗೆದುಹಾಕಿದ ನಂತರ ನಕಲಿ ಖಾತೆಗಳನ್ನು ಪದೇ ಪದೇ ಸೃಷ್ಟಿಸಿ, ವಿಷಯದ ಪ್ರಸರಣವನ್ನು ಮುಂದು ವರಿಸಲು "ವ್ಯವಸ್ಥಿತ ಮತ್ತು ಸತತ ಪ್ರಯತ್ನ" ಮುಂದುವರಿಸಲಾಗಿದೆ ಎಂದು ಆಕ್ಷೇಪಿಸಲಾಗಿದೆ.

ಈ ಸಂಬಂಧ ಪೊಲೀಸರಿಗೆ ಕ್ರಮಕೈಗೊಳ್ಳಲು ಹಲವು ಮನವಿ ಸಲ್ಲಿಸಲಾಗಿದ್ದರೂ ಯಾವುದೇ ಕ್ರಮವಾಗಿಲ್ಲ ಎಂದು ಮಧ್ಯಂತರ ಅರ್ಜಿಯಲ್ಲಿ ವಿವರಿಸಲಾಗಿದೆ.

## ಆಳಂದ ದರ್ಗಾ ಗಲಭೆ ಹಿಂಪಡೆದಿದ್ದಕ್ಕೆ ಬಿಜೆಪಿ ನಾಯಕರ ಆಕ್ರೋಶ



**ಬೆಂಗಳೂರು/ಹುಬ್ಬಳ್ಳಿ, ಮೇ 22:** ಆಳಂದ ಗಲಭೆ ಸಂಬಂಧ ಪ್ರಕರಣ ಕೈಬಿಡುವ ಸಚಿವ ಸಂಪುಟ ಸಭೆಯ ತೀರ್ಮಾನದ ಬಗ್ಗೆ ರಾಜ್ಯ ಬಿಜೆಪಿ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ನಾಚಿಕೆಗೆಟ್ಟ ಕಾಂಗ್ರೆಸ್ ಸರ್ಕಾರದ ವೋಟ್ ಬ್ಯಾಂಕ್ ಓಲೈಕೆಯ ಕೀಳು ರಾಜಕೀಯ ಮತ್ತು ಅಲ್ಪಸಂಖ್ಯಾತರ ತುಷ್ಟೀಕರಣದ ಪರಮಾವಧಿಯ ನಿರ್ಲಜ್ಜ ಪ್ರದರ್ಶನಕ್ಕೆ ರಾಜ್ಯ ಸಾಕ್ಷಿಯಾಗಿದೆ. ಎಲ್ಲಾ ಮಿತಿಗಳನ್ನೂ ಈ ತುಘಲಕ್ ಕಾಂಗ್ರೆಸ್ ಸರ್ಕಾರ ದಾಟಿದೆ ಎಂದು ಟೀಕಿಸಿದ್ದಾರೆ.

### ರಾಜನೇ ವರ್ತಕನಾದಾಗ ಪ್ರಜೆಗಳು ಭಿಕಾರಿಗಳಾಗುತ್ತಾರೆ

## ಕೇಂದ್ರ ಸರ್ಕಾರದ ಆಡಳಿತ ವೈಖರಿಯನ್ನು ಅಣಕಿಸಿ ಚಾಣಕ್ಯ ನೀತಿ ಉಲ್ಲೇಖಿಸಿದ ಬಿ.ಕೆ.ಹರಿಪ್ರಸಾದ್



**ಬೆಂಗಳೂರು, ಮೇ 22:** ಬೆಂಗಳೂರಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಆಡಳಿತ ವೈಖರಿಯನ್ನು ತರಾಟೆಗೆ ತೆಗೆದುಕೊಂಡ ಬಿ.ಕೆ.ಹರಿಪ್ರಸಾದ್, "ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶದ ಜನರನ್ನು ಭಿಕಾರಿ ಮಾಡಿದ್ದಾರೆ" ಎಂದು ಗಂಭೀರ ಆರೋಪ ಮಾಡಿದರು. ಪ್ರಧಾನಿಯವರು ಸಾಮಾನ್ಯಜನರ ಹಿತ ಕಾಯುವ ಬದಲು ಕಾರ್ಪೊರೇಟ್ ಕಂಪನಿಗಳ ಪರವಾಗಿ ನಿಂತಿದ್ದಾರೆ. ಚಾಕೋಲೇಟ್ ಕಂಪನಿಯ ಜೊತೆಗೂ ಪ್ರಧಾನಿ ಮೋದಿ ವ್ಯಾಪಾರ ಕುದುರಿಸಿದ್ದಾರೆ ಎಂದು ಲೇವಡಿ ಮಾಡಿದ್ದಾರೆ.

ಇದೇ ಸಂದರ್ಭದಲ್ಲಿ ಪ್ರಾಚೀನ ರಾಜತಾಂತ್ರಿಕ ಚಾಣಕ್ಯನ ನೀತಿಯನ್ನು ಉಲ್ಲೇಖಿಸಿದ ಹರಿಪ್ರಸಾದ್, "ಯಾವಾಗ ದೇಶದ ರಾಜನೇ ವ್ಯಾಪಾರಿ ಯಾಗುತ್ತಾನೋ, ಆ ದೇಶದ ಪ್ರಜೆಗಳು ಭಿಕಾರಿಗಳಾಗುತ್ತಾರೆ ಎಂಬುದು ಚಾಣಕ್ಯ ನೀತಿ.

ಇಂದು ಭಾರತದಲ್ಲಿ ಅದೇ ಪರಿಸ್ಥಿತಿ ನಿರ್ಮಾಣವಾಗಿದೆ. ದೇಶದ ಆಡಳಿತಗಾರನೇ ವ್ಯಾಪಾರ ಮಾಡಲು ಹೊರಟಿರುವುದರಿಂದ ದೇಶದ ಜನಸಾಮಾನ್ಯರು ಆರ್ಥಿಕವಾಗಿ ಕಂಗಾಲಾಗಿದ್ದಾರೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಧಾನಿ ಮೋದಿಯವರ ಕಾರ್ಯವೈಖರಿಯನ್ನು ಉದ್ರೇಕಕಾರಿ ಮಾತುಗಳಲ್ಲಿ ಟೀಕಿಸಿದ ಹರಿಪ್ರಸಾದ್, ಮೋದಿಯವರನ್ನು 'ಆಸ್ಟ್ರಿಚ್' (ಉಷ್ಟ್ರಪಕ್ಷಿ) ಪಕ್ಷಿಗೆ ಹೋಲಿಸಿದರು. ಆಸ್ಟ್ರಿಚ್ ಪಕ್ಷಿಯು ಸಂಕಷ್ಟ ಎದುರಾದಾಗ ಮರಳಿನಲ್ಲಿ ತಲೆ ಮುಚ್ಚಿಕೊಳ್ಳುವಂತೆ, ದೇಶದಲ್ಲಿ ಜ್ವಲಂತ ಸಮಸ್ಯೆಗಳು ತಲೆದೋರಿದಾಗ ಪ್ರಧಾನಿಯವರು ಕಣ್ಣು ಮುಚ್ಚಿ ಕುಳಿತುಕೊಳ್ಳುತ್ತಾರೆ ಅಥವಾ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಾರೆ ಎಂದು ವ್ಯಂಗ್ಯವಾಡಿದರು.

ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಮತ್ತು ಮೋದಿ ಅವರ ಭೇಟಿಯ ಕುರಿತು ಮಾತನಾಡಿದ ಅವರು, "ಮೆಲೋನಿಗೆ ಮೆಲೋಡಿ ಕೊಟ್ಟು ಷೇರ್ ಮಾರುಕಟ್ಟೆಯ ದರ ಹೆಚ್ಚಾಗುವಂತೆ ಮಾಡಿದರು" ಎಂದು ಲೇವಡಿ ಮಾಡಿದರು.

ದೇಶವು ಆರ್ಥಿಕ ಹಾಗೂ ಸಾಮಾಜಿಕವಾಗಿ ಅತ್ಯಂತ ಗಂಭೀರ ಮತ್ತು ಕಠಿಣ ಪರಿಸ್ಥಿತಿಯನ್ನು ಎದುರಿಸುತ್ತಿರುವಾಗ, ಪ್ರಧಾನಿ ಮೋದಿ ಅವರು ದೇಶದ ಒಳಗಿನ ಸಮಸ್ಯೆಗಳನ್ನು ಬಗೆಹರಿಸುವ ಬದಲು ಸಾಲು ಸಾಲು ವಿದೇಶಿ ಪ್ರವಾಸಗಳನ್ನು (ಫಾರೆನ್ ಟ್ರಿಪ್) ಕೈಗೊಳ್ಳುತ್ತಿದ್ದಾರೆ ಎಂದು ಹರಿಪ್ರಸಾದ್ ಬೆಂಗಳೂರಿನಲ್ಲಿ ಆಕ್ರೋಶ ಹೊರಹಾಕಿದ್ದಾರೆ.

## ಪ್ರಕರಣ ಹಿಂಪಡೆದ ಸಂಪುಟ ನಿರ್ಧಾರಕ್ಕೆ ಕರವೇ ನಾರಾಯಣಗೌಡ ಅಸಮಾಧಾನ



**ಬೆಂಗಳೂರು, ಮೇ 22:** ಕೆಲವು ಪ್ರಕರಣಗಳನ್ನು ಹಿಂಪಡೆಯುವ ಸಚಿವ ಸಂಪುಟ ನಿರ್ಧಾರದ ಬಗ್ಗೆ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮಾಧ್ಯಮ ವರದಿಗಳನ್ನು ಉಲ್ಲೇಖಿಸಿ ಪ್ರತಿಕ್ರಿಯೆ ನೀಡಿರುವ ಅವರು, ನಾಮ್‌ಕೇವಾಸ್ತೆಗೆ ಎಂಬಂತೆ ಎರಡು ಪ್ರಕರಣಗಳನ್ನು ಹಿಂಪಡೆದಿದ್ದಾರೆ. ಮೂಗಿಗೆ ತುಪ್ಪ ಹಚ್ಚೋದು ಅಂದ್ರೆ ಇದೇನಾ. ಆ ಎರಡು ಪ್ರಕರಣಗಳನ್ನಾದರೂ ಯಾಕೆ ಹಿಂಪಡೆದಿರಿ ಎಂದು ಸರ್ಕಾರಕ್ಕೆ ಪ್ರಶ್ನೆ ಮಾಡಿದ್ದಾರೆ.

ರಾಜ್ಯ ಸರ್ಕಾರದ ಸಚಿವ ಸಂಪುಟ ನಿನ್ನೆ ಹಲವು ಪ್ರಕರಣಗಳನ್ನು ಹಿಂದಕ್ಕೆ ಪಡೆದಿದೆ ಮತ್ತು ಅವುಗಳ ಪೈಕಿ ಒಂದೆರಡು ಪ್ರಕರಣಗಳು ನಮಗೆ ಸಂಬಂಧಿಸಿದ್ದು ಆಗಿವೆ ಎಂಬುದರ ಕುರಿತು ಮಾಧ್ಯಮ ವರದಿಗಳನ್ನು ಗಮನಿಸಿದೆ. ಹಲವಾರು ವರ್ಷಗಳಿಂದ ಕನ್ನಡಪರ ಹೋರಾಟಗಾರರ ಮೇಲೆ ಹೂಡಲಾಗಿರುವ ಸಾವಿರಾರು ಪ್ರಕರಣಗಳನ್ನು ಹಿಂದಕ್ಕೆ ಪಡೆಯಬೇಕು ಎಂದು ಕೇಳುತ್ತಲೇ ಬಂದಿದ್ದೇವೆ. ಸ್ವತಃ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು ಆಗಾಗ ಎಲ್ಲ ಪ್ರಕರಣಗಳನ್ನು ಹಿಂದಕ್ಕೆ ಪಡೆಯುವುದಾಗಿ ಹೇಳುತ್ತಾ ಬಂದಿದ್ದಾರೆ.

ಖುದ್ದಾಗಿ ಮುಖ್ಯಮಂತ್ರಿಗಳು, ಗೃಹಸಚಿವರು, ಕಾನೂನು ಸಚಿವರನ್ನು ಭೇಟಿಯಾಗಿ ಮಾತನಾಡಿದ್ದೆ. ಈಗ ಎರಡು ಪ್ರಕರಣಗಳನ್ನು ಹಿಂದಕ್ಕೆ ಪಡೆಯುವುದಾಗಿ ತೀರ್ಮಾನ ಮಾಡಿದ್ದಾರೆ. ನನ್ನ ಮೇಲೆ ಒಟ್ಟು 27 ಪ್ರಕರಣಗಳು ಇವೆ. ಎಲ್ಲವೂ ಚಳವಳಿಯ ಪ್ರಕರಣಗಳು. ಯಾರಿಗೋ ಹೊಡೆದ, ಬಡಿದ ಪ್ರಕರಣಗಳು ಅಲ್ಲ, ಸಮಾಜದಲ್ಲಿ ಸಂಘರ್ಷಕ್ಕೆ ಕಾರಣವಾದ ಪ್ರಕರಣಗಳಂತೂ ಅಲ್ಲವೇ ಅಲ್ಲ.

ನನ್ನ ಕರವೇ ಕಾರ್ಯಕರ್ತರ ಮೇಲೆ ರಾಜ್ಯಾದ್ಯಂತ ನೂರಾರು ಪ್ರಕರಣಗಳನ್ನು ಹಾಕಲಾಗಿದೆ. ಅವುಗಳ ಸಂಪೂರ್ಣ ವಿವರಗಳನ್ನು ಸಹ ಸರ್ಕಾರಕ್ಕೆ ನೀಡಿದ್ದೇವೆ. ಆದರೆ ಇದ್ಯಾವುದೂ ಸರ್ಕಾರದ ಕಣ್ಣಿಗೆ ಬಿದ್ದಿಲ್ಲ ಎಂದೇನಲ್ಲ, ಜಾಣ ಕುರುಡು ಅಷ್ಟೇ ಎಂದು ಕಿಡಿಕಾರಿದ್ದಾರೆ.

## ಜೂನ್ 1ರಿಂದ ಬೀದರ್, 10ರಿಂದ ಕಲಬುರಗಿಗೆ ಬೆಂಗಳೂರಿನಿಂದ ವಿಮಾನ ಸೇವೆ ಪುನಾರಂಭ: ಸಚಿವ ಎಂ.ಬಿ. ಪಾಟೀಲ್




**ಬೆಂಗಳೂರು, ಮೇ 22:** ಕಲ್ಯಾಣ ಕರ್ನಾಟಕ ಭಾಗದ ಬೀದರ್ ಮತ್ತು ಕಲಬುರಗಿ ಜಿಲ್ಲಾ ಕೇಂದ್ರಗಳಿಗೆ ಕ್ರಮವಾಗಿ ಜೂನ್ 1 ಮತ್ತು ಜೂನ್ 10ರಿಂದ ಬೆಂಗಳೂರಿನಿಂದ ವಿಮಾನ ಯಾನ ಸೇವೆಯನ್ನು ಪುನಾರಂಭ ಮಾಡಲಾಗುತ್ತಿದೆ ಎಂದು ಮೂಲ ಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಈ ಬಗ್ಗೆ ಮಾತನಾಡಿರುವ ಅವರು, ಸ್ಟಾರ್ ಏರ್ ಲೈನ್ಸ್ ಸಂಸ್ಥೆಯು ಬೆಂಗಳೂರು–ಬೀದರ್– ಬೆಂಗಳೂರು ಮತ್ತು ಬೆಂಗಳೂರು– ಕಲಬುರಗಿ– ಬೆಂಗಳೂರು ಮಾರ್ಗದಲ್ಲಿ ವಿಮಾನಯಾನ ಸೇವೆಯನ್ನು ಒದಗಿಸಲಿದೆ. ಇದಕ್ಕೆ ಬೆಂಬಲ ನೀಡಲು ಸರಕಾರವು 28.47 ಕೋಟಿ ರೂ.ಗಳನ್ನು 'ವಯಬಲಿಟಿ ಗ್ಯಾಪ್ ಫಂಡಿಂಗ್' ಆಗಿ ಕೊಡುತ್ತಿದೆ. ಎರಡೂ ಕಡೆಯ ವಿಮಾನ ಪ್ರಯಾಣಕ್ಕೆ ಈಗಾಗಲೇ ಮುಂಗಡ ಬುಕಿಂಗ್ ಕೂಡ ಆರಂಭವಾಗಿದೆ ಎಂದಿದ್ದಾರೆ.

ಕಲಬುರಗಿಗೆ ಇದ್ದ ವಿಮಾನ ಸೇವೆಯು ನಷ್ಟದ ಕಾರಣ ಸ್ಥಗಿತಗೊಂಡಿತ್ತು. ಬೀದರ್‌ಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವಿಶೇಷ ನೆರವಿನಿಂದ ಒಂದು ವಿಮಾನ ಓಡಾಡುತ್ತಿತ್ತು. ಸರಕಾರವು ಕಲ್ಯಾಣ ಕರ್ನಾಟಕ ಭಾಗದ ಕೈಗಾರಿಕೆ, ಶಿಕ್ಷಣ, ಪ್ರವಾಸೋದ್ಯಮ, ಕೃಷಿ, ವಾಣಿಜ್ಯ ವಹಿವಾಟು ಇತ್ಯಾದಿಗಳ ಬೆಳವಣಿಗೆಯನ್ನು ಪರಿಗಣಿಸಿ ಪ್ರಾದೇಶಿಕ ವಿಮಾನಯಾನ ಸಂಪರ್ಕ ಉಪ ಕ್ರಮದಡಿ ವಿಮಾನಸೇವೆಯನ್ನು ಮತ್ತೆ ಆರಂಭಿಸುತ್ತಿದೆ ಇದರಿಂದ ಪ್ರಾದೇಶಿಕ ಆರ್ಥಿಕ ಅಭಿವೃದ್ಧಿ ಜತೆಗೆ ಮೂಲಸೌಕರ್ಯ ಕೂಡ ಸುಧಾರಿಸಲಿದೆ ಎಂದು ಪಾಟೀಲ ಹೇಳಿದ್ದಾರೆ.

ಬೀದರ್ ಮತ್ತು ಕಲಬುರಗಿಗೆ ವಿಮಾನಸೇವೆಯ ಮರುಆರಂಭಕ್ಕೆಂದು ಸಚಿವರು ಇತ್ತೀಚೆಗೆ ಕಲ್ಯಾಣ ಕರ್ನಾಟಕ ಭಾಗದ ಸಚಿವ ಸಹೋದ್ಯೋಗಿಗಳು ಮತ್ತು ಹಲವು ವಿಮಾನಯಾನ ಸಂಸ್ಥೆಗಳ ಪ್ರಮುಖರ ಜತೆ ಹಲವು ಸುತ್ತಿನ ಸಭೆಗಳನ್ನು ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದು.

### ಪರೀಕ್ಷೆ ಮುಗಿದ 10 ನಿಮಿಷದಲ್ಲಿ ಫಲಿತಾಂಶ: ದಾಖಲೆ ಸೃಷ್ಟಿಸಿದ ವಿಟಿಯು

## 56 ಸಾವಿರ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟ: ಸಿಬ್ಬಂದಿಗೆ ಕುಲಪತಿ ಪ್ರೊ. ವಿದ್ಯಾಶಂಕರ್ ಅಭಿನಂದನೆ

**ಬೆಂಗಳೂರು, ಮೇ 22:** ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ವಿಟಿಯು) ಅಂತಿಮ ಸೆಮಿಸ್ಟರ್ ಎಂಜಿನಿಯರಿಂಗ್ ಪರೀಕ್ಷೆ ಮುಗಿದ ಕೇವಲ 10 ನಿಮಿಷದೊಳಗೆ ಫಲಿತಾಂಶ ಪ್ರಕಟಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಿದೆ. ಫಲಿತಾಂಶವನ್ನು ವಿಟಿಯು ಕುಲಪತಿ ಪ್ರೊ. ಎಸ್.ವಿದ್ಯಾಶಂಕರ್ ಹಾಗೂ ಕುಲಸಚಿವ (ಮೌಲ್ಯಮಾಪನ) ಪ್ರೊ.ಯು.ಜೆ.ಉಜ್ವಲ್ ಜಂಟಿಯಾಗಿ ಬಿಡುಗಡೆ ಮಾಡಿದರು.

ಬಿ.ಇ. ಮತ್ತು ಬಿ.ಟೆಕ್ ಅಂತಿಮ ಸೆಮಿಸ್ಟರ್ ಪರೀಕ್ಷೆಗೆ 56,192 ವಿದ್ಯಾರ್ಥಿಗಳು ಹಾಜರಾಗಿದ್ದರು. ಶುಕ್ರವಾರ ಸಂಜೆ 5.30ಕ್ಕೆ ಪರೀಕ್ಷೆ ಅಂತ್ಯವಾಗಿದ್ದು, 5.40ಕ್ಕೆ ಫಲಿತಾಂಶವನ್ನು ಬಿಡುಗಡೆ ಮಾಡಿದೆ. ಶೇಕಡ 99.98 ಫಲಿತಾಂಶ ಸಾಧಿಸಿದೆ.

ಹಿಂದಿನ ವರ್ಷಗಳಿಗೆ ಹೋಲಿಕೆ ಮಾಡಿದರೆ, ಸಂಪೂರ್ಣ ಮೌಲ್ಯಮಾಪನ ಪ್ರಕ್ರಿಯೆಯನ್ನು 8 ದಿನಗಳ ಮುಂಚಿತ 'ವಾಗಿಯೇ ಮುಗಿಸಿದೆ. ಆ ಮೂಲಕ ಈ ಹಿಂದೆ ದಾಖಲೆಗಳನ್ನು ಮುರಿದಿದೆ. ಈ ಹಿಂದೆ ಪರೀಕ್ಷೆ ಮುಗಿದ ಒಂದು ಗಂಟೆಯೊಳಗೆ ಫಲಿತಾಂಶವನ್ನು ಪ್ರಕಟಿಸಿತ್ತು. ಫಲಿತಾಂಶವನ್ನು ವಿದ್ಯಾರ್ಥಿಗಳ ಮೊಬೈಲ್ ಸಂಖ್ಯೆಗೆ ನೇರವಾಗಿ ಕಳುಹಿಸಲಾಗಿದೆ. ಈ ಕುರಿತು ಮಾತನಾಡಿದ ವಿಟಿಯು ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್,



"ವಿಟಿಯು ತಂತ್ರಜ್ಞಾನ ಅಳವಡಿಕೆಯಲ್ಲಿ ಸದಾ ಮುಂದಿದೆ. ವಿದ್ಯಾರ್ಥಿಗಳ ಸ್ನೇಹಿಯಾಗಿದೆ ಎಂಬುದಕ್ಕೆ ಈ ಫಲಿತಾಂಶವೇ ಸಾಕ್ಷಿಯಾಗಿದೆ. ಪರೀಕ್ಷೆ ಮುಗಿದ ಕೇವಲ 10 ನಿಮಿಷದಲ್ಲಿ ಫಲಿತಾಂಶ ನೀಡುವುದು ಸುಲಭದ ವಿಷಯವಲ್ಲ. ಇದಕ್ಕೆ ಸಹಕಾರ ನೀಡಿದ ವಿಟಿಯು ಆಡಳಿತ ಸಿಬ್ಬಂದಿ, ಪರೀಕ್ಷಾ ವಿಭಾಗದ ಸಿಬ್ಬಂದಿ ಮತ್ತು ಸಂಯೋಜಿತ ಕಾಲೇಜುಗಳ ಸಿಬ್ಬಂದಿಗೆ ಅಭಿನಂದನೆ ತಿಳಿಸುತ್ತೇನೆ. ಅಂತಿಮ ವರ್ಷದ ವಿದ್ಯಾರ್ಥಿಗಳು ಉದ್ಯೋಗ ಮತ್ತು ಉನ್ನತ ಶಿಕ್ಷಣ ಪಡೆಯಲು ಫಲಿತಾಂಶದ ನಿರೀಕ್ಷೆಯಲ್ಲಿರುತ್ತಾರೆ. ಹೀಗಾಗಿ ನಾವು ಶೀಘ್ರವಾಗಿ ಫಲಿತಾಂಶ ನೀಡಿದ್ದೇವೆ" ಎಂದರು.

**ಫಲಿತಾಂಶದ ಇತಿಹಾಸ:**

2025 ಮೇನಲ್ಲಿ ನಡೆದ 2021ರ ಬ್ಯಾಚ್‌ನ 50,321 ವಿದ್ಯಾರ್ಥಿಗಳ ಫಲಿತಾಂಶವನ್ನು, ಪರೀಕ್ಷೆ ಮುಗಿದ ಒಂದು ಗಂಟೆಯೊಳಗೆ ಫಲಿತಾಂಶವನ್ನು ಪ್ರಕಟಿಸಿತ್ತು. 2024 ಮೇ ನಲ್ಲಿ ನಡೆದ 2020ರ ಬ್ಯಾಚ್‌ನ 37,011 ವಿದ್ಯಾರ್ಥಿಗಳ ಫಲಿತಾಂಶವನ್ನು ಪರೀಕ್ಷೆ ಮುಗಿದ 3 ಗಂಟೆಯಲ್ಲಿ ಪ್ರಕಟಿಸಿತ್ತು. 2023ರಲ್ಲಿ ನಡೆದ 2019ರ ಬ್ಯಾಚ್‌ನ ವಿದ್ಯಾರ್ಥಿಗಳ ಫಲಿತಾಂಶವನ್ನು ಪರೀಕ್ಷೆ ಮುಗಿದ ಎರಡನೇ ದಿನಗಳಲ್ಲಿ ನೀಡಿತ್ತು. ಆ ವೇಳೆ 43,662 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದರು.

ವಿಟಿಯು ಕುಲಸಚಿವ ಪ್ರೊ. ಯು.ಜೆ.ಉಜ್ವಲ್, ನಾವು ಉತ್ತರ ಪತ್ರಿಕೆಗಳನ್ನು ಡಿಜಿಟಲ್ ಮೌಲ್ಯಮಾಪನ ಮಾಡಲಿದ್ದು, ಫಲಿತಾಂಶವನ್ನು ಶೀಘ್ರವಾಗಿ ಪ್ರಕಟಿಸಲು ಸಿದ್ಧತೆ ನಡೆಸಲಾಗಿತ್ತು. ಎಲ್ಲರ ಸಹಕಾರದಿಂದ ಇದು ಸಾಧ್ಯವಾಗಿದೆ" ಎಂದರು.

## ಸಿಇಟಿ: ಸಿಬಿಎಸ್‌ಇ, ಬೇರೆ ರಾಜ್ಯಗಳ ಅಭ್ಯರ್ಥಿಗಳ ಅಂಕ ದಾಖಲಿಸಲು ಲಿಂಕ್ ಬಿಡುಗಡೆ

**ಬೆಂಗಳೂರು, ಮೇ 22:** ಸಿಬಿಎಸ್‌ಇ, ಸಿಐಎಸ್‌ಸಿಇ ಮತ್ತು ಇತರೆ ರಾಜ್ಯ ಪರೀಕ್ಷಾ ಮಂಡಳಿಗಳಿಂದ 12ನೇ ತರಗತಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ತಮ್ಮ ಅಂಕಗಳನ್ನು ಪರಿಶೀಲಿಸಿ ದೃಢೀಕರಿಸಲು ಹಾಗೂ ಅಂಕಪಟ್ಟಿ ಅಪ್‌ಲೋಡ್ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವೆಬ್‌ಸೈಟ್‌ನಲ್ಲಿ ಲಿಂಕ್ ಬಿಡುಗಡೆ ಮಾಡಿದೆ.

ನಿಗದಿತ ಲಿಂಕ್ ಮೂಲಕ ಲಾಗಿನ್ ಆದ ತಕ್ಷಣ ಅಭ್ಯರ್ಥಿಗಳಿಗೆ ತಮ್ಮ ಅಂಕಗಳು ಪ್ರದರ್ಶನವಾಗುತ್ತದೆ. ಅವು ಸರಿ ಇದ್ದರೆ ದೃಢೀಕರಿಸಬೇಕು. ಒಂದು ವೇಳೆ ಇದುವರೆಗೂ ಅಂಕಗಳನ್ನು ನಮೂದಿಸದೇ ಇದ್ದರೆ ಅಂತಹವರು ಕೂಡ ಅಂಕಗಳನ್ನು ದಾಖಲಿಸಬಹುದು.

ನಂತರ ಅದಕ್ಕೆ ಪೂರಕವಾದ ಅಂಕಪಟ್ಟಿಯನ್ನು ಅಪ್‌ಲೋಡ್ ಮಾಡಬೇಕು. ಇದೆಲ್ಲ ಮಾಡಲು ಮೇ 24ರವರೆಗೂ ಅವಕಾಶ ನೀಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಅವರು ತಿಳಿಸಿದ್ದಾರೆ.

ಅಭ್ಯರ್ಥಿಗಳು ಧೃಡೀಕರಿಸಿ ಸಲ್ಲಿಸುವ ಅಂಕಗಳನ್ನೇ ನಿಯಮಾನುಸಾರ ಮೆರಿಟ್ ನಿರ್ಧರಿಸಲು ಉಪಯೋಗಿಸಲಾಗುವುದು ಹಾಗೂ ಸೀಟು ಹಂಚಿಕೆಯ ನಂತರ ಆಯಾ ಕಾಲೇಜಿನಲ್ಲಿ ಪ್ರವೇಶ ಪಡೆಯುವ ಸಂದರ್ಭದಲ್ಲಿ ಅಂಕಗಳನ್ನು ಪರಿಶೀಲಿಸಲಾಗುವುದು.

ಅಭ್ಯರ್ಥಿಗಳು ತಪ್ಪು ಮಾಹಿತಿ ನೀಡಿದಲ್ಲಿ ಸೀಟು ರದ್ದುಗೊಳ್ಳುತ್ತದೆ ಮತ್ತು ಅಭ್ಯರ್ಥಿ ತನವನ್ನು ತೆಗೆದು ಹಾಕಲಾಗುವುದು ಎಂದು ಎಚ್ಚರಿಸಿದ್ದಾರೆ. ಹಾಗೂ 2026 ಹಾಗೂ ಅದಕ್ಕಿಂತ ಮೊದಲಿನ ವರ್ಷಗಳಲ್ಲಿ ಉತ್ತೀರ್ಣರಾದವರು ಕೂಡ ಅಂಕಗಳನ್ನು ದಾಖಲಿಸ ಬಹುದು ಎಂದು ವಿವರಿಸಿದ್ದಾರೆ.

ರಾಜ್ಯ ಪಠ್ಯಕ್ರಮದಲ್ಲಿ ಓದಿದ ಅಭ್ಯರ್ಥಿಗಳ ಅಂಕಗಳ ವಿವರವನ್ನು ಆನ್ ಲೈನ್ ಮೂಲಕ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಲಭ್ಯವಾಗಲಿದೆ. ಹೀಗಾಗಿ ರಾಜ್ಯ ಮಂಡಳಿಯ ಅಭ್ಯರ್ಥಿಗಳು ಅಂಕ ದಾಖಲಿಸುವ ಅಗತ್ಯ ಇಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.



ಬೆಂಗಳೂರಿನ ಜೆಡಿಎಸ್ ಪ್ರಧಾನ ಕಚೇರಿಯಲ್ಲಿ ಶುಕ್ರವಾರ ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಜೆಡಿಎಸ್ ಬೆಂಗಳೂರುನಗರಾಧ್ಯಕ್ಷ ಎಚ್.ಎಂ.ರಮೇಶ್‌ಗೌಡ, ಮಾಜಿ ಶಾಸಕ ಕೆ.ಎ.ತಿಪ್ಪೇಸ್ವಾಮಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಜೂ.1ರಂದು ಕೆಪಿಎಸ್ ಶಾಲೆಗಳ ಉದ್ಘಾಟನೆ: ಕಾರ್ಯಕ್ರಮದ ವೇದಿಕೆ ಕಾಮಗಾರಿ ವೀಕ್ಷಿಸಿದ ಸಚಿವ ಮಧು ಬಂಗಾರಪ್ಪ

**ಶಿವಮೊಗ್ಗ, ಮೇ 22:** ಜೂನ್ 1ರಂದು ಸಿಎಂ ಸಿದ್ದರಾಮಯ್ಯನವರು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಉದ್ಘಾಟನೆ ಮಾಡಲಿದ್ದಾರೆ ಎಂದು ಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ.

ರಾಜ್ಯದಲ್ಲಿ ನಮ್ಮ ಸರ್ಕಾರದಲ್ಲಿ ಕೆಪಿಎಸ್ ಶಾಲೆಗಳ ಉದ್ಘಾಟನೆ ನೆರವೇರಲಿದೆ. ಇದು ನಮ್ಮ ಶಿಕ್ಷಣ ಇಲಾಖೆಯ ಸಾಧನೆಯಾಗಿದೆ. ಜೂನ್ 1ರಂದು 1 ಸಾವಿರ ಕೆಪಿಎಸ್ ಶಾಲೆಗಳ ಶಂಕುಸ್ಥಾಪನೆ ನೆರವೇರಲಿದೆ. ನಿನ್ನೆ ಪಿಯುಸಿ ಪರೀಕ್ಷೆಯ ಎರಡನೇ ಫಲಿತಾಂಶದಲ್ಲಿ ಶೇ.92ರಷ್ಟು ಸಾಧನೆ ತೋರಿದ್ದೇವೆ ಎಂದರು.

ನಮ್ಮ ಇಲಾಖೆಯಲ್ಲಿ ಬಹಳಷ್ಟು ನ್ಯೂನತೆ ಸರಿಪಡಿಸಿದ್ದೇವೆ. ರಾಜ್ಯದಲ್ಲಿ ಕಳೆದ ಬಾರಿ ಶೇ. 62ರಷ್ಟು ಮಕ್ಕಳು ಪಾಸ್ ಆಗಿದ್ದರು. ಈ ಬಾರಿ ಶೇ. 66.5 ರಷ್ಟು ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಇದು ಕೂಡ ನಮ್ಮ ಇಲಾಖೆಯ ಸಾಧನೆಯಾಗಿದೆ. ಮೊದಲು ಮಕ್ಕಳು ಶಿಕ್ಷಕರಿಗೆ ಹುಡುಕುವಂತಾಗುತ್ತಿತ್ತು, ಆದರೆ ಈಗ ಶಿಕ್ಷಕರು ಮಕ್ಕಳನ್ನು ಹುಡುಕುತ್ತಿದ್ದಾರೆ. ನಮ್ಮ ಶಿಕ್ಷಣ ಇಲಾಖೆಯಲ್ಲಿ ಬಹಳಷ್ಟು ಬದಲಾವಣೆಯಾಗಿದೆ. ಸರ್ಕಾರಿ ಶಾಲೆಯಲ್ಲಿ ಬಹಳಷ್ಟು ಬದಲಾವಣೆ ಮಾಡಿದ್ದೇವೆ. ಎಲ್ಲೆಡೆ ಗುಣಮಟ್ಟದ ಶಿಕ್ಷಣ ನೀಡಲು ನಾವು ಬದ್ಧರಾಗಿದ್ದೇವೆ. ತೆಲಂಗಾಣದಲ್ಲಿ ಪಬ್ಲಿಕ್ ಶಾಲೆಗಳು ಆರಂಭವಾಗಿದ್ದು, ಅವರು ಸಹ ನಮ್ಮ ಜೊತೆಗೆ ಮಾತುಕತೆ ನಡೆಸುತ್ತಿದ್ದಾರೆ. ಅದರಂತೆ ಕರ್ನಾಟಕದಲ್ಲಿ ಪಬ್ಲಿಕ್ ಶಾಲೆಗಳ ಆರಂಭಕ್ಕೆ ಮುಂದಾಗಿದ್ದೇವೆ ಎಂದು ಮಾಹಿತಿ ನೀಡಿದರು.

ಶಿವಮೊಗ್ಗ ಜಿಲ್ಲೆಯಲ್ಲಿ 19 ಕೆಪಿಎಸ್ ಶಾಲೆ, ಶಿವಮೊಗ್ಗದಲ್ಲಿ ನಗರದಲ್ಲಿ 7 ಪಬ್ಲಿಕ್ ಶಾಲೆಗಳು ಆರಂಭವಾಗುತ್ತಿವೆ. ಒಂದು ಶಾಲೆಗೆ 3.5 ಕೋಟಿ ರೂ. ಖರ್ಚಾಗುತ್ತಿದೆ. ಜೂನ್, ಜುಲೈ ಒಳಗೆ ಎಲ್ಲಾ ಕೆಪಿಎಸ್ ಶಾಲೆಗಳ ಆರಂಭಿಸಲಾಗುವುದು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಅನೇಕ ಸಚಿವರು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಅಂದಿನ ಕಾರ್ಯಕ್ರಮದ ಬಳಿಕ ಮಕ್ಕಳ ಜೊತೆ ಸಿಎಂ ಅವರು ಊಟ ಮಾಡಲಿದ್ದಾರೆ. 600ಕ್ಕೂ ಹೆಚ್ಚು ಅಂಕ ಪಡೆದ ಸುಮಾರು 900 ಮಕ್ಕಳಿಗೆ ವೇದಿಕೆ ಮುಂಭಾಗ ಕೂರಿಸಿ ಗೌರವ ನೀಡಲಾಗುವುದು. ಕೆಲವು ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಗುವುದು. ಕೆಲವು ಯೋಜನೆಗಳನ್ನು ಆರಂಭಿಸಲಾಗುತ್ತಿದೆ. ಜುಲೈ ಒಳಗೆ ಎಲ್ಲಾ



ಕೆ.ಪಿ.ಎಸ್. ಶಾಲೆಗಳ ಶಂಕುಸ್ಥಾಪನೆ ನೆರವೇರಿಸಲಾಗುವುದು' ಎಂದು ಮಾಹಿತಿ ನೀಡಿದರು.

**ಕ್ಯಾನ್ಸರ್‌ಪೀಡಿತ ಮಕ್ಕಳಿಗಾಗಿಯೇ ಶಾಲೆ**

ಮುಂದುವರೆದು ಮಾತನಾಡಿದ ಮಧು ಬಂಗಾರಪ್ಪ ಅವರು, ಕ್ಯಾನ್ಸರ್ ಪೀಡಿತ ಮಕ್ಕಳ ಶಾಲೆಗಳನ್ನು ಆರಂಭಿಸುವ ಯೋಜನೆಯನ್ನು ಮುಂದಿನ ದಿನಗಳಲ್ಲಿ ತೆಗೆದುಕೊಳ್ಳಲಾಗುವುದು. ಮಾನವೀಯತೆಯ ದೃಷ್ಟಿಯಿಂದ ಈ ಶಾಲೆಗಳನ್ನು ಆರಂಭಿಸಲಾಗುವುದು. ಈ ಯೋಜನೆಯಲ್ಲಿ ಕೇವಲ ಶಿಕ್ಷಣ ಮಾತ್ರವಲ್ಲ ಅದಕ್ಕೆ ಸೂಕ್ತ ವೈದ್ಯರ ಸಲಹೆ ಕೂಡ ಅಗತ್ಯವಿದೆ. ಹೀಗಾಗಿ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ ಯೋಜನೆ ಕೈಗೆತ್ತಿಕೊಳ್ಳಲಾಗುವುದು. ಆ ಶಾಲೆಗಳಿಗೆ ಹಣ ಈಗಾಗಲೇ ಮೀಸಲಿರಿಸಲಾಗಿದೆ. ಆದರೆ ವೈದ್ಯರು ಸೇರಿದಂತೆ ಒಂದು ತಂಡದೊಂದಿಗೆ ಚರ್ಚೆ ನಡೆಸಿ ಯೋಜನೆ ರೂಪುಗೊಳಿಸಬೇಕಿದೆ ಇದಕ್ಕಾಗಿ ಸಮಯ ಬೇಕಾಗುತ್ತದೆ' ಎಂದರು.

ಮಳೆಗಾಳಿಗೆ ಹೊಳೆಹೊನ್ನೂರು ಭಾಗದಲ್ಲಿ ನಷ್ಟ ವಿಚಾರವಾಗಿ ಮಾತನಾಡಿದ ಸಚಿವರು, 'ಜಿಲ್ಲಾಧಿಕಾರಿಗಳ ಬಳಿ ವರದಿ ತರಿಸಿಕೊಂಡು ತೀರ್ಮಾನಿಸಲಾಗುವುದು. ವಿಶೇಷ ಅನುದಾನದ ಬಗ್ಗೆ ಮುಖ್ಯಮಂತ್ರಿಗಳ ಬಳಿ ಚರ್ಚಿಸಿದ್ದೇವೆ. ಸಿಎಂ ರಿಲೀಫ್ ಫಂಡ್ ಹಾಗೂ ಎನ್.ಡಿ.ಆರ್.ಎಫ್. ಪರಿಹಾರ ವಿತರಣೆಗೆ ಕ್ರಮ ವಹಿಸಲಾಗಿದೆ. ವರದಿ ತರಿಸಿಕೊಂಡು ವಿಶೇಷ ಪ್ಯಾಕೇಜ್ ಘೋಷಿಸಲು ಚರ್ಚಿಸಿದ್ದೇವೆ. ಮರಗಳು ಬಹಳಷ್ಟು ಬಿದ್ದು ಹೋಗಿದ್ದು ವಿಶೇಷ ಪರಿಹಾರ ನೀಡಲೇಬೇಕಿದೆ' ಎಂದರು.'ಶಾಲೆಗಳಿಗೆ ವಿದ್ಯಾರ್ಥಿಗಳು ಕೇಸರಿ ಶಾಲು ಹಾಕಿಕೊಂಡು ಬನ್ನಿ ಎಂದು ಹೇಳಲು ಬಿಜೆಪಿಯವರಿಗೆ ನಾಚಿಕೆಯಾಗಬೇಕು. ಮಹಾರಾಷ್ಟ್ರದಲ್ಲಿ ಬೇರೆ ರೀತಿ, ಇಲ್ಲಿ ಹೊಟ್ಟೆಕಿಚ್ಚಿಗೆ ಮಾಡುವುದು ಸರಿಯಲ್ಲ. ಕೇಂದ್ರೀಯ ವಿದ್ಯಾಲಯದಲ್ಲಿ ಹಿಜಾಬ್ ಹಾಕಲು ಅವಕಾಶವಿದೆ. ಆದರೆ ಶಾಲೆಯಲ್ಲಿ ಇದಕ್ಕೆ ಅವಕಾಶವಿಲ್ಲ ಅಂದ್ರೆ ಹೇಗೆ?', ಎಂದು ಸಚಿವ ಮಧು ಬಂಗಾರಪ್ಪ ಅವರು ಪ್ರಶ್ನಿಸಿದರು.

# ಕಲಬುರಗಿಯಲ್ಲಿ ಪ್ರಬುದ್ಧ ಅಕಾಡೆಮಿ, ಐಎಎಸ್-ಕೆಎಎಸ್ ಪರೀಕ್ಷೆ ಉಚಿತ ತರಬೇತಿಗೆ ಸಿದ್ಧತೆ



**ಕಲಬುರಗಿ, ಮೇ. 22:** ಜಿಲ್ಲಾಡಳಿತ, ಸಮಾಜ ಕಲ್ಯಾಣ ಇಲಾಖೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸಂಯೋಗದೊಂದಿಗೆ ನಗರದ ಅಟಲ್ ಬಿಹಾರಿ ವಾಜಪಾಯಿ ಬಡಾವಣೆಯಲ್ಲಿ ಸ್ಥಾಪಿಸಲಾಗಿರುವ ಪ್ರಬುದ್ಧ ಅಕಾಡೆಮಿ ವತಿಯಿಂದ ಐಎಎಸ್ ಮತ್ತು ಕೆಎಎಸ್ ಪರೀಣಾಮ ಕಾರಿಯಾಗಿ ಉಚಿತ ತರಬೇತಿಗೆ ವ್ಯವಸ್ಥೆ ಮಾಡಿದೆ. ಈಗಾಗಲೇ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಮಾತ್ರ ಈ ಉಚಿತ ತರಬೇತಿ ಸೀಮಿತವಾಗಿದ್ದು, ಯಾವುದೇ ಪದವಿ ಹೊಂದಿರುವ ಅಥವಾ ಅಂತಿಮ ವರ್ಷದ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರು.

ಕನಿಷ್ಠ 21 ವರ್ಷ ಮತ್ತು ಗರಿಷ್ಠ 37 ವರ್ಷ ವಯೋಮಿತಿಯೊಳಗಿರಬೇಕು. ಅರ್ಜಿ ಸಲ್ಲಿಸಲು ಮೇ 21ಕೊನೆ ದಿನ.10 ತಿಂಗಳು ತರಬೇತಿ ಆಯ್ಕೆಯಾದ ಅಭ್ಯರ್ಥಿಗಳಿಗೆ ದೇಶದ ಪ್ರತಿಷ್ಠಿತ ತರಬೇತಿ ಸಂಸ್ಥೆಯಿಂದ 10 ತಿಂಗಳು ಉಚಿತ ಮತ್ತು ಗುಣಮಟ್ಟದ ತರಬೇತಿ ನೀಡಲಾಗುತ್ತದೆ. ಪೂರ್ವಭಾವಿ ಪರೀಕ್ಷೆ, ಮುಖ್ಯ ಪರೀಕ್ಷೆ ಹಾಗೂ ಸಂದರ್ಶನ ಒಳಗೊಂಡಂತೆ ಮೂರೂ ಹಂತಗಳಿಗೆ ಸಂಪೂರ್ಣ ಮಾರ್ಗದರ್ಶನ ನೀಡಲು ಪ್ರಬುದ್ಧ ಅಕಾಡೆಮಿ ಉದ್ದೇಶಿಸಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ವಿಶೇಷ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ, ಸಂಪೂರ್ಣ ಅರ್ಹತೆ ಮತ್ತು ಪಾರದರ್ಶಕತೆಯ ಆಧಾರದ ಮೇಲೆ 500 ವಿದ್ಯಾರ್ಥಿಗಳನ್ನು ತರಬೇತಿಗಾಗಿ ಆಯ್ಕೆ ಮಾಡಲಾಗುತ್ತದೆ. ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಹೆಚ್ಚಿಸುವ ಮತ್ತು ಅವರಿಗೆ ಉನ್ನತ ಭವಿಷ್ಯ ರೂಪಿಸುವ ಮಹತ್ವದ ಉದ್ದೇಶದೊಂದಿಗೆ ಕಲಬುರಗಿಯಲ್ಲಿ ಅತ್ಯಾಧುನಿಕ ಪರೀಕ್ಷಾ ಪೂರ್ವ ತರಬೇತಿ ಕೇಂದ್ರ ಸ್ಥಾಪಿಸಲಾಗಿದೆ.

ಆಧುನಿಕ ತಂತ್ರಜ್ಞಾನ ಸೌಲಭ್ಯ : ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬಹುದು. ಪ್ರಬುದ್ಧ ಅಕಾಡೆಮಿಯು ಆಧುನಿಕ ತಂತ್ರಜ್ಞಾನ ಹೊಂದಿದ್ದು, ತಲಾ 125 ಆಸನ ಸಾಮರ್ಥ್ಯದ 4 ವಿಶಾಲವಾದ ತರಬೇತಿ ಕೊಠಡಿ ಸೇರಿ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳನ್ನೊಳಗೊಂಡ ಸುಸಜ್ಜಿತ ಗ್ರಂಥಾಲಯ ಮತ್ತು ಡಿಜಿಟಲ್ ಲೈಬ್ರರಿ, ಸ್ವಯಂ ಅಧ್ಯಯನಕ್ಕಾಗಿ ಪ್ರತ್ಯೇಕ ಕ್ಯುಬಿಕಲ್ಸ್ ಮತ್ತು ತರಿಂದ ವೈಯಕ್ತಿಕ ಮಾರ್ಗದರ್ಶನಕ್ಕಾಗಿ ಮೆಂಟರಿಂಗ್ ಕೊಠಡಿಗಳು, ರಿಯಾಯಿತಿ ದರದಲ್ಲಿ ಗುಣಮಟ್ಟದ ಆಹಾರ ನೀಡುವ ಉಪಹಾರ ಕೇಂದ್ರ ಮತ್ತು ಪ್ರಶಾಂತ ಶೈಕ್ಷಣಿಕ ವಾತಾವರಣಕ್ಕಾಗಿ ಸುಂದರವಾದ ಗಾರ್ಡನ್ ಸೌಲಭ್ಯವೂ ಇಲ್ಲಿದೆ.

ತರಬೇತಿಯ ವಿಶೇಷತೆ: ಸ್ಪರ್ಧಾತ್ಮಕ ಪರೀಕ್ಷೆ ಗಳ ಪ್ರಸ್ತುತ ಬೇಡಿಕೆಗಳಿಗೆ ತಕ್ಕಂತೆ ಇಲ್ಲಿನ ಬೋಧನಾ ಕ್ರಮ ವಿನ್ಯಾಸಗೊಳಿಸಲಾಗಿದೆ. ವಿದ್ಯಾರ್ಥಿಗಳಲ್ಲಿ ಪರಿಕಲ್ಪನಾತ್ಮಕ ತಿಳಿವಳಿಕೆ, ವಿಶ್ಲೇಷಣಾತ್ಮಕ ಕೌಶಲ, ಪ್ರಚಲಿತ ವಿದ್ಯಮಾನಗಳ ಆಳವಾದ ಜ್ಞಾನ ಮತ್ತು ಸಂದರ್ಶನ ಎದುರಿಸುವ ಕಲೆ, ಆತ್ಮವಿಶ್ವಾಸ ಹೆಚ್ಚಿಸಲು ವಿಶೇಷ ಒತ್ತು ನೀಡಲಾಗುತ್ತದೆ. ಶೈಕ್ಷಣಿಕ ತರಬೇತಿಯ ಜತೆಗೆ ಸಮಗ್ರ ವ್ಯಕ್ತಿತ್ವ ವಿಕಸನ ಮಾರ್ಗದರ್ಶನವನ್ನೂ ನೀಡಲಾಗುತ್ತಿದ್ದು, ಇದು ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮಾನತೆ ತರಲು ಗಣನೀಯ ಕೊಡುಗೆ ನೀಡಲಿದೆ ಎಂದು ತಿಳಿಸಿದ್ದಾರೆ.

## ಸಾಹಿತಿ ನರಸಿಂಗರಾವ್ ಹೇಮನೂರ ಸಾರಥ್ಯ

# ಕಸಾಪದಿಂದ ಜಿಲ್ಲಾಮಟ್ಟದ ಪ್ರಥಮ ಕವಿ ಸಮ್ಮೇಳನ



**ಕಲಬುರಗಿ, ಮೇ. 22:** ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ಮಾಸಾಂತ್ಯಕ್ಕೆ ಹಮ್ಮಿಕೊಂಡಿರುವ ಹಿರಿಯ ಸಾಹಿತಿ ನರಸಿಂಗರಾವ್ ಹೇಮನೂರ ಸರ್ವಾಧ್ಯಕ್ಷತೆಯಲ್ಲಿ ಜಿಲ್ಲಾ ಪ್ರಥಮ ಕವಿ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷ, ಗೌರವಾಧ್ಯಕ್ಷ ಹಾಗೂ ಕಾರ್ಯಾಧ್ಯಕ್ಷರಾಗಿ ನೇಮಕಗೊಂಡಿರುವ ಸುರೇಶ ಪಾಟೀಲ ಜೋಗೂರ, ಶಿವಾನಂದ ಹೊನಗುಂಟಿ, ರಾಜೇಶ್ವರಿ ಸಾಹು ಅವರನ್ನು ಕನ್ನಡ ಭವನದಲ್ಲಿ ಬುಧವಾರ ಸತ್ಕರಿಸಿ, ಸಮ್ಮೇಳನದ ಜವಾಬ್ದಾರಿ ವಹಿಸಲಾಯಿತು.

ಕಸಾಪ ಜಿಲ್ಲಾಧ್ಯಕ್ಷ ವಿಜಯ ಕುಮಾರ ಪಾಟೀಲ್ ಮಾತನಾಡಿ, ಹೊಸ ಪೀಳಿಗೆಯಲ್ಲಿ ಸಾಹಿತ್ಯ ಆಸಕ್ತಿ ಹೆಚ್ಚಾಗಲು ಮತ್ತು ಇನ್ನಷ್ಟು ಬೆಳೆಯಲು ಈ ಸಮ್ಮೇಳನ ಪೂರಕವಾಗಲಿದೆ. ಆ ಮೂಲಕ ಕನ್ನಡ ಸಾಹಿತ್ಯ ಪರಂಪರೆ ಗಟ್ಟಿಗೊಳ್ಳುತ್ತದೆ. ಸಮಾಜದಲ್ಲಿನ ಪ್ರಚಲಿತ ಘಟನೆಗಳ ಬಗ್ಗೆ ಕಾವ್ಯ ಕಟ್ಟಿಕೊಡುವ ಮೂಲಕ ಈ ಸಮಾಜವನ್ನು ಸ್ವಚ್ಛವಾಗಿಟ್ಟುಕೊಳ್ಳುವಲ್ಲಿ ಇಂದಿನ ಬರಹಗಾರರ ಪಾತ್ರ ಬಹು ದೊಡ್ಡದಿದೆ ಎಂದರು.

> ಕವಿ ಸಮ್ಮೇಳನ ಅನೇಕ ಉದಯೋನ್ಮುಖ ಕವಿಗಳಲ್ಲಿ ಹೊಸ ಸಂಚಲನ ಮೂಡಿಸುವ ಭರವಸೆ ಹೊಂದಲಾಗಿದೆ. ರಾಜ್ಯಮಟ್ಟದ ಪ್ರತಿಭೆ ಹೊಂದಿರುವ ಜಿಲ್ಲೆಯ ಬರಹಗಾರರಿಗೆ ಈ ಸಮ್ಮೇಳನದಲ್ಲಿ ಅವಕಾಶ ನೀಡಲಾಗುತ್ತಿದೆ.
> – ವಿಜಯಕುಮಾರ ಪಾಟೀಲ್.

ಸತ್ಕಾರ ಸ್ವೀಕರಿಸಿ ಮಾತನಾಡಿದ ಸ್ವಾಗತ ಸಮಿತಿಯ ಸುರೇಶ ಪಾಟೀಲ ಜೋಗೂರ, ಶಿವಾನಂದ ಹೊನಗುಂಟಿ ಹಾಗೂ ರಾಜೇಶ್ವರಿ ಸಾಹು ಅವರು, ಈ ನೆಲ ಕನ್ನಡ ಸಾರಸ್ವತ ಲೋಕಕ್ಕೆ ಬಹು ದೊಡ್ಡ ಕೊಡುಗೆ ನೀಡಿದೆ. ಕನ್ನಡಭಾಷೆಗೆ ವಚನ ಸಾಹಿತ್ಯ ಪುನರ್ಜನ್ಮ ನೀಡಿದೆ. ಅಂತಹ ಶ್ರೇಷ್ಠ ಕನ್ನಡ ಭಾಷೆ ಉಳಿಸಿ, ಬೆಳೆಸುವಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಉತ್ತಮ ಕೆಲಸ ಮಾಡಿದೆ. ಕವಿ ಸಮ್ಮೇಳನಕ್ಕೆ ಸಹಕರಿಸುವುದಾಗಿ ಹೇಳಿದರು.

ಕೇಂದ್ರ ಕಸಾಪ ಪ್ರತಿನಿಧಿ ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ಜಿಲ್ಲಾ ಕಸಾಪದ ಶಿವರಾಜ ಅಂಡಗಿ, ಶರಣರಾಜ ಛಪಬಂದಿ, ಸಿದ್ಧಲಿಂಗ ಬಾಳಿ, ಪ್ರಭುಲಿಂಗ ಮೂಲಗೆ, ಸೋಮಶೇಖರಯ್ಯಾ ಹೊಸಮಠ, ದಿನೇಶ ಮದಕರಿ, ಬಸಯ್ಯಾ ಸ್ವಾಮಿ, ಶ್ವೇತಾ ಪಾಟೀಲ ಚಿತ್ತಾಪೂರ, ಧರ್ಮರಾಜ ಜವಳಿ, ಬಾಬುರಾವ್ ಪಾಟೀಲ್, ಚಂದ್ರಕಲಾ ಪಾಟೀಲ್, ಅಂಬರೀಶ ನೂಲಾ, ಗುರುರಾಜ ಕೋರವಾರ, ರಾಜಕುಮಾರ, ರೇವಣಸಿದ್ದ ಹೊಟ್ಟಿ ಇತರರಿದ್ದರು.

## ಮರಳು ಮಾಫಿಯಾದ ಮಾಸ್ಟರ್ ಪ್ಲಾನ್

# ಕೋಟಿಗಳ ದಂಡ ಬಾಕಿ ಇದ್ದರೂ ಮೀಸೆಗೆ ಸಂಪಂಗಿ ಎಣ್ಣೆ ಹಾಕಿಕೊಂಡು ಓಡಾಡ್ತಿದ್ದಾರಾ : ರಾಮಕೃಷ್ಣ ರಾವ್



**ಬಳ್ಳಾರಿ, ಮೇ 22:** ಗಣಿನಾಡು ಬಳ್ಳಾರಿಯಲ್ಲಿ ಈಗ ಮರಳು ದಂಧೆಯದ್ದೇ ಭಾರಿ ಚರ್ಚೆ. ನೈಸರ್ಗಿಕ ಸಂಪನ್ಮೂಲವಾದ ಮರಳು ಸಾಮಾನ್ಯ ಜನರಿಗೆ ಚಿನ್ನದ ಬೆಲೆಗೆ ಸಿಗುತ್ತಿರುವಾಗ, ಕೆಲ ಮರಳು ಗುತ್ತಿಗೆದಾರರು ಮತ್ತು ಲೀಸ್‌ದಾರರು ಸರ್ಕಾರದ ನಿಯಮಗಳನ್ನೇ ಗಾಳಿಗೆ ತೂರಿ ಕೋಟ್ಯಂತರ ರೂಪಾಯಿ ವಂಚನೆ ನಡೆಸಿದ್ದಾರೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

ಜಿಲ್ಲೆಯ ನದಿ ತೀರಪ್ರದೇಶಗಳಲ್ಲಿ ನಡೆಯುತ್ತಿರುವ ಮರಳು ವ್ಯಾಪಾರ ಈಗ ಮಾಫಿಯಾ ಸಾಮ್ರಾಜ್ಯದ ರೂಪ ಪಡೆದುಕೊಂಡಿದೆ ಎಂದು ಹೋರಾಟಗಾರರು ಆರೋಪಿಸಿದ್ದಾರೆ. ಸರ್ಕಾರದಿಂದ ನಿರ್ದಿಷ್ಟ ಪ್ರಮಾಣಕ್ಕೆ ಮಾತ್ರ ಅನುಮತಿ ಪಡೆದು, ಬಳಿಕ ಅದಕ್ಕಿಂತ ಹೆಚ್ಚಾಗಿ ಅಕ್ರಮವಾಗಿ ಮರಳು ಸಾಗಣೆ ನಡೆಸಿ ಸರ್ಕಾರಕ್ಕೆ ಭಾರಿ ನಷ್ಟ ಉಂಟು ಮಾಡಲಾಗಿದೆ ಎನ್ನಲಾಗಿದೆ. ಬಳ್ಳಾರಿ ತಾಲೂಕಿನ ಕರ್ಚೇಡು ಗ್ರಾಮದ ಸರ್ವೇ ನಂ.191ರಲ್ಲಿ ಮರಳು ಸಾಗಣೆಗೆ ಅನುಮತಿ ಪಡೆದಿದ್ದ Maruti Infrastructure Developer ಸಂಸ್ಥೆಯ ವಿರುದ್ಧ ಇದೀಗ ಭಾರಿ ಆರೋಪ ಕೇಳಿಬಂದಿದೆ. ರಾಘವ ಪೋರ್ಟ್ ಅಪಾರ್ಟ್‌ಮೆಂಟ್, ವಿದ್ಯಾನಗರ ಮೂಲದ ಉದ್ಯಮಿ ಅವರಿಗೆ ಸೇರಿದ ಈ ಸಂಸ್ಥೆ ಸರ್ಕಾರಕ್ಕೆ 8,60,77,920 ದಂಡ ಪಾವತಿಸಬೇಕಿದೆ ಎಂದು ಹೋರಾಟಗಾರರು ಆರೋಪಿಸಿದ್ದಾರೆ.

ಪೂರ್ತಿ ಪ್ರಮಾಣದ ಮರಳು ಸಾಗಣೆಗೆ ಮಾತ್ರ ಅನುಮತಿ ಇದ್ದರೂ, ನಿಯಮ ಉಲ್ಲಂಘನೆ ಮಾಡಿ ಕಡಿಮೆ ಗಣಿಗಾರಿಕೆ ನಡೆಸಲಾಗಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಇದರಿಂದ ಸರ್ಕಾರಕ್ಕೆ ಕೋಟಿಗಟ್ಟಲೆ ನಷ್ಟ ಆಗಿದೆ, ಇದು ಮಾಫಿಯಾ ಪ್ಲಾನ್ ಆಗಿದೆ.

# 55 ವಿದ್ಯಾರ್ಥಿನಿಯರಿಗೆ 4.42 ಲಕ್ಷ ವಿದ್ಯಾರ್ಥಿ ವೇತನ ವಿತರಣೆ

**ಬೀದರ್, ಮೇ. 22:** ನಗರದ ನೌಬಾದ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ 55 ವಿದ್ಯಾರ್ಥಿನಿಯರಿಗೆ 4.42 ಲಕ್ಷ ವಿದ್ಯಾರ್ಥಿ ವೇತನ ವಿತರಿಸಲಾಯಿತು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನೌಬಾದ್, ಮಲಬಾರ್ ಚಾರಿಟಬಲ್ ಟ್ರಸ್ಟ್, ಮಲಬಾರ್ ಗೋಲ್ಡ್ ಆಯಂಡ್ ಡೈಮಂಡ್ಸ್ ಬೀದರ್ ಸಂಸ್ಥೆಯು 'ಮಹಿಳಾ ಸಬಲೀಕರಣ' ಯೋಜನೆಯ ಅಡಿಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿನಿಯರ ಶಿಕ್ಷಣ, ವಸತಿ, ಉದ್ಯೋಗ, ಆರೋಗ್ಯ ಸಾಮರ್ಥ್ಯ ವೃದ್ಧಿಸಲು ಈ ಯೋಜನೆ ರೂಪಿಸಿದೆ.

ಅಕ್ಕಪಡೆಯ ರಾಜ್ಯ ಸಲಹೆಗಾರರಾದ ಶ್ರೀಮತಿ ಶೈನಿ ರಾಜೇಂದ್ರಕುಮಾರ್ ಅವರು ಮಾತನಾಡಿ, ಹಿಂದಿನ ಕಾಲದಲ್ಲಿ ಗನ್ ಹಿಡಿದುಕೊಂಡು ಯುದ್ಧ ಮಾಡುತ್ತಾ ಇದ್ದರು. ಆದರೆ ಇಂದು ನಾವು ನಾವು ಶಿಕ್ಷಣವೆಂಬ ಗನ್ ಹಿಡಿದುಕೊಂಡು ಹೋರಾಡಬೇಕಾಗಿದೆ. ಅದಕ್ಕಾಗಿ ಎಲ್ಲರೂ ಚೆನ್ನಾಗಿ ಓದಬೇಕು. ಶಿಕ್ಷಣ ಕಲಿಕೆಯಿಂದಲೇ ಯಾವುದಾದರೂ ಉತ್ತಮ ಸ್ಥಾನ ಪಡೆಯಲು ಸಾಧ್ಯ ಎಂದರು.



ಬೀದರ ಮಹಾನಗರ ಪಾಲಿಕೆಯ ಸದಸ್ಯ ಮುಹಮ್ಮದ್ ಗೌಸ್, ಅಕ್ಕಪಡೆ ಪೊಲೀಸ್ ಸಹಾಯಕ ಉಪನಿರೀಕ್ಷಕಿ ಸಂಗೀತಾ ಎಮ್.ಬಿ., ಕಾಲೇಜಿನ ಪ್ರಾಂಶುಪಾಲ ಪ್ರೊ. ಶಂಕರ ಕೆ. ಗಣಗೊಂಡ, ರಾಜಕುಮಾರ ಅಲ್ಲೂರೆ, ಬಾಲಸುಬ್ರಮಣ್ಯಂ ಚಾಲಾಕ, ಪ್ರಾಧ್ಯಾಪಕರಾದ ಅಶೋಕ್ ಕೋರೆ, ಸುಚಿತಾನಂದ ಮಲ್ಕಾಪೂರೆ, ಪ್ರೊ. ಶ್ರೀಕಾಂತ ಪಾಟೀಲ, ಎಲಿಶಾ ಡಿ., ಈಶ್ವರಯ್ಯ ಕೊಡಂಬಲ್, ಮುಖ್ಯಸ್ಥ ವಿಷ್ಣು ಎನ್., ಮಾರುಕಟ್ಟೆ ವ್ಯವಸ್ಥಾಪಕ ಅಬ್ದುಲ್ ಮುಬಿನ್, ಅನಿಲಕುಮಾರ ಹತ್ತಿ ಉಪಸ್ಥಿತರಿದ್ದರು.

ಯಾವ ಕೋರ್ಸ ಸಣ್ಣದಲ್ಲ. ಅದು ಕೀಳೆಂದು ಭಾವಿಸಬಾರದು. ಆರ್ಟ್ಸ್, ಸೈನ್ಸ್, ಕಾಮರ್ಸ್ ಯಾವದೇ ಇರಲಿ ಆ ವಿಷಯಗಳಲ್ಲಿ ಭಕ್ತಿ ಇಟ್ಟು ಓದಬೇಕು. ನಮ್ಮದೇ ಆದ ಪ್ರಯತ್ನದಿಂದ ಮುಂದೆ ಬರಬೇಕು. ನೀವು ಯಾವುದೇ ಕೋರ್ಸ್ ಮಾಡಿದರೂ ಸಹ ನಮ್ಮ ಮಲಬಾರ್ ಟ್ರಸ್ಟ್ ಸದಾಕಾಲ ಸಹಾಯ ಸಹಕಾರ ಮಾಡುತ್ತದೆ ಎಂದು ಅವರು ಹೇಳಿದರು.

ಇನ್ನೋರ್ವ ಅತಿಥಿಗಳಾದ ಮಹಾಪೌರರಾದ ಮಹಮ್ಮದ್ ಗೌಸ್ ಅವರು ಮಾತನಾಡಿ, ಮಹಿಳಾ ಸಬಲೀಕರಣ ಮಾಡುವ ಘನ ಉದ್ದೇಶವನ್ನು ಹೊತ್ತು ದೇಶದ ಮೂಲೆ ಮೂಲೆಗೆ ಹೋಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನ ನೀಡಿ ಸಬಲೀಕರಣಗೊಳಿಸುತ್ತಿರುವ ಮಲ ಬಾರ ಟ್ರಸ್ಟ್‌ನ ಕಾರ್ಯ ಶ್ಲಾಘನೀಯ. ಟ್ರಸ್ಟಗಳು ಇಂತಹ ಉತ್ತಮ ಕಾರ್ಯಗಳು ಮಾಡಬೇಕು ಎಂದು ಸಲಹೆ ನೀಡಿದರು.

ಇನ್ನೋರ್ವ ಅತಿಥಿಗಳಾದ ಪೋಲಿಸ್ ಸಹಾಯಕ ಉಪ ನಿರೀಕ್ಷಕಿ ಸಂಗೀತಾ ಎಮ್.ಬಿ., ಅವರು ಮಾತನಾಡಿ, ಕಾಲೇಜಿನಲ್ಲಿ ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿನಿಯರಿಗೆ ಶುಭ ಹಾರೈಸಿ, ವಿದ್ಯಾರ್ಥಿನಿಯರು ಚೆನ್ನಾಗಿ ಓದಿ ಅಧಿಕಾರಿಗಳಾಗಿ ಜೀವನದಲ್ಲಿ ಮುಂದೆ ಬರಬೇಕು. ಈ ಟ್ರಸ್ಟ್ ಮಾಡುತ್ತಿರುವಂತೆ ತಾವು ಸಹ ಸಹಾಯ ಮಾಡುವ ಸಾಮರ್ಥ್ಯ ಪಡೆಯಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ಪ್ರಿನ್ಸಿಪಾಲ್ ಪ್ರೊ. ಶಂಕರ್ ಕೆ. ಗಣಗೊಂಡ್ ಅವರು ಮಾತನಾಡಿ, ಮಹಿಳೆಯರನ್ನು ಸಬಲೀಕರಣ ಗೊಳಿಸಬೇಕೆಂಬ ಯೋಜನೆಯಡಿ ಮಲಬಾರ ಟ್ರಸ್ಟ್ ಕೆಲಸ ಮಾದರಿಯಾಫಿದೆ ಎಂದರು.

# ರಾಷ್ಟ್ರೀಯ ಡೆಂಗ್ಯು ದಿನಾಚರಣೆ: ಸ್ವಚ್ಛತೆಯಿಂದ ಮಾತ್ರ ರೋಗ ನಿಯಂತ್ರಣ ಸಾಧ್ಯ : ಡಾ.ರಾಜಶೇಖರ ಪಾಟೀಲ್



**ಬೀದರ್, ಮೇ.222--** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ನಗರದಲ್ಲಿ ರಾಷ್ಟ್ರೀಯ ಡೆಂಗಿ ದಿನ ಆಚರಿಸಲಾಯಿತು. ಪ್ರಭಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ರಾಜಶೇಖರ್ ಪಾಟೀಲ್ ಯಾಲಿಗೆ ಹಸಿರು ನಿಶಾನೆ ತೋರಿದರು.

ಬಳಿಕ ಮಾತನಾಡಿ, ಡೆಂಗಿ ಮತ್ತು ರೋಗವಾಹಕ ಆಶ್ರಿತ ರೋಗಗಳನ್ನು ಮುನ್ನೆಚ್ಚರಿಕೆಯಿಂದ ತಡೆಗಟ್ಟಬಹುದು. ಇದಕ್ಕಾಗಿ ಜನಜಾಗೃತಿ ಅಗತ್ಯ. ಆದಕಾರಣ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದರು.


ಡೆಂಗಿ ರೋಗವು 'ಈಡಿಸ್' ಜಾತಿಯ ಸೊಳ್ಳೆ ಕಚ್ಚುವುದರಿಂದ ಹರಡುವ ಒಂದು ವೈರಲ್ ಕಾಯಿಲೆಯಾಗಿದೆ. ಈ ಸೊಳ್ಳೆಗಳು ಹೆಚ್ಚಾಗಿ ಹಗಲು ಹೊತ್ತಿನಲ್ಲಿ ಕಚ್ಚುತ್ತವೆ. ಇವು ಶುದ್ಧವಾದ ನಿಂತ ನೀರಿನಲ್ಲಿ ಉತ್ಪತ್ತಿಯಾಗುವುದರಿಂದ ಸಾರ್ವಜನಿಕರು ತಮ್ಮ ಮನೆ ಹಾಗೂ ಸುತ್ತಮುತ್ತಲಿನ ಪರಿಸರದಲ್ಲಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಸ್ವಚ್ಛತೆಯಿಂದ ಈ ರೋಗ ಹರಡದಂತೆ ನಿಯಂತ್ರಿಸಬಹುದು ಎಂದು ತಿಳಿಸಿದರು.

ನೀರು ಸಂಗ್ರಹಣಾ ತೊಟ್ಟಿಗಳು, ಡ್ರಮ್‌ಗಳು, ಸಿಮೆಂಟ್ ತೊಟ್ಟಿಗಳು ಮತ್ತು ಕೂಲರ್‌ಗಳಲ್ಲಿರುವ ನೀರನ್ನು ವಾರಕ್ಕೊಮ್ಮೆ ಕಡ್ಡಾಯವಾಗಿ ಖಾಲಿ ಮಾಡಿ ಒಣಗಿಸಿ ಮರು ಬಳಕೆ ಮಾಡಬೇಕು. ಮನೆಯ ಸುತ್ತಮುತ್ತಲಿನ ಒಡೆದ ಸೀಸೆಗಳು, ಹಳೆಯ ಟೈರ್‌ಗಳು, ಪ್ಲಾಸ್ಟಿಕ್ ಕಪ್‌ಗಳು ಹಾಗೂ ಎಳನೀರಿನ ಗರಿಟೆಗಳಲ್ಲಿ ನೀರು ನಿಲ್ಲದಂತೆ ತಕ್ಷಣ ವಿಲೇವಾರಿ ಮಾಡಬೇಕು. ಸಾರ್ವಜನಿಕರ ಸಹಭಾಗಿತ್ವದಿಂದ ಮಾತ್ರ ಡೆಂಗಿ ಮುಕ್ತ ಬೀದರ್ ಜಿಲ್ಲೆ ಮಾಡಲು ಸಾಧ್ಯ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಶಂಕ್ರೆಪ್ಪ ಬೊಮ್ಮಾ ಮಾತನಾಡಿ, ಡೆಂಗಿ ರೋಗಕ್ಕೆ ಮುಖ್ಯ ಕಾರಣ ಸೊಳ್ಳೆಗಳು. ಸೊಳ್ಳೆ ಕಡಿತದಿಂದ ಮುಕ್ತಿ ಪಡೆಯಲು ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಸಬೇಕು. ಇಡೀ ದೇಹವನ್ನು ಮುಚ್ಚುವ ಬಟ್ಟೆಗಳನ್ನು ಧರಿಸಬೇಕು. ತೀವ್ರ ಜ್ವರ, ಕಣ್ಣುಗಳ ಹಿಂಭಾಗದಲ್ಲಿ ನೋವು, ತಲೆನೋವು ಹಾಗೂ ಕೀಲು ನೋವು ಇಂಥ ಲಕ್ಷಣಗಳು ಕಂಡುಬಂದರೆ ಸಾರ್ವಜನಿಕರು ಯಾವುದೇ ರೀತಿಯ ಸ್ವಯಂ ಮಾತ್ರೆಗಳನ್ನು ತೆಗೆದುಕೊಳ್ಳದೆ, ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಉಚಿತ ರಕ್ತ ಪರೀಕ್ಷೆ ಮತ್ತು ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಬಳಿಕ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಮೂಲಕ ಸಾಗಿದ ರ್‍ಯಾಲಿಯಲ್ಲಿ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಡೆಂಗಿ ತಡೆಗಟ್ಟುವ ಘೋಷಣಾ ಫಲಕಗಳನ್ನು ಹಿಡಿದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

# ಗುಂಡು ಹಾರಿಸಿಕೊಂಡು ಕೆಎಲ್‌ಇ ಆಸ್ಪತ್ರೆ ವೈದ್ಯಾಧಿಕಾರಿ ಆತ್ಮಹತ್ಯೆ



**ಬೆಳಗಾವಿ, ಮೇ 22:** ನಲವತ್ತು ವರ್ಷಗಳಿಂದ ಬೆಳಗಾವಿಯ ಕೆಎಲ್‌ಇ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದ ಹಿರಿಯ ವೈದ್ಯ ಡಾ. ದಿನೇಶ್ ಭಟ್ಕಳ್ ಅವರು ಶುಕ್ರವಾರ ಮಂಡೋಳಿ ರಸ್ತೆಯಲ್ಲಿರುವ ತಮ್ಮ ಮನೆಯಲ್ಲಿ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ದಿನೇಶ್ ಭಟ್ಕಳ ಅವರು ಶುಕ್ರವಾರ ಬೆಳಗ್ಗೆ ಪಿಸ್ತೂಲಿನಿಂದ ಗುಂಡು ಹಾರಿಸಿಕೊಂಡು ಸಾವಿಗೆ ಶರಣಾಗಿದ್ದಾರೆ. ಸಾವಿಗೂ ಮುನ್ನ ಕೆಎಲ್‌ಇ ಮಾಜಿ ಕಾರ್ಯಾಧ್ಯಕ್ಷ ಪ್ರಭಾಕರ ಕೋರೆ ಅವರಿಗೆ ಸಂದೇಶ ಕಳುಹಿಸಿದ್ದಾರೆ.

ಶ್ವಾಸಕೋಶದ ಕ್ಯಾನ್ಸರ್‌ನಿಂದ ಬಳಲುತ್ತಿದ್ದ ದಿನೇಶ್ ಅವರು ಅಂಕೋಲಾ ಮೂಲದವರು ಮತ್ತು ಅಂಕೋಲಾದಲ್ಲಿರುವ ಕೆಎಲ್‌ಇ ಸಂಸ್ಥೆಯ ಆಸ್ಪತ್ರೆಯ ಆಡಳಿತಾಧಿಕಾರಿಯಾಗಿದ್ದರು. ಈಚೆಗೆ ಅವರು ಬೆಳಗಾವಿಯ ಮನೆಗೆ ಬಂದು ನೆಲೆಸಿದ್ದರು.ಕಳೆದ ನಾಲ್ಕು ತಿಂಗಳ ಹಿಂದಷ್ಟೇ ದಿನೇಶ್ ಅವರಿಗೆ ಶ್ವಾಸಕೋಶ ಕ್ಯಾನ್ಸರ್ ಇರುವುದು ಗೊತ್ತಾಗಿತ್ತು. ಚಿಕಿತ್ಸೆಗಾಗಿಯೇ ತಮ್ಮೂರು ಬಿಟ್ಟು ಬೆಳಗಾವಿಯ ಟಿಳಕವಾಡಿಯ ಮಂಡೋಲಿ ರಸ್ತೆಯಲ್ಲಿ ಮನೆ ಮಾಡಿಕೊಂಡು ಕುಟುಂಬಸ್ಥರೊಂದಿಗೆ ವಾಸವಿದ್ದರು.ಶ್ವಾಸಕೋಶ ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಅವರು ಸಹಿಸಲಾಗದ ನೋವನ್ನು ಅನುಭವಿಸುತ್ತಿದ್ದರು ಎನ್ನಲಾಗಿದೆ. ತಮಗಾಗುತ್ತಿರುವ ನೋವಿನ ಕುರಿತು ಆಗಾಗ ತಮ್ಮ ಸ್ನೇಹಿತರೊಡನೆ ಹಂಚಿಕೊಳ್ಳುತ್ತಿದ್ದರು. ಇಂದೂ ಸಹ ಬೆಳಗ್ಗೆ ಎದ್ದ ತಕ್ಷಣ ದಿನೇಶ್ ಅವರಿಗೆ ಎದೆಯಲ್ಲಿ ಸಹಿಸಲಾಗದ ನೋವು ಕಾಣಿಸಿಕೊಂಡಿದೆ. ಹೀಗಾಗಿ, ಅವರು ತಮ್ಮ ಮನೆಯಲ್ಲಿದ್ದ ರಿವಾಲ್ವಾರ್ ತೆಗೆದುಕೊಂಡು ಮನೆಯ ಗ್ಯಾಲರಿ ಬಳಿ ಹೋಗಿ ಅಲ್ಲಿಯೇ ತಲೆಗೆ ಶೂಟ್ ಮಾಡಿಕೊಂಡು ಪ್ರಾಣ ಬಿಟ್ಟಿದ್ದಾರೆ.ವೈದ್ಯ ದಿನೇಶ್ ಆತ್ಮಹತ್ಯೆಗೆ ಶರಣಾಗುವ ಮುನ್ನ ತಮ್ಮ ಹಿತೈಷಿಗಳು ಹಾಗೂ ಮಾರ್ಗದರ್ಶಕರಿಗೆ ವಾಟ್ಸಪ್ ಸಂದೇಶ ರವಾನಿಸಿದ್ದಾರೆ. ಅದರಲ್ಲಿ ಕೆಎಲ್‌ಇ ಮಾಜಿ ಕಾರ್ಯಾಧ್ಯಕ್ಷ ಡಾ.ಪ್ರಭಾಕರ್ ಕೋರೆಯವರಿಗೂ ಸಹ ವಾಟ್ಸಪ್ ಸಂದೇಶ ಕಳಿಸಿದ್ದಾರೆ.'ನನಗೆ ನೀವು ಇಷ್ಟು ವರ್ಷ ಸಹಾಯ ಮಾಡಿದ್ದೀರಿ. ಆದರೆ, ನನಗೆ ತೀವ್ರವಾದ ಎದೆ ನೋವಿದೆ. ನಾನು ನೋವಿನಿಂದ ಬೇಸತ್ತು ಕಠಿಣ ನಿರ್ಧಾರ ತೆಗೆದುಕೊಳ್ಳುತ್ತಿದ್ದೇನೆ. ದಯವಿಟ್ಟು ನನ್ನ ಕುಟುಂಬಕ್ಕೆ ಸಹಾಯ ಮಾಡಿ. ನಗರ ಪೊಲೀಸ್ ಆಯುಕ್ತರಿಗೂ ಮಾಹಿತಿ ನೀಡಿ' ಎಂದು ಸಂದೇಶ ಕಳುಹಿಸಿದ್ದಾರೆ.

ಡಾ. ದಿನೇಶ್ ಅವರ ಆತ್ಮಹತ್ಯೆಯ ಸುದ್ದಿ ಗೊತ್ತಾಗುತ್ತಿದ್ದಂತೆ ಸ್ಥಳೀಯರು ಕೂಡಲೇ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ. ಸ್ಥಳಕ್ಕೆ ಡಿಸಿಪಿ ನಾರಾಯಣ ಭರಮಣಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಬೆಳಗಾವಿಯ ಬೀಮ್ಸ್ ಆಸ್ಪತ್ರೆಗೆ ರವಾನಿಸಿದ್ದಾರೆ.

# ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ನಾರಾ ಭರತ್ ರೆಡ್ಡಿ



**ಬಳ್ಳಾರಿ, ಮೇ.22–**ಯ 3ನೇ ವಾರ್ಡಿನ ಎಪಿಎಂಸಿ ಸರ್ಕಲ್'ನಿಂದ ಡಿವೈಎಸ್ಪಿ ಕಚೇರಿವರೆಗೆ ವಯಾ ಬೆಂಕಿ ಮಾರೆಮ್ಮ ದೇವಸ್ಥಾನದ ರಸ್ತೆಗೆ ಅಂದಾಜು 4.50 ಕೋಟಿ ರೂ.ಗಳ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ನಾರಾ ಭರತ್ ರೆಡ್ಡಿ ಚಾಲನೆ ನೀಡಿದರು.

ಈ ಸಂದರ್ಭ ಪಾಲಿಕೆಯ ಸದಸ್ಯ ಎಂ.ಪ್ರಭಂಜನಕುಮಾರ್, ಕಾಂಗ್ರೆಸ್ ಮುಖಂಡರಾದ ಸುಬರಾಯುಡು, ವಾಸುರೆಡ್ಡಿ, ಸ್ಥಳೀಯರಾದ ಭರತ್, ಕವಿತಾ, ಕುಮಾರನ್ ಮತ್ತಿತರರು ಹಾಜರಿದ್ದರು.

ಅದೇ ರೀತಿ ಬಳ್ಳಾರಿಯ 7ನೇ ವಾರ್ಡಿನ ಬಾಪೂಜಿ ನಗರದ ಕರ್ಮೇಲಾ ಆಸ್ಪತ್ರೆಯ ಪಕ್ಕದಿಂದ ಮುಖ್ಯ ಕಾಲುವೆ, ರಸ್ತೆ ಹಾಗೂ ಬಾಪೂಜಿ ನಗರ ಸರ್ಕಲ್ ಬಳಿ ಕಲ್ವರ್ಟ್ ನಿರ್ಮಾಣಕ್ಕಾಗಿ 1.50 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಲಾಯಿತು. ತದನಂತರ ಬಳ್ಳಾರಿಯ 8ನೇ ವಾರ್ಡಿನ ಆರ್ಡರ್ ಗೇಟ್ ಸರ್ಕಲ್' ಗಂಗಮ್ಮ ನಾಲಾವರೆಗೆ ರಸ್ತೆ ನಿರ್ಮಾಣಕ್ಕಾಗಿ 4 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಶಾಸಕ ನಾರಾ ಭರತ್ ರೆಡ್ಡಿಯವರು ಚಾಲನೆ ನೀಡಿದರು.

# ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮದ ಅಭಿವೃದ್ಧಿಗೆ 10 ಲಕ್ಷ ರೂ.ಗಳ ಚೆಕ್ ವಿತರಿಸಿದ ನಾರಾ ಭರತ್ ರೆಡ್ಡಿ

**ಬಳ್ಳಾರಿ, ಮೇ.22:** ಕಳೆದ ತಿಂಗಳು ನಾನು ನೀಡಿದ ಭರವಸೆಯಂತೆ ನಮ್ಮ ಟಚ್ ಫಾರ್ ಲೈಫ್ ಫೌಂಡೇಶನ್ ವತಿಯಿಂದ ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮಕ್ಕೆ 10 ಲಕ್ಷ ರೂ.ಗಳ ಚೆಕ್ ನೀಡಿರುವೆ, ಆಶ್ರಮದ ಕೆಲಸ ಕಾರ್ಯಗಳು ಸಾಂಗವಾಗಿ ನಡೆಯಲಿ ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಬಳ್ಳಾರಿಯ ಗಾಂಧಿನಗರದಲ್ಲಿರುವ ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮಕ್ಕೆ ಇಂದು ಭೇಟಿ ನೀಡಿ, ಆಶ್ರಮದ ಅಭಿವೃದ್ಧಿಗಾಗಿ 10 ಲಕ್ಷ ರೂ.ಗಳ ಚೆಕ್ ನೀಡಿದರು.



ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮವು ದೇಶ ಹಾಗೂ ಜಗತ್ತಿನಾದ್ಯಂತ ಮಾನವ ಅಭಿವೃದ್ಧಿಗೆ ನೈತಿಕ ತತ್ವ ಸಾರುವ ಕೆಲಸ ಮಾಡುತ್ತಿದ್ದು, ನಗರದಲ್ಲಿಯೂ ಕೂಡ ಮೊದಲಿನಿಂದ ಈ ಮಹತ್ಕಾರ್ಯ ನಡೆಯುತ್ತಿದೆ, ಮುಂದೆ ಕೂಡ ನಡೆಯಲಿ ಎಂದರು.

# ಆನ್ ಲೈನ್ ನೀಟ್ – ಎ.ಐ ತಂತ್ರಜ್ಞಾನ ಉಚಿತ: ಪ್ರಭುರಾಜ್

**ಬಳ್ಳಾರಿ, ಮೇ.22–** ಪ್ಯೂಪಿಲ್ ಟ್ರೀ ಪಿ.ಯು ಕಾಲೇಜು ವತಿಯಿಂದ ವಿಶ್ವದ ಅತ್ಯಾಧುನಿಕ **AI** ತಂತ್ರಜ್ಞಾನ ಆಧಾರಿತ ಸಂಪೂರ್ಣ ಉಚಿತ ಆನ್‌ಲೈನ್ ನೀಟ್ ಶಾರ್ಟ್ ಟರ್ಮ್ ಬ್ಯಾಚ್ ಆರಂಭಿಸಲಾಗುತ್ತಿದೆ ಎಂದು ಪ್ರಭುರಾಜ್ ಘೋಷಿಸಿದರು.

ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣ ದಲ್ಲಿರುವ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ಯೂಪಿಲ್ ಟ್ರೀ ಕಾಲೇಜಿನ ಸ್ಥಾಪಕ ಪ್ರಭುರಾಜ್ ಜಹಗೀರ್‌ಧಾರ್ ಅವರು, ನೀಟ್ 2026 ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗಾಗಿ ಈ ವಿಶೇಷ ಕಾರ್ಯಕ್ರಮವನ್ನು ಮೇ 27ರಿಂದ ಜೂನ್ 13, 2026ರವರೆಗೆ ನಡೆಸಲಾಗುತ್ತಿದ್ದು, ಬಳಿಕ ಜೂನ್ 14ರಿಂದ 20ರವರೆಗೆ ವಿಶೇಷ ರಿವಿಷನ್ ಹಂತ ನಡೆಯಲಿದೆ. ಜೂನ್ 21ರಂದು ನಡೆಯಲಿರುವ ನೀಟ್ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಸಿದ್ಧಗೊಳಿಸುವ ಉದ್ದೇಶದಿಂದ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.



ಭಾರತದ ನೀಟ್ ಇತಿಹಾಸದಲ್ಲೇ ಮೊದಲ ಬಾರಿಗೆ ಯಾವುದೇ ಶುಲ್ಕವಿಲ್ಲದೆ, ಯಾವುದೇ ಷರತ್ತಿಲ್ಲದೆ ಎಲ್ಲಾ ವಿದ್ಯಾರ್ಥಿಗಳಿಗೆ ಮುಕ್ತವಾಗಿ ಈ ಕಾರ್ಯಕ್ರಮವನ್ನು ನೀಡಲಾಗುತ್ತಿದೆ. ಇದು ಸಂಸ್ಥೆಯ ಸಾಮಾಜಿಕ ಸೇವೆಯ ಭಾಗವಾಗಿದೆ ಎಂದು ಹೇಳಿದರು.

ಈ ಶಾರ್ಟ್ ಟರ್ಮ್ ಬ್ಯಾಚ್‌ನ್ನು ಪ್ಯೂಪಿಲ್ ಟ್ರೀ ಎ.ಐ ಮೂಲಕ ನಡೆಸಲಾಗುತ್ತಿದ್ದು, ಇದು ಓಇಇಖಿ ತಯಾರಿಗಾಗಿ ನಿರ್ಮಿಸಲಾದ ಅತ್ಯಾಧುನಿಕ ೦ಐ ಆಧಾರಿತ ಶಿಕ್ಷಣ ವ್ಯವಸ್ಥೆಯಾಗಿದೆ. ಸಾಮಾನ್ಯ ತರಗತಿಗಳಂತೆ ಎಲ್ಲ ವಿದ್ಯಾರ್ಥಿಗಳಿಗೆ ಒಂದೇ ರೀತಿಯ ಪಾಠ ನೀಡುವುದಿಲ್ಲ. ಬದಲಾಗಿ, ಪ್ರತಿ ವಿದ್ಯಾರ್ಥಿಯ ದುರ್ಬಲ ವಿಷಯಗಳು, ತಪ್ಪು ಉತ್ತರಗಳು ಮತ್ತು ಅಂಕ ಕಳೆದುಕೊಳ್ಳುವ ಭಾಗಗಳನ್ನು ವಿಶ್ಲೇಷಿಸಿ, ಅವುಗಳನ್ನು ಸರಿಪಡಿಸುವ ವೈಯಕ್ತಿಕ ಕಲಿಕಾ ವ್ಯವಸ್ಥೆಯನ್ನು ಹೊಂದಿದೆ ಎಂದು ವಿವರಿಸಿದರು.

ಕಾರ್ಯಕ್ರಮದಡಿ ಪ್ರತಿದಿನ ಎರಡು ಸೆಷನ್‌ಗಳು ನಡೆಯಲಿವೆ. ಬೆಳಿಗ್ಗೆ 9.20ರಿಂದ ಮಧ್ಯಾಹ್ನ 2.30ರವರೆಗೆ ಆನ್‌ಲೈನ್ ಪೂರ್ಣಾವಧಿಯ ನೀಟ್ ಅಭ್ಯಾಸ ಪರೀಕ್ಷೆಗಳು ಪರೀಕ್ಷಾ ವಾತಾವರಣದಲ್ಲೇ ನಡೆಯಲಿವೆ. ಮಧ್ಯಾಹ್ನ 2.30ರಿಂದ ಸಂಜೆ 5.20ರವರೆಗೆ ೦ಐ ಆಧಾರಿತ ವೈಯಕ್ತಿಕ ಕಲಿಕಾ ಹಾಗೂ ರಿವಿಷನ್ ತರಗತಿಗಳು ನಡೆಯಲಿವೆ.

ಸಂಸ್ಥೆಯ ಅಧ್ಯಾಪಕ ತಂಡವು ಎರಡು ದಶಕಗಳಿಗಿಂತ ಹೆಚ್ಚು ಕಾಲ ನೀಟ್ ಆಕಾಂಕ್ಷಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದು, ಭಾರತದಾದ್ಯಂತ 5,800ಕ್ಕೂ ಹೆಚ್ಚು ವೈದ್ಯಕೀಯ ಸೀಟುಗಳನ್ನು ಪಡೆದ ವಿದ್ಯಾರ್ಥಿಗಳನ್ನು ರೂಪಿಸಿದೆ. ಅನೇಕ ರಾಷ್ಟ್ರೀಯ ಶ್ರೇಯಾಂಕ ಪಡೆದ ವಿದ್ಯಾರ್ಥಿಗಳು, ಓಇಇಖಿನಲ್ಲಿ 700ರಿಂದ 720 ಅಂಕ ಗಳಿಸಿದ ವಿದ್ಯಾರ್ಥಿಗಳು, **AIIMS, JIPMER**ಸೇರಿದಂತೆ ದೇಶದ ಪ್ರಮುಖ ವೈದ್ಯಕೀಯ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ಹಳೆಯ ವಿದ್ಯಾರ್ಥಿಗಳು ಈ ಸಂಸ್ಥೆಯ ಸಾಧನೆ ಎಂದು ಹೇಳಿದರು.

ಮೊದಲ 100 ವಿದ್ಯಾರ್ಥಿಗಳಿಗೆ ಸಂಪೂರ್ಣ ಉಚಿತ ಪ್ರವೇಶ ನೀಡಲಾಗುತ್ತಿದೆ.

ನೋಂದಣಿಗಾಗಿ ವಿದ್ಯಾರ್ಥಿಯ ಹೆಸರು, ಹುಟ್ಟಿದ ದಿನಾಂಕ, ಮೊಬೈಲ್ ಸಂಖ್ಯೆ, ಇಮೇಲ್ ಐಡಿ, ತರಗತಿ ಹಾಗೂ ವಿಳಾಸ ವಿವರಗಳನ್ನು **WhatsApp** ಮೂಲಕ 9740776883 ಅಥವಾ 9243239325 ಸಂಖ್ಯೆಗೆ ಕಳುಹಿಸುವಂತೆ ಮನವಿ ಮಾಡಿದರು.

# ಅತಿರೇಕದ ಮಟ್ಟ ತಲುಪಿದ ಸಿಎಂ ಮುಸ್ಲಿಂ ಓಲೈಕೆ ರಾಜಕಾರಣ: ಬಸನಗೌಡ ಯತ್ನಾಳ್

**ವಿಜಯಪುರ, ಮೇ22:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತೊಮ್ಮೆ ಆಕ್ರೋಶ ಹೊರಹಾಕಿದ್ದಾರೆ. ಸಿದ್ದರಾಮಯ್ಯ ಅವರ ಮುಸ್ಲಿಂ ಓಲೈಕೆ ರಾಜಕಾರಣ ಅತಿರೇಕದ ಮಟ್ಟಕ್ಕೆ ತಲುಪಿದೆ ಎಂದು ಕಿಡಿಕಾರಿರುವ ಅವರು, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ನೈತಿಕತೆಯನ್ನೂ ಪ್ರಶ್ನಿಸಿದ್ದಾರೆ.

ರಾಜ್ಯ ಸರ್ಕಾರವು ಲಾಡ್ಲೆ ಮಶಾಕ್ ದರ್ಗಾ ವಿವಾದಕ್ಕೆ ಸಂಬಂಧಿಸಿದ ಪ್ರಕರಣವನ್ನು ಹಿಂಪಡೆದಿರುವ ನಿರ್ಧಾರದ ವಿರುದ್ಧ ಯತ್ನಾಳ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮಾಜಿ ಸಂಸದರ ಮೇಲೆ ಕಲ್ಲು ತೂರಾಟ ಮಾಡಿದವರು, ಕೆ.ಜಿ. ಹಳ್ಳಿ ಮತ್ತು ಡಿ.ಜೆ. ಹಳ್ಳಿಯಲ್ಲಿ ಗಲಭೆ ಸೃಷ್ಟಿಸಿದವರು ಹಾಗೂ ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದವರ ಮೇಲಿನ ಪ್ರಕರಣಗಳನ್ನು ಸರ್ಕಾರ ಈಗಾಗಲೇ ಹಿಂಪಡೆದಿದೆ. ಈಗ ಲಾಡ್ಲೆ ಮಶಾಕ್ ಪ್ರಕರಣವನ್ನೂ ಹಿಂಪಡೆಯುವ ಮೂಲಕ ಸಿದ್ದರಾಮಯ್ಯ ಸರ್ಕಾರವು ಅಪರಾಧ ಕೃತ್ಯಗಳಿಗೆ ಮತ್ತಷ್ಟು ಉತ್ತೇಜನ ನೀಡುತ್ತಿದೆ ಎಂದು ಆರೋಪಿಸಿದ್ದಾರೆ.

ಸರ್ಕಾರದ ಇಂತಹ ನಡೆಗಳನ್ನು ತೀವ್ರವಾಗಿ ವಿರೋಧಿಸಬೇಕಾದ ರಾಜ್ಯ ಬಿಜೆಪಿಯಲ್ಲಿ ಸದ್ಯ ನಾಯಕತ್ವದ ಕೊರತೆ ಎದ್ದುಕಾಣುತ್ತಿದೆ ಎಂದು ಯತ್ನಾಳ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬಿ.ವೈ. ವಿಜಯೇಂದ್ರ ಅವರು ಅನೇಕ ವಂಚನೆ ಮತ್ತು ನಕಲಿ ಸಹಿ ಮಾಡಿ ಹಣ ಲೂಟಿ ಹೊಡೆಸಿದ್ದಾರೆ. ಇಂತಹ ಭ್ರಷ್ಟಾಚಾರದ ಹಿನ್ನೆಲೆ ಹೊಂದಿರುವ ವಿಜಯೇಂದ್ರ ಅವರಿಗೆ ಸರ್ಕಾರದ ತಪ್ಪು ನಿರ್ಧಾರಗಳ ವಿರುದ್ಧ ಧ್ವನಿ ಎತ್ತುವ ಯಾವುದೇ ನೈತಿಕತೆ ಉಳಿದಿಲ್ಲ, ಎಂದು ಯತ್ನಾಳ್ ನೇರ ಪ್ರಹಾರ ನಡೆಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಬದಲಾವಣೆ ಹಾಗೂ ಹೈಕಮಾಂಡ್ ನಡೆಸುತ್ತಿರುವ ಸಮೀಕ್ಷೆಯ ಕುರಿತು ಯತ್ನಾಳ್ ತಮ್ಮದೇ ಶೈಲಿಯಲ್ಲಿ ಪ್ರತಿಕ್ರಿಯಿಸಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದ ಆಯ್ಕೆಗಾಗಿ ಕೇವಲ 37 ಜನರನ್ನು ಮಾತ್ರ ಕರೆದು ಅಭಿಪ್ರಾಯ ಕೇಳುತ್ತಿರುವುದು ಸರಿಯಲ್ಲ. ಪಕ್ಷದ ಎಲ್ಲಾ ಹಾಲಿ ಮತ್ತು ಮಾಜಿ ಶಾಸಕರು ಹಾಗೂ ಹಿರಿಯ ಮುಖಂಡರ ಅಭಿಪ್ರಾಯವನ್ನು ಪಡೆಯಬೇಕು ಎಂದು ಒತ್ತಾಯಿಸಿದರು.

ಬಿ.ಎಸ್. ಯಡಿಯೂರಪ್ಪ ಮತ್ತು ವಿಜಯೇಂದ್ರ ಅವರು ನಾಲ್ವರು ಸ್ವಾಮೀಜಿಗಳನ್ನು ಸಾಕಿದ್ದಾರೆ. ವಿಜಯೇಂದ್ರನನ್ನು ಅಧ್ಯಕ್ಷ ಸ್ಥಾನದಿಂದ



ಕೆಳಗಿಳಿಸಿದರೆ ಲಿಂಗಾಯತರು ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸುವುದಿಲ್ಲ ಎಂದು ಆ ಸ್ವಾಮೀಜಿಗಳ ಮೂಲಕ ಅಮಿತ್‌ಶಾ ಅವರಿಗೆ ಫೋನ್ ಮಾಡಿಸುತ್ತಾರೆ. ಇವರ ಮಾತುಗಳನ್ನು ನಂಬಿ ಪ್ರಧಾನಿ ನರೇಂದ್ರ ಮೋದಿ ಅವರು ಸುಮ್ಮನೆ ಕೂರಬಾರದು, ಎಂದರು.

ಸದ್ಯದ ಬಿಜೆಪಿ ರಾಜ್ಯ ಪದಾಧಿಕಾರಿಗಳಲ್ಲಿ ಪಿ. ರಾಜು, ತಳಕೇರಿ ಸೇರಿದಂತೆ ಬಹುತೇಕರು ವಿಜಯೇಂದ್ರನ ಚೇಲಾಗಳಾಗಿದ್ದಾರೆ. ಅವರ ಬಳಿ ಹೋಗಿ ಅಭಿಪ್ರಾಯ ಕೇಳಿದರೆ ಅವರು ವಿಜಯೇಂದ್ರನಿಗೇ ಜೈ ಎನ್ನುತ್ತಾರೆ ಹೊರತು ಸತ್ಯ ಹೇಳುವುದಿಲ್ಲ ಎಂದು ಯತ್ನಾಳ್ ಲೇವಡಿ ಮಾಡಿದ್ದಾರೆ. ಸದ್ಯಕ್ಕೆ ಸಮೀಕ್ಷೆ ನಡೆಸಲು ಬಂದಿರುವ ಇಬ್ಬರು ನಾಯಕರು ಪ್ರಾಮಾಣಿಕರಾಗಿದ್ದು, ಅವರು ನೀಡುವ ವರದಿ ಸರಿಯಾಗಿದ್ದರೆ ಪಕ್ಷಕ್ಕೆ ಒಳ್ಳೆಯದಾಗುತ್ತದೆ. ಇಲ್ಲದಿದ್ದರೆ ಏನೂ ಮಾಡಲು ಸಾಧ್ಯವಿಲ್ಲ ಎಂದು ಯತ್ನಾಳ್ ಬೇಸರ ವ್ಯಕ್ತಪಡಿಸಿದ್ದಾರೆ.




ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸರ್ಕಾರಿ ಪಿಯು ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ಸದಸ್ಯರು ಉದ್ಯೋಗ ಭದ್ರತೆ ಮತ್ತು ಸೇವೆ ನವೀಕರಣಕ್ಕೆ ಒತ್ತಾಯಿಸಿ ಶುಕ್ರವಾರ ಪ್ರತಿಭಟನೆ ನಡೆಸಿದರು.

### ಹುಬ್ಬಳ್ಳಿಯ ಕೆಎಂಸಿಯಲ್ಲಿ ರಾಜ್ಯದ ಮೊದಲ ಐವಿಎಫ್ ಕೇಂದ್ರ

# ಮಕ್ಕಳಿಲ್ಲದ ದಂಪತಿಗೆ ಕಡಿಮೆ ಖರ್ಚಿನಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಲು ಮಹತ್ವದ ಹೆಜ್ಜೆ

**ಹುಬ್ಬಳ್ಳಿ, ಮೇ 22:** ಮಕ್ಕಳಿಲ್ಲದ ದಂಪತಿಗಳಿಗೆ ಅತ್ಯಂತ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆ ಕೆಎಂಸಿ–ಆರ್‌ಐ ಮಹತ್ತರ ಹೆಜ್ಜೆಯಿಟ್ಟಿದೆ. ಇಲ್ಲಿನ ಸ್ತ್ರೀರೋಗ ಹಾಗೂ ಪ್ರಸೂತಿ ವಿಭಾಗದ 2ನೇ ಮಹಡಿಯಲ್ಲಿ ನೂತನ ಕೃತಕ ಗರ್ಭಧಾರಣೆ ಕೇಂದ್ರವನ್ನು ಸಂಪೂರ್ಣ ಸರ್ಕಾರಿ ಮಾದರಿಯಲ್ಲಿ ಆರಂಭಿಸಲಾಗುತ್ತಿದ್ದು, ಇದು ಕರ್ನಾಟಕದಲ್ಲೇ ಇಂತಹ ಮೊದಲ ಸರ್ಕಾರಿ ಐವಿಎಫ್ ಕೇಂದ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಲಿದೆ. ಹುಬ್ಬಳ್ಳಿಯ ಈ ಕೇಂದ್ರದ ಪ್ರಗತಿಯನ್ನು ಗಮನಿಸಿರುವ ರಾಜ್ಯ ಸರ್ಕಾರವು, ಪ್ರಸ್ತುತ ರಾಜ್ಯದ ಇನ್ನೂ ಮೂರು ಪ್ರಮುಖ ವೈದ್ಯಕೀಯ ಕಾಲೇಜುಗಳಲ್ಲಿಯೂ ಐವಿಎಫ್ ಕೇಂದ್ರಗಳನ್ನು ಸ್ಥಾಪಿಸಲು ಮುಂದಾಗಿದೆ.




ಕೆಲವು ತಿಂಗಳುಗಳ ಹಿಂದೆಯೇ ಈ ಕೇಂದ್ರವು ಸಾರ್ವಜನಿಕರ ಸೇವೆಗೆ ಲಭ್ಯವಾಗಬೇಕಿತ್ತಾದರೂ, ಆರಂಭದಲ್ಲಿ ಕೆಲವು ಗೊಂದಲಗಳಿಂದಾಗಿ ವಿಳಂಬವಾಗಿತ್ತು. ಮೊದಲು ಈ ಕೇಂದ್ರವನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಆರಂಭಿಸಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ, ಸರ್ಕಾರ ನಿಗದಿಪಡಿಸುವ ದರದಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಕೇಂದ್ರ ನಡೆಸುವುದು ಕಷ್ಟಸಾಧ್ಯವಾಗಿತ್ತು. ಕೇಂದ್ರದ ಕಾರ್ಯನಿರ್ವಹಣೆ ಮತ್ತು ಸರ್ಕಾರದ ಮಾರ್ಗಸೂಚಿಗಳ ಕುರಿತು ಕೆಎಂಸಿ–ಆರ್‌ಐ ಆಡಳಿತ ಮಂಡಳಿಗೆ ಗೊಂದಲಗಳಿದ್ದವು. ಆದರೆ ಈಗ ರಾಜ್ಯ ಸರ್ಕಾರವೇ ಸಂಪೂರ್ಣ ಜವಾಬ್ದಾರಿ ಹೊತ್ತುಕೊಂಡು, ಅಗತ್ಯವಿರುವ ಎಲ್ಲಾ ಅನುದಾನಗಳನ್ನು ಬಿಡುಗಡೆ ಮಾಡಿರುವುದರಿಂದ ಇದ್ದ ಅಡೆತಡೆಗಳೆಲ್ಲ ನಿವಾರಣೆಯಾಗಿವೆ.

ಖಾಸಗಿ ಆಸ್ಪತ್ರೆಗಳಲ್ಲಿ ಲಕ್ಷಾಂತರ ರೂಪಾಯಿ ವೆಚ್ಚವಾಗುವ ಐವಿಎಫ್ ಚಿಕಿತ್ಸೆಯನ್ನು ಬಡ ಮತ್ತು ಮಧ್ಯಮ ವರ್ಗದ ಜನರಿಗೂ ತಲುಪಿಸುವ ನಿಟ್ಟಿನಲ್ಲಿ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ಈ ಕುರಿತು ಕೆಎಂಸಿ–ಆರ್‌ಐ ಆಡಳಿತ ಮಂಡಳಿಯು ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅಂತಿಮವಾಗಿ ಸರ್ಕಾರದ ಅಧೀನದಲ್ಲಿಯೇ ಕೇಂದ್ರವನ್ನು ನಡೆಸುವ ತೀರ್ಮಾನಕ್ಕೆ ಬರಲಾಗಿದೆ. ಅಷ್ಟೇ ಅಲ್ಲದೆ, ಈ ಚಿಕಿತ್ಸೆಯನ್ನು ಸರ್ಕಾರದ ಮಹತ್ವಾಕಾಂಕ್ಷಿ 'ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ' ಯೋಜನೆಯ ಅಡಿಯಲ್ಲೇ ನೀಡಬಹುದು ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ಇದು ಆರ್ಥಿಕವಾಗಿ ಹಿಂದುಳಿದ ನೂರಾರು ದಂಪತಿಗಳಿಗೆ ವರದಾನವಾಗಲಿದೆ.ಬಡ ಮತ್ತು ಮಧ್ಯಮ ವರ್ಗದವರ ಆರ್ಥಿಕ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನದಲ್ಲಿಟ್ಟುಕೊಂಡು ಸರ್ಕಾರ ಅತ್ಯಂತ ಕಡಿಮೆ ದರವನ್ನು ನಿಗದಿಪಡಿಸಿದೆ. ಓರ್ವ ಫಲಾನುಭವಿಗೆ ಕೇವಲ 1,34,000 ರೂಪಾಯಿ ಚಿಕಿತ್ಸಾ ವೆಚ್ಚವನ್ನು ನಿಗದಿ ಮಾಡಲಾಗಿದೆ. ಇದರೊಂದಿಗೆ ಮತ್ತೊಂದು ಮಾನವೀಯ ನಿರ್ಧಾರವನ್ನು ಕೈಗೊಳ್ಳಲಾಗಿದ್ದು, ಒಂದು ವೇಳೆ ಮೊದಲ ಬಾರಿಗೆ ಚಿಕಿತ್ಸೆ ಯಶಸ್ವಿಯಾಗದಿದ್ದರೆ, ಇದೇ ದರದಲ್ಲಿಯೇ (ಹೆಚ್ಚುವರಿ ಹಣ ಪಡೆಯದೆ) ಒಟ್ಟು ಮೂರು ಬಾರಿ ಚಿಕಿತ್ಸೆ ಪಡೆಯುವ ಸುವರ್ಣ ಅವಕಾಶವನ್ನು ಕಲ್ಪಿಸಲಾಗಿದೆ.

# ವಿಶ್ವ ತೋರಿಸಿದ ತಾಯಿಗೆ ಜಗತ್ತು ಸ್ಮರಿಸುವಂತೆ ಮಾಡಬೇಕು: ಮುಸ್ತಾಪುರೆ

**ಬಸವಕಲ್ಯಾಣ, ಮೇ. 22:** ದಿನದ 24 ತಾಸು ಕುಟುಂಬದ ಏಳಿಗೆಗಾಗಿ ವಿಶ್ರಾಂತಿ ಇರದೆ ದುಡಿಯುವ ಜೀವ ಯಾವುದಾದರೂ ಇದ್ದರೆ, ಅದು ತಾಯಿ. ಪ್ರೀತಿ, ಮಮತೆ, ವಾತ್ಸಲ್ಯಕ್ಕೆ ಇನ್ನೊಂದು ಹೆಸರೆ ತಾಯಿ ಎನ್ನುವಂತೆ ಪ್ರತಿಯೊಬ್ಬರು ಇದರ ಬಗ್ಗೆ ಕಾಳಜಿ ವಹಿಸಬೇಕು. ಹಿಂದೆಂದಿಗಿಂತಲೂ ಇಂದು ತಾಯಿಗೆ ಕೊಡುವ ಗೌರವ ಹೆಚ್ಚಾಗಿ ಜಗತ್ತೆ ಸ್ಮರಿಸುವಂತಾಗಬೇಕು ಎಂದು ಶಾರದಾ ಎಜ್ಯುಕೇಷನ್ ಟ್ರಸ್ಟಿನ ಉಪಾಧ್ಯಕ್ಷರಾದ ಶಿವು ಮುಸ್ತಾಪುರೆ ಹೇಳಿದರು.

ಬಸವಕಲ್ಯಾಣ ತಾಲ್ಲೂಕಿನ ಮಂಠಾಳ ಗ್ರಾಮದಲ್ಲಿ ಅಂಡಗಿ ಪ್ರತಿಷ್ಠಾನ ಹಾಗೂ ಶಾರದಾ ಎಜ್ಯುಕೇಷನಲ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ತಾಯಂದಿರ ದಿನಾಚರಣೆ ಉದ್ಘಾಟಿಸಿ ಸಾಂಕೇತಿಕವಾಗಿ ತಾಯಂದಿರನ್ನು ಸನ್ಮಾನಿಸಿ ಗೌರವಿಸುವ ಮೂಲಕ ಆಚರಿಸಲಾಯಿತು.

ತಾಯಿ ಋಣ ತೀರಿಸುವುದು ಈ ಜನ್ಮದಲ್ಲಿ ಸಾಧ್ಯವಿಲ್ಲ ಹಾಗಾಗಿ ಪೂಜಿಸುವುದು, ಗೌರವಿಸುವುದು ಮಾತ್ರ ನಮ್ಮ ಕರ್ತವ್ಯ. ಇದುವೆ ನಮ್ಮ ಹಿಂದೂ ಸನಾತನ ಧರ್ಮದ ಸಂಸ್ಕೃತಿ ಎನ್ನುತ್ತಾ ತಂದೆ–ತಾಯಿಯರನ್ನು ದೇವರಂತೆ ಕಂಡು ಗೌರವಿಸುವ ಸಂಸ್ಕೃತಿ ನಮ್ಮ ಯುವ ಪೀಳಿಗೆಯ ಪ್ರೇರಣೆಯಾಗಲಿ ಎಂಬ ಉದ್ದೇಶದಿಂದಲೇ ತಾಯಂದಿರ ದಿನಾಚರಣೆ ಆಯೋಜಿಸಲಾಗಿದೆ ಎಂದು ಅಂಡಗಿ ಪ್ರತಿಷ್ಠಾನ ಅಧ್ಯಕ್ಷ ಶಿವರಾಜ ಅಂಡಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.




ಬಸವಕಲ್ಯಾಣ ತಾಲ್ಲೂಕಿನ ಮಂಠಾಳ ಗ್ರಾಮದಲ್ಲಿ ಅಂಡಗಿ ಪ್ರತಿಷ್ಠಾನ ಹಾಗೂ ಶಾರದಾ ಎಜ್ಯೂ&ಕೇಷನಲ್ ಟ್ರಸ್ಟ್ ಸಂಯುಕ್ತ ಆರ್ಶರಯದಲ್ಲಿ ಆಯೋಜಿಸಿದ ತಾಯಂದಿರ ದಿನಾಚರಣೆ ಕಾರ್ಯಕ್ರಮವನ್ನು ಶಿವು ಮುಸ್ತಾಪುರೆ ಉದ್ಘಾಟಿಸಿದರು.

# ಧಾರ್ಮಿಕ ಆಚರಣೆಗಳು ಸಮಾಜಕ್ಕೆ ಸಕಾರಾತ್ಮಕ ಶಕ್ತಿ ನೀಡುತ್ತವೆ ಮಹಾರುದ್ರ ಯಾಗದಲ್ಲಿ ಸಂಸದ ಡಾ. ಮಂಜುನಾಥ್

ಬೆಂಗಳೂರು, ಮೇ.22–ಆನೇಕಲ್ ವಿಧಾನಸಭಾ ಕ್ಷೇತ್ರದ ಚಂದಾಪುರದಲ್ಲಿರುವ 'ಏಕಮ್ ಇಂಟರ್ನ್ಯಾಷನಲ್ ಸ್ಕೂಲ್ ಕ್ಯಾಂಪಸ್' ನಲ್ಲಿ ಬಿಜೆಪಿ ರಾಜ್ಯ ವಕ್ತರರಾದ ಅಶೋಕ್ ಗೌಡ ರವರ ಕುಟುಂಬದ ವತಿಯಿಂದ ಆಯೋಜಿಸಲಾದ 'ಮಹಾರುದ್ರ ಯಾಗ ಹಾಗೂ ಸಹಸ್ರ ಚಂಡಿಕಾ ಯಾಗ' ಪೂಜೆ ಮತ್ತು ಯಜ್ಞ ಕಾರ್ಯಕ್ರಮದಲ್ಲಿ ಜನಪ್ರಿಯ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ.ಎನ್.ಮಂಜುನಾಥ್ ಭಾಗವಹಿಸಿ ದೈವಿಕ ಆಶೀರ್ವಾದ ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಾನ್ಯ ಸಂಸದರು ಮಾತನಾಡಿ, 'ದೇಶದಲ್ಲಿ ಶಾಂತಿ, ಸಮಾಜದಲ್ಲಿ ಸೌಹಾರ್ದತೆ, ರೈತರಿಗೆ ಉತ್ತಮ ಮಳೆ–ಬೆಳೆ, ಹಾಗೂ ಪ್ರತಿಯೊಬ್ಬರ ಜೀವನದಲ್ಲಿ ಆರೋಗ್ಯ, ನೆಮ್ಮದಿ ಮತ್ತು ಸಮೃದ್ಧಿ ನೆಲೆಸಲಿ ಎಂಬುದು ನಮ್ಮ ಪ್ರಾರ್ಥನೆ. ಇಂತಹ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಸಕಾರಾತ್ಮಕ ಶಕ್ತಿ ಮತ್ತು ಮಾನವೀಯ ಮೌಲ್ಯಗಳನ್ನು ಹೆಚ್ಚಿಸುತ್ತವೆ' ಎಂದು ತಿಳಿಸಿದರು.



# ನಿಗದಿತ ಸಮಯದಲ್ಲಿ ಸೌಲಭ್ಯ ನೀಡಿ : ಜಿಲ್ಲಾಧಿಕಾರಿ ಎಸ್.ಪೂವಿಕಾ

**ರಾಯಚೂರು, ಮೇ. 22:** ಸಾರ್ವಜನಿಕರಿಗೆ ನಿಗದಿತ ಸಮಯದಲ್ಲಿ ಸರ್ಕಾರದ ಯೋಜನೆ, ಸೌಲಭ್ಯಗಳು ದೊರೆಯಬೇಕು. ಅಲ್ಲದೆ ಕಂದಾಯ ನ್ಯಾಯಾಲಯಗಳಲ್ಲಿಯ ಪ್ರಕರಣಗಳನ್ನು ಆದ್ಯತೆ ಮೇರೆಗೆ ವಿಲೇವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಎಸ್.ಪೂವಿತಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕುಗಳ ತಹಶೀಲ್ದಾರ 'ರೊಂದಿಗೆ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ನಡೆಸಿ ಮಾತನಾಡಿದರು.

ಜಿಲ್ಲೆಯ ಆಡಳಿತಾತ್ಮಕ ಸುಧಾರಣೆ, ಭೂ ದಾಖಲೆಗಳ ನಿರ್ವಹಣೆ ಮತ್ತು ಸಾರ್ವಜನಿಕ ಸೇವೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸಬೇಕು. ಪೋಡಿ, ದುರಸ್ತಿ, ಪಹಣಿ



ತಿದ್ದುಪಡಿ ಮತ್ತು ಭೂ ಒತ್ತುವರಿ ತೆರವು ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಅಗತ್ಯ ಕ್ರಮ ವಹಿಸಬೇಕು' ಎಂದು ಜಿಲ್ಲಾಧಿಕಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪಿಂಚಣಿ ಯೋಜನೆಗಳು, ಆರ್‌ಟಿಸಿ ವಿತರಣೆ, ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಕಾಲಮಿತಿಯೊಳಗೆ ಜನರಿಗೆ ತಲುಪಿಸಬೇಕು. ಸರ್ಕಾರದ ಬಾಕಿ ಬಿದ್ದಿರುವ ಕಂದಾಯ, ಮತ್ತು ಮರಳು ಗಣಿಗಾರಿಕೆಯ ಮೇಲಿನ ದಂಡಗಳನ್ನು ಸಮರ್ಪಕವಾಗಿ ವಸೂಲಿ ಮಾಡಬೇಕು. ಅಲ್ಲದೆ, ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ ಕೈಗೊಳ್ಳಬೇಕಾದ ತುರ್ತು ಪರಿಹಾರ ಕ್ರಮಗಳ ಕುರಿತು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಸೂಚಿಸಿದರು.

ಕೆಳಮಟ್ಟದ ಕಂದಾಯ ಕಚೇರಿಗಳಾದ ನಾಡ ಕಚೇರಿಗಳು ಮತ್ತು ತಹಶೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಪಾರದರ್ಶಕ ಆಡಳಿತ ನೀಡಬೇಕು. ಹಾಗೂ ಸಾರ್ವಜನಿಕರಿಂದ ಸ್ವೀಕರಿಸಲ್ಪಟ್ಟ ಅರ್ಜಿಗಳ ಪ್ರಗತಿ ಪರಿಶೀಲನೆ ನಡೆಸಿ, ನಿಗದಿತ ಗಡುವಿನೊಳಗೆ ಕೆಲಸಗಳನ್ನು ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

# ಬೀಜ ಕೊರತೆಯಿಲ್ಲ, ರೈತರು ಆತಂಕ ಪಡಬೇಕಾಗಿಲ್ಲ: ಕೃಷಿ ಇಲಾಖೆ ಅಭಯ

**ಹಾವೇರಿ, ಮೇ 22:** ಬೀಜ ಲಭ್ಯತೆಯಲ್ಲಿ ಯಾವುದೇ ಕೊರತೆ ಇಲ್ಲ. ರೈತರು ಅನಗತ್ಯವಾಗಿ ಆತಂಕ ಪಡುವ ಅಗತ್ಯವಿಲ್ಲ ಎಂದು ಕೃಷಿ ಇಲಾಖೆ ಸ್ಪಷ್ಟಪಡಿಸಿದೆ.

ಈ ಸಂಬಂಧ ಪ್ರಕಟಣೆ ಹೊರಡಿಸಿದ್ದು, 2026ರ ಮುಂಗಾರು ಹಂಗಾಮಿನ ಹಿನ್ನೆಲೆಯಲ್ಲಿ ಹಾವೇರಿ ಜಿಲ್ಲೆಯಲ್ಲಿ ಮಳೆಯಾಗುತ್ತಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ರೈತರು ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ಬಿತ್ತನೆ ಬೀಜಗಳನ್ನು ಪಡೆಯುತ್ತಿದ್ದಾರೆ. ಜಿಲ್ಲೆಯಲ್ಲಿ ಬಿತ್ತನೆ ಬೀಜಗಳ ಸಮರ್ಪಕ ಪೂರೈಕೆಗೆ ಕೃಷಿ ಇಲಾಖೆ ಅಗತ್ಯ ಕ್ರಮ ಕೈಗೊಂಡಿದೆ ಎಂದು ತಿಳಿಸಿದೆ.

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ವರ್ಷಕ್ಕೆ ಸೋಯಾಬೀನ್‌ಗೆ 8,960 ಕ್ವಿಂಟಾಲ್ ಹಾಗೂ ಶೇಂಗಾ (ನೆಲ ಗಡಲೆ) ಬೀಜಕ್ಕೆ 1,344 ಕ್ವಿಂಟಾಲ್ ಬೇಡಿಕೆ ಅಂದಾಜಿಸಲಾಗಿದ್ದು, ಅದರನುಸಾರ ಈಗಾಗಲೇ 2,733 ಕ್ವಿಂಟಾಲ್ ಸೋಯಾಬೀನ್ ಹಾಗೂ 305 ಕ್ವಿಂಟಾಲ್ ಶೇಂಗಾ ಬೀಜವನ್ನು ದಾಸ್ತಾನು ಮಾಡಲಾಗಿದೆ. ಉಳಿದ ಬೇಡಿಕೆಯನ್ನು ಪೂರೈಕೆ ಆಧಾರದಲ್ಲಿ ವಿತರಿಸಲಾಗುವುದು ಎಂದು ಇಲಾಖೆ ಹೇಳಿದೆ.

ರಾಜ್ಯ ಮಟ್ಟದಲ್ಲಿಯೂ ಸೋಯಾಬೀನ್ ಬೀಜಕ್ಕೆ 1.80 ಲಕ್ಷ ಕ್ವಿಂಟಾಲ್ ಬೇಡಿಕೆ ಅಂದಾಜಿಸಲಾಗಿದ್ದು, 2.09 ಲಕ್ಷ ಕ್ವಿಂಟಾಲ್ ಬೀಜ ಲಭ್ಯವಿದೆ. ಅದೇ ರೀತಿ ನೆಲಗಡಲೆ ಬೀಜಕ್ಕೆ 0.70 ಲಕ್ಷ ಕ್ವಿಂಟಾಲ್ ಬೇಡಿಕೆ ಇದ್ದು, 0.74 ಲಕ್ಷ ಕ್ವಿಂಟಾಲ್ ದಾಸ್ತಾನಿದೆ. ಒಟ್ಟಾರೆ ರಾಜ್ಯದಲ್ಲಿ ಎಲ್ಲಾ ಬೆಳೆಗಳಿಗೆ ಸೇರಿ 4.71 ಲಕ್ಷ ಕ್ವಿಂಟಾಲ್ ಬೇಡಿಕೆಗೆ ಅನುಗುಣವಾಗಿ 5.46 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜ ಲಭ್ಯವಿದೆ. ರೈತ ಸಂಪರ್ಕ ಕೇಂದ್ರಗಳ ಮೂಲಕ QR Code ವ್ಯವಸ್ಥೆ ಅಳವಡಿಸಿ ಅರ್ಹ ರೈತರಿಗೆ ಪಾರದರ್ಶಕವಾಗಿ ಬೀಜ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ಹಾಗಾಗಿ ರೈತರು ಅನಗತ್ಯ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ ಎಂದು ಇಲಾಖೆ ಮಾಹಿತಿ ನೀಡಿದೆ. ಬಿತ್ತನೆ ಬೀಜಗಳ ಕುರಿತ ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಉಪ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ತಿಳಿಸಲಾಗಿದೆ.ಹಾವೇರಿ ಜಿಲ್ಲೆಯಲ್ಲಿ ವಾಡಿಕೆಗಿಂತ 500 ಪಟ್ಟು ಹೆಚ್ಚು ಮುಂಗಾರು ಪೂರ್ವ ಮಳೆಯಾಗಿದ್ದು, ಈಗಾಗಲೇ ಕೃಷಿ ಚಟುವಟಿಕೆಗಳು ಗರಿಗೆದರಿವೆ.

# ವಚನಾನಂದ ಸ್ವಾಮೀಜಿ ಜಾಮೀನು ರದ್ದುಗೊಳಿಸುವಂತೆ ಕೋರ್ಟ್‌ಗೆ ಹರಿಹರ ಪೊಲೀಸರ ಮನವಿ




**ದಾವಣಗೆರೆ, ಮೇ 22:** ಪೋಕ್ಸೋ ಪ್ರಕರಣದಲ್ಲಿ ಹರಿಹರದ ಪಂಚಮಸಾಲಿ ಮಠದ ವಚನಾನಂದ ಸ್ವಾಮೀಜಿ ಪಡೆದ ನಿರೀಕ್ಷಣಾ ಜಾಮೀನು ರದ್ದುಗೊಳಿಸುವಂತೆ ಕೋರಿ ಪೊಲೀಸರು ಕೋರ್ಟ್‌ಗೆ ಮನವಿ ಸಲ್ಲಿಸಿದ್ದಾರೆ.

ದಾವಣಗೆರೆ ಜಿಲ್ಲಾ ಸೆಷನ್ಸ್ ನ್ಯಾಯಾಲಯಕ್ಕೆ ಮುಚ್ಚಿದ ಲಕೋಟೆಯಲ್ಲಿ ಹರಿಹರ ಗ್ರಾಮಾಂತರ ಠಾಣೆಯ ಪೊಲೀಸರು ಈ ಕುರಿತು ವರದಿ ಸಲ್ಲಿಸಿದ್ದಾರೆ.

ನಿರೀಕ್ಷಣಾ ಜಾಮೀನು ರದ್ದಾದರೆ ಸ್ವಾಮೀಜಿ ಯಾವುದೇ ಕ್ಷಣದಲ್ಲಾದರೂ ಅರೆಸ್ಟ್ ಆಗುವ ಸಾಧ್ಯತೆ ಇದೆ. ತಮ್ಮ ವಿರುದ್ಧ ಪೋಕ್ಸೋ ಪ್ರಕರಣ ದಾಖಲಿಸುವ ಷಡ್ಯಂತ್ರ ನಡೆಯುತ್ತಿದೆ ಎಂದು ಆರೋಪಿಸಿ ಪ್ರಕರಣ ದಾಖಲಾಗುವ ಮುನ್ನವೇ ಸ್ವಾಮೀಜಿ ನಿರೀಕ್ಷಣಾ ಜಾಮೀನು ಪಡೆದಿದ್ದರು.

ಈ ಕುರಿತು ಹರಿಹರ ಗ್ರಾಮಾಂತರ ಠಾಣೆಯ ಪಿಐ, ತನಿಖಾಧಿಕಾರಿ ಸುರೇಶ್ ಸಗರಿ ಅವರು ಮಾತನಾಡಿ, "ವಚನಾನಂದ ಶ್ರೀ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ. ನಿರೀಕ್ಷಣಾ ಜಾಮೀನು ರದ್ದು ಕೋರಿ ನ್ಯಾಯಾಲಯಕ್ಕೆ ಮನವಿ ಮಾಡಿದ್ದೇವೆ. ಅವರು ಮೇ 25ರಂದು ಮತ್ತೊಮ್ಮೆ ವಿಚಾರಣೆಗಾಗಿ ಠಾಣೆಗೆ ಹಾಜರಾಗ ಲಿದ್ದಾರೆ" ಎಂದು ತಿಳಿಸಿದರು.

# ವಕ್ಫ್ ಹಗರಣದ ಬಗ್ಗೆ ಲೋಕಾಯುಕ್ತಕ್ಕೆ ದೂರು ವ್ಯಕ್ತಿಯ ಮೇಲೆ ಸಿನಿಮೀಯ ರೀತಿಯಲ್ಲಿ ದಾಳಿ!

**ರಾಯಚೂರು, ಮೇ. 22:** ವಕ್ಫ್ ಬೋರ್ಡ್ ಅನುದಾನ ದುರ್ಬಳಕೆ ಬಗ್ಗೆ ಸಂಬಂಧಿಸಿದಂತೆ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ ಎಂಬ ದ್ವೇಷಕ್ಕೆ ದೂರುದಾರ ಹಾಗೂ ಆತನ ಕಡೆಯವರ ಮೇಲೆ 30 ದುಷ್ಕರ್ಮಿಗಳು ಸಿನಿಮೀಯ ಶೈಲಿಯಲ್ಲಿ ಚಾಕು, ಭರ್ಜಿ ಹಾಗೂ ಕಲ್ಲುಗಳಿಂದ ಭೀಕರ ಮಾರಣಾಂತಿಕ ಹಲ್ಲೆ ನಡೆಸಿರುವ ಆಘಾತಕಾರಿ ಘಟನೆ ರಾಯಚೂರು ನಗರದ ತಹಶಿಲ್ದಾರ್ ಕಚೇರಿ ಬಳಿ ಹಾಡುಹಗಲೇ ನಡೆದಿದೆ.

ರಾಯಚೂರು ತಾಲೂಕಿನ ತಲಮಾರಿ ಗ್ರಾಮದ ಮಸೀದಿ, ಖಬರಸ್ತಾನ ಹಾಗೂ ಈದ್ಗಾ ಮೈದಾನದ ಅಭಿವೃದ್ಧಿಗಾಗಿ 2017–19ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಹಬ್ ಹಾಗೂ ವಕ್ಫ್ ಮಂಡಳಿಯಿಂದ ಒಟ್ಟು 26 ಲಕ್ಷ ರೂಪಾಯಿ ಅನುದಾನ ಬಿಡುಗಡೆಯಾಗಿತ್ತು. ಆದರೆ ಈ ಕಾಮಗಾರಿಯಲ್ಲಿ ಭಾರಿ ಅನುದಾನ ದುರ್ಬಳಕೆಯಾಗಿದೆ ಎಂದು ಆರೋಪಿಸಿ ತಲಮಾರಿ ಗ್ರಾಮದ ಸನಾವುಲ್ಲಾ ಎಂಬುವವರು ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಇತ್ತೀಚೆಗಷ್ಟೇ ಲೋಕಾಯುಕ್ತ ಅಧಿಕಾರಿಗಳ ತಂಡ ಘಟನಾ ಸ್ಥಳಕ್ಕೆ ಭೇಟಿ ನೀಡಿ ತನಿಖೆ ನಡೆಸಿತ್ತು.

ತನಿಖೆ ನಡೆಸಿದ ಬೆನ್ನಲೇ, ಲೋಕಾಯುಕ್ತ ತನಿಖೆಯಿಂದ ತೀವ್ರ ಆಕ್ರೋಶಗೊಂಡಿದ್ದ ಎದುರಾಳಿಗಳು, ಪ್ರಕರಣವನ್ನು ಕಾಂಪ್ರಮೈಸ್ (ರಾಜಿ) ಮಾಡಿಕೊಳ್ಳುವ ನೆಪದಲ್ಲಿ ದೂರುದಾರ ಸನಾವುಲ್ಲಾನನ್ನು ರಾಯಚೂರಿನ ತಹಶಿಲ್ದಾರ್ ಕಚೇರಿ ಬಳಿ ಕರೆಸಿಕೊಂಡಿದ್ದಾರೆ. ಮಾತುಕತೆ ನಡೆಸುವಾಗಲೇ ಏಕಾಏಕಿ ಸಂಚು ರೂಪಿಸಿ ಬಂದಿದ್ದ ಸುಮಾರು 30 ಜನರ ಗುಂಪು ಚಾಕು, ಭರ್ಜಿ ಹಾಗೂ ಮಾರಕಾಸ್ತ್ರಗಳಿಂದ



ಸನಾವುಲ್ಲಾ ಮತ್ತು ಆತನ ಸ್ನೇಹಿತರ ಮೇಲೆ ಮನಸ್ಸೋಇಚ್ಛೆ ದಾಳಿ ಮಾಡಿದ್ದಾರೆ. ನಡುರಸ್ತೆಯಲ್ಲೇ ನಡೆದ ಈ ರಕ್ತಪಾತದಿಂದಾಗಿ ಸನಾವುಲ್ಲಾ ಮೈತುಂಬಾ ಗಂಭೀರ ಗಾಯಗಳಾಗಿದ್ದು, ಬರೋಬ್ಬರಿ 24 ಸ್ಟಿಚ್‌ಗಳನ್ನು (ಹೊಲಿಗೆ) ಹಾಕಿದ್ದಾರೆ.

ಪ್ರಸ್ತುತ ಗಾಯಾಳು ಸನಾವುಲ್ಲಾಗೆ ರಾಯಚೂರಿನ ಓಪೆಕ್ ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿ ಪೊಲೀಸ್ ಭದ್ರತೆಯೊಂದಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಹಲ್ಲೆಗೆ ಸಂಬಂಧಿಸಿದಂತೆ ಪ್ರಮುಖ ಆರೋಪಿಗಳಾದ ಅಶುಪಟೇಲ್, ನಿಜಾಮ್ ಪಟೇಲ್, ಇರ್ಫಾನ್ ಸೇರಿದಂತೆ 15ಕ್ಕೂ ಹೆಚ್ಚು ಜನರ ವಿರುದ್ಧ ರಾಯಚೂರಿನ ಸದರ್ ಬಜಾರ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಇತ್ತ ಘಟನೆಗೆ ಸಂಬಂಧಿಸಿದಂತೆ ಆರೋಪಿಗಳ ಕಡೆಯವರೂ ಸಹ ಗಾಯಾಳು ಸನಾವುಲ್ಲಾ ಮತ್ತು ಆತನ ಕಡೆಯವರ ವಿರುದ್ಧ ಕೌಂಟರ್ ಕೇಸ್ ದಾಖಲಿಸಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

### ಉಪನಗರ ಬಸ್ ನಿಲ್ದಾಣ ನಿರ್ಮಾಣಕ್ಕೆ ಕ್ರಮ

# ಕಲಬುರಗಿ ವಿವಿಯ ಎರಡು ಎಕರೆ ಭೂಮಿ ಸಾರಿಗೆ ಸಂಸ್ಥೆಗೆ ಹಸ್ತಾಂತರ

**ಕಲಬುರಗಿ, ಮೇ. 22:** ನಗರದ ಸೇಡಂ ರಸ್ತೆಯ ಮಾರ್ಗವಾಗಿ ಸಂಚರಿಸುವ ಬಸ್ಸುಗಳ ಸುಗಮ ಸಂಚಾರಕ್ಕೆ ಉದ್ದೇಶಿತ ಕಲಬುರಗಿ ವಿಶ್ವವಿದ್ಯಾಲಯದ ಬಳಿ ಉಪನಗರ ಬಸ್ ನಿಲ್ದಾಣ ನಿರ್ಮಿಸಲು 2 ಎಕರೆ ಜಮೀನು ಕೆಕೆಆರ್‌ಟಿಸಿ ಸಂಸ್ಥೆಗೆ ಮಂಜೂರು ಮಾಡಿದ ವಿಶ್ವವಿದ್ಯಾಲಯದ ಸಿಂಡಿಕೇಟ್ ನಿರ್ಧಾರಕ್ಕೆ ಸಂತಸ ವ್ಯಕ್ತಪಡಿಸಿರುವ ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಪಾಟೀಲರು, ಸಿಂಡಿಕೇಟ್ ಸದಸ್ಯರಿಗೆ ಸತ್ಕರಿಸಿ, ಅಭಿನಂದಿಸಿದರು. ವಿದ್ಯಾರ್ಥಿಗಳು, ಪ್ರಯಾಣಿಕರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಕಲ್ಪಿಸಲಿದೆ ಎಂದು ಅರುಣಕುಮಾರ ಪಾಟೀಲ ಹೇಳಿದರು.

ಜಮೀನು ಮಂಜೂರಾತಿಗೆ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಉನ್ನತ ಶಿಕ್ಷಣ ಸಚಿವರೂ ಆದ ವಿವಿ ಸಮ ಕುಲಾಧಿಪತಿ ಡಾ.ಎಂ.ಸಿ.ಸುಧಾಕರ್, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ ಅವರ ಸಹಕಾರ ಹಾಗೂ ಬೆಂಬಲವನ್ನು ಸ್ಮರಿಸಿದರು.

# ಹಾರ್ಮುಜ್ ಮೇಲೆ ಇರಾನ್ ನಿಯಂತ್ರಣ ಅಪಾಯಕಾರಿ




**ಅಬುಧಾಬಿ, ಮೇ 22:** ಹಾರ್ಮುಜ್ ಜಲಸಂಧಿಯ ಮೇಲೆ ಇರಾನ್ ಯಾವುದೇ ರೀತಿಯ ನಿಯಂತ್ರಣ ಸಾಧಿಸಿದರೆ ಅದು ಅಪಾಯಕಾರಿ ಮುನ್ಸೂಚನೆಯಾಗಲಿದ್ದು, ವಿಶ್ವದ ಅತ್ಯಂತ ಪ್ರಮುಖ ವ್ಯಾಪಾರ ಮಾರ್ಗಗಳಲ್ಲಿ ಒಂದಾದ ಇದನ್ನು ಟೆಹರಾನ್ ರಾಜಕೀಯ ಅಸ್ತ್ರವನ್ನಾಗಿ ಮಾಡಿಕೊಳ್ಳುವ ಅಪಾಯವಿದೆ ಎಂದು ಯುಎಇ ಅಧ್ಯಕ್ಷರ ಹಿರಿಯ ಸಲಹೆಗಾರರು ಎಚ್ಚರಿಸಿದ್ದಾರೆ.

ಹಾರ್ಮುಜ್ ಜಲಸಂಧಿಯ ಮೇಲಿನ ಯಾವುದೇ ನಿಯಂತ್ರಣವು ಗಂಭೀರವಾದ ಮುನ್ಸೂಚನೆಯನ್ನು ನೀಡುತ್ತದೆ," ಎಂದು ಅನ್ವರ್ ಗರ್ಗಾಶ್ ಹೇಳಿದ್ದು, ಈ ಜಲಮಾರ್ಗವು "ಇರಾನ್‌ನ ಕೈಯಲ್ಲಿ ರಾಜಕೀಯೀಕರಣಗೊಳ್ಳುತ್ತದೆ" ಎಂದು ಗಮನಸೆಳೆದಿದ್ದಾರೆ.

ಈ ಪ್ರಮುಖ ಜಲಸಂಧಿಯ ಸ್ಥಿತಿಗತಿಯಲ್ಲಿ ಯಾವುದೇ ದೀರ್ಘಕಾಲೀನ ಬದಲಾವಣೆಯು ಜಾಗತಿಕವಾಗಿ, ವಿಶೇಷವಾಗಿ ಯುರೋಪ್‌ಗೆ ಭಾರಿ ಪರಿಣಾಮ ಉಂಟುಮಾಡುತ್ತದೆ. ಏಕೆಂದರೆ ಇಂಧನ ಪೂರೈಕೆ ಮತ್ತು ಅಂತರರಾಷ್ಟ್ರೀಯ ವ್ಯಾಪಾರಕ್ಕೆ ಈ ಮಾರ್ಗವು ಅತ್ಯಂತ ಪ್ರಮುಖವಾಗಿದೆ ಎಂದು ಗರ್ಗಾಶ್ ಎಚ್ಚರಿಕೆ ನೀಡಿದ್ದಾರೆ.

ಪ್ರಸ್ತುತ ಸಂಘರ್ಷದ ಸಮಯದಲ್ಲಿ ಇರಾನ್ ಯಾವುದೇ ಅಸ್ತ್ರವನ್ನು ಬಳಸಲು ಸಿದ್ಧವಾಗಿದೆ ಎಂಬುದನ್ನು ಅಬುಧಾಬಿ ಅರಿತುಕೊಂಡಿದೆ. ಟೆಹರಾನ್‌ನ ಪರಮಾಣು ಕಾರ್ಯಕ್ರಮವು ಈ ಹಿಂದೆ ಯುಎಇಗೆ ದ್ವಿತೀಯ ಆದ್ಯತೆಯ ಕಳಕಳಿಯಾಗಿತ್ತು, ಆದರೆ ಈಗ ಅದು ದೇಶದ ಅಗ್ರ ಭದ್ರತಾ ಆತಂಕವಾಗಿ ಮಾರ್ಪಟ್ಟಿದೆ ಎಂದು ಎಚ್ಚರಿಸಿದ್ದಾರೆ. ಹಾಗೂ ಅಮೆರಿಕ-ಇಸ್ರೇಲ್ ಮತ್ತು ಇರಾನ್ ನಡುವೆ ಮತ್ತೊಂದು ಸುತ್ತಿನ ಯುದ್ಧದ ಸಾಧ್ಯತೆಯ ಬಗ್ಗೆಯೂ ಎಚ್ಚರಿಸಿದ ಅವರು, ಯಾವುದೇ ಹೆಚ್ಚಿನ ಸಂಘರ್ಷವು "ಪರಿಸ್ಥಿತಿಯನ್ನು ಮತ್ತಷ್ಟು ಸಂಕೀರ್ಣಗೊಳಿಸುತ್ತದೆ. ರಾಜತಾಂತ್ರಿಕ ಮಾರ್ಗದ ಮೂಲಕ ಮುನ್ನಡೆಯುವುದು ಮುಖ್ಯ. ಆದರೆ ಇದು ಭವಿಷ್ಯದಲ್ಲಿ ಮತ್ತಷ್ಟು ತೊಡಕುಗಳನ್ನು ಸೃಷ್ಟಿಸುವ ವೆಚ್ಚದಲ್ಲಿ ಇರಬಾರದು. ವಾಷಿಂಗ್ಟನ್ (ಅಮೆರಿಕ) ಜೊತೆಗಿನ ಅಬುಧಾಬಿಯ ಸಂಬಂಧವು ಗಲ್ಫ್ ಪ್ರದೇಶದ ಭದ್ರತಾ ಲೆಕ್ಕಾಚಾರಗಳಿಗೆ ಕೇಂದ್ರಬಿಂದುವಾಗಿದೆ ಎಂದು ಕರೆದ ಅವರು, ಯುಎಸ್ ಜೊತೆಗಿನ ಸಂಬಂಧವನ್ನು ದೇಶದ ರಾಷ್ಟ್ರೀಯ ರಕ್ಷಣೆಯ ಬೆನ್ನೆಲುಬು ಎಂದು ಗರ್ಗಾಶ್ ಬಣ್ಣಿಸಿದರು.

ಯುರೋಪ್‌ನ ಪಾತ್ರದ ಕುರಿತು ಮಾತನಾಡಿದ ಎಮಿರೇಟ್ಸ್‌ನ ರಾಜತಾಂತ್ರಿಕರು, ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದಂತೆ ಪ್ರಸ್ತಾಪಿಸಲಾದ ಯುರೋಪಿಯನ್ ಉಪಕ್ರಮಗಳನ್ನು ಸಂಘರ್ಷದ ನಂತರದ ಅವಧಿಗಾಗಿ ಹೆಚ್ಚು ವಿನ್ಯಾಸಗೊಳಿಸಲಾಗಿದೆ ಎಂದು ಹೇಳಿದರು. ಅಲ್ಲದೆ, ಅದರ ನಂತರ ಅವು ನಿಖರವಾಗಿ ಯಾವ ಪಾತ್ರವನ್ನು ವಹಿಸಬಲ್ಲವು ಎಂದು ಅವರು ಪ್ರಶ್ನಿಸಿದರು.

ಉತ್ಪಾದನಾ ಮಿತಿಗಳು ದೇಶಕ್ಕೆ ಆರ್ಥಿಕವಾಗಿ ಹಾನಿ ಮಾಡುತ್ತಿವೆ ಎಂದು ವಾದಿಸಿದ ಅವರು, ಯುಎಇ ಕಳೆದ ಮೂರು ವರ್ಷಗಳಿಂದ ಒಪೆಕ್ ಸಂಘಟನೆಯಿಂದ ಹೊರಬರಲು ಚಿಂತಿಸುತ್ತಿದೆ ಎಂಬುದನ್ನು ಬಹಿರಂಗಪಡಿಸಿದರು.

ನಾವು "ಹೈಡ್ರೋಕಾರ್ಬನ್ ಯುಗದ ಶರತ್ಕಾಲವನ್ನು" (ಅಂತ್ಯದ ಅವಧಿ) ತಲುಪುತ್ತಿದ್ದೇವೆ ಎಂದು ಅಬುಧಾಬಿ ನಂಬಿದೆ. ಆದ್ದರಿಂದ ಜಾಗತಿಕ ಬೇಡಿಕೆ ಇನ್ನೂ ಬಲವಾಗಿರುವಾಗಲೇ ತನ್ನ ತೈಲ ಉತ್ಪಾದನಾ ಸಾಮರ್ಥ್ಯದ ಗರಿಷ್ಠ ಬಳಕೆಯನ್ನು ಮಾಡಿಕೊಳ್ಳಲು ಯುಎಇ ಬಯಸುತ್ತದೆ ಎಂದು ಗರ್ಗಾಶ್ ತಿಳಿಸಿದರು.

ಮತ್ತೊಂದೆಡೆ, ಈ ಪ್ರಮುಖ ಜಲಮಾರ್ಗದ ಮೇಲೆ ಮತ್ತಷ್ಟು ನಿಯಂತ್ರಣವನ್ನು ಪ್ರತಿಪಾದಿಸಿರುವ ಐಆರ್‌ಜಿಸಿ ನೌಕಾಪಡೆಯು, ಕಳೆದ 24 ಗಂಟೆಗಳಲ್ಲಿ 35 ವಾಣಿಜ್ಯ ಹಡಗುಗಳಿಗೆ ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗಲು ಅನುಮತಿ ನೀಡಿರುವುದಾಗಿ ತಿಳಿಸಿದೆ. ಅಮೆರಿಕದ ಮಿಲಿಟರಿ ಚಟುವಟಿಕೆಯಿಂದಾಗಿ ಪ್ರದೇಶದಲ್ಲಿ ಅಸ್ಥಿರತೆ ಇದ್ದಾಗ್ಯೂ, ಹಡಗುಗಳು ತಮ್ಮ ಭದ್ರತಾ ವ್ಯವಸ್ಥೆಯಡಿ ಜಲಮಾರ್ಗದಲ್ಲಿ ಸುರಕ್ಷಿತವಾಗಿ ಹಾದುಹೋಗಿವೆ ಎಂದು ಐಆರ್‌ಜಿಸಿ ಹೇಳಿದೆ. ಐಆರ್‌ಜಿಸಿ ನೌಕಾಪಡೆಯು ಕಡಲ ಸಂಚಾರಕ್ಕಾಗಿ ಮತ್ತು ಈ ಆಯಕಟ್ಟಿನ ಮಾರ್ಗದ ಮೂಲಕ ಜಾಗತಿಕ ವ್ಯಾಪಾರವನ್ನು ಮುಂದುವರಿಸಲು "ಸುರಕ್ಷಿತ ಜಲಮಾರ್ಗ"ವನ್ನು ಸೃಷ್ಟಿಸಿದೆ ಎಂದು ಹೇಳಿಕೆ ತಿಳಿಸಿದೆ.

# ಆರ್ಥಿಕ ಬಿಕ್ಕಟ್ಟು: ಉದ್ಯಮಗಳ ಉಳಿವಿಗೆ ಇರಾನ್ ಹೆಣಗಾಟ

**ಟೆಹರಾನ್, ಮೇ 22:** ಆಹಾರದ ಬೆಲೆಗಳು ನಿಯಂತ್ರಣ ತಪ್ಪಿ ಗಗನಕ್ಕೇರುತ್ತಿರುವುದರಿಂದ ಮತ್ತು ಇರಾನ್‌ನಾದ್ಯಂತ ಕೃಷಿ ಫಾರ್ಮ್‌ಗಳು ಮುಚ್ಚಲ್ಪಡುತ್ತಿರುವುದರಿಂದ, ಸ್ವತಃ ಸರ್ಕಾರದ ಪ್ರಮುಖರೇ ಈಗ ಆಡಳಿತದ ನಿರ್ಧಾರಗಳನ್ನು ಬಹಿರಂಗವಾಗಿ ಪ್ರಶ್ನಿಸಲು ಮುಂದಾಗಿದ್ದಾರೆ. ದೇಶವು ಅತ್ಯಂತ ನಿಖರವಾದ ಕ್ಷಿಪಣಿಗಳನ್ನು ವೇಗವಾಗಿ ಉತ್ಪಾದಿಸುವ ಸಾಮರ್ಥ್ಯವನ್ನು ಹೊಂದಿದ್ದರೂ ಮತ್ತೊಂದೆಡೆ ದೇಶದ ಜನರಿಗೆ ಕನಿಷ್ಠ ಆಹಾರವನ್ನು ಖರೀದಿಸುವ ಸಾಮರ್ಥ್ಯವೂ ಇಲ್ಲದಂತಾಗಿದೆ ಎಂದು ಬೊಟ್ಟು ಮಾಡಿದ್ದಾರೆ.

ಮಾಜಿ ಕೈಗಾರಿಕಾ ಸಚಿವ ಮೊಸ್ತಫಾ ಹಶಿಮಿತಾಬಾ ಅವರ ಪ್ರಕಾರ, ಪ್ರಸ್ತುತ ಬಿಕ್ಕಟ್ಟು ಕೇವಲ ಗ್ರಾಹಕ ಮಾರುಕಟ್ಟೆಗಳಲ್ಲಿ ಮಾತ್ರವಲ್ಲದೆ, ದೇಶದ ಕುಸಿಯುತ್ತಿರುವ ಉತ್ಪಾದನಾ ಸರಪಳಿಯಲ್ಲಿಯೂ (ರಾಸಾಯನಿಕ ಗೊಬ್ಬರಗಳಿಂದ ಹಿಡಿದು ಕೋಳಿ ಸಾಕಣೆಯವರೆಗೆ) ಬೇರೂರಿದೆ.

ಮೇ 20ರಂದು 'ಶಾರ್ಗ್' ಪತ್ರಿಕೆಯಲ್ಲಿ ಬರೆದ ಲೇಖನದಲ್ಲಿ ಹಶಿಮಿತಾಬಾ ಅವರು, 50 ಕೆಜಿಯ ಟ್ರಿಪಲ್-ಫಾಸ್ಫೇಟ್ ಗೊಬ್ಬರದ ಚೀಲದ ಬೆಲೆ ಕೆಲವೇ ತಿಂಗಳುಗಳಲ್ಲಿ 3 ಮಿಲಿಯನ್ ರಿಯಾಲ್‌ನಿಂದ 70 ಮಿಲಿಯನ್ ರಿಯಾಲ್‌ಗೆ ಏರಿಕೆಯಾಗುವ ಮೂಲಕ ಸುಮಾರು 24 ಪಟ್ಟು ಹೆಚ್ಚಾಗಿದೆ. ಇತರ ಗೊಬ್ಬರ ಉತ್ಪನ್ನಗಳ ಬೆಲೆಗಳು ಸಹ ಇದೇ ಅವಧಿಯಲ್ಲಿ ಶೇಕಡಾ 1,100ರಷ್ಟು ಗಗನಕ್ಕೇರಿವೆ ಎಂದು ಉಲ್ಲೇಖಿಸಿದ್ದಾರೆ. ಇದರ ಪರಿಣಾಮ ವಾಗಿ ಕೃಷಿ ಭೂಮಿಗಳು ಮತ್ತು ಕೋಳಿ ಫಾರ್ಮ್‌ಗಳು ಮುಚ್ಚುತ್ತಿದ್ದು, ಇದು ನೇರವಾಗಿ ಹಣ್ಣುಗಳು, ತರಕಾರಿಗಳು ಮತ್ತು ಮಾಂಸದ ಬೆಲೆಗಳ ಏರಿಕೆಗೆ ಕಾರಣವಾಗುತ್ತಿದೆ ಎಂದು ವಾದಿಸಿದ್ದಾರೆ.

ಇರಾನ್‌ನ ದೈನಿಕ 'ಎತೆಮಾದ್' ವರದಿಯ ಪ್ರಕಾರ, ಈ ಬೆಲೆ ಏರಿಕೆಯು ಸಂಘರ್ಷದ ನಂತರ ಉದ್ಯೋಗ ಕಳೆದುಕೊಂಡಿರುವ, ಸ್ಥಳಾಂತರಗೊಂಡಿರುವ ಮತ್ತು ಜೀವನ ವೆಚ್ಚದ ಭಾರಿ ಹೆಚ್ಚಳದಿಂದ ತತ್ತರಿಸಿರುವ ಸಾಮಾನ್ಯ ಇರಾನಿಯನ್ನರಲ್ಲಿ ಬೆಳೆಯುತ್ತಿರುವ ಹತಾಶೆಯನ್ನು ಮತ್ತಷ್ಟು ಉಲ್ಬಣಗೊಳಿಸಿದೆ. ಕಳೆದ ವಾರ ತೆಹ್ರಾನ್‌ನ ಹಲವು ಪತ್ರಿಕೆಗಳು ವರದಿ ಮಾಡಿದಂತೆ, ಒಂದು ಕಿಲೋಗ್ರಾಂ ಕೋಳಿ ಮಾಂಸದ ಬೆಲೆ 15 ಲಕ್ಷ ತೋಮನ್‌ಗಳನ್ನು ತಲುಪಿದೆ. ಇದು ಒಬ್ಬ ಸಾಮಾನ್ಯ ಕಾರ್ಮಿಕನ ಮಾಸಿಕ ಸಂಬಳದ ಸರಿಸುಮಾರು ಹತ್ತನೇ ಒಂದು ಭಾಗದಷ್ಟಾಗಿದೆ.

ಆರ್ಥಿಕ ಬಿಕ್ಕಟ್ಟು ಎಷ್ಟು ಭೀಕರವಾಗಿದೆ ಎಂದರೆ, ಸಾಮಾನ್ಯವಾಗಿ ರಾಷ್ಟ್ರೀಯತೆ, ಐಕ್ಯತೆ ಮತ್ತು ಪ್ರತಿರೋಧದ ಬಗ್ಗೆ ಮಾತನಾಡುತ್ತಿದ್ದ ಸಂಸತ್ ಸದಸ್ಯರು ಸಹ ಈಗ ಹೆಚ್ಚುತ್ತಿರುವ ಆಹಾರದ ಬೆಲೆಗಳ ತೀವ್ರತೆಯನ್ನು ಬಹಿರಂಗವಾಗಿ ಒಪ್ಪಿಕೊಳ್ಳುತ್ತಿದ್ದಾರೆ.

ಪ್ರಸ್ತುತ ಆರ್ಥಿಕ ಕುಸಿತವು, ಯಾವುದೇ ಮಾತುಕತೆ ನಡೆಸಬಾರದು ಎಂಬ ಕಠಿಣ ನಿಲುವನ್ನು ಮುಂದುವರಿಸುವುದು ಅಸಾಧ್ಯ ಎಂಬ ಶಾಸಕರ ವಾದಕ್ಕೆ ಮತ್ತಷ್ಟು ಬಲ ನೀಡಿದೆ. ತಿಂಗಳುಗಳ ಕಾಲ ನಡೆದ ಆರ್ಥಿಕ ಬಿಕ್ಕಟ್ಟಿನ ನಂತರ, ವಾಷಿಂಗ್ಟನ್ ಜೊತೆಗಿನ ಮಾತುಕತೆಯ ಮೂಲಕ ಬಿಕ್ಕಟ್ಟಿನಿಂದ ಮುಕ್ತಿ ಪಡೆಯುವುದು ಈಗ ಅನಿವಾರ್ಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ರಾಜತಾಂತ್ರಿಕತೆಯನ್ನು ಶರಣಾಗತಿ ಎಂದು ಭಾವಿಸುವ ಕಠಿಣ ನಿಲುವಿನ ನಾಯಕರ ವಿರೋಧದ ಹೊರತಾಗಿಯೂ, ಸಾಮಾನ್ಯ ಇರಾನಿಯನ್ನರು ಎದುರಿಸುತ್ತಿರುವ ಆರ್ಥಿಕ ಒತ್ತಡದ ತೀವ್ರತೆಯು ಟೆಹರಾನ್‌ಗೆ ಬೇರೆ ಯಾವುದೇ ಆಯ್ಕೆಯನ್ನು ಉಳಿಸಿಲ್ಲ ಎಂಬ ಭಾವನೆ ಕೆಲವು ಸಂಪ್ರದಾಯವಾದಿ ನಾಯಕರಲ್ಲಿಯೂ ಮೂಡುತ್ತಿದೆ. ಇಸ್ಲಾಮಿಕ್ ರಿಪಬ್ಲಿಕ್‌ನಲ್ಲಿರುವ ಕೆಫೆಗಳು ಮತ್ತು ರೆಸ್ಟೋರೆಂಟ್‌ಗಳು ಒಂದು ಕಾಲದಲ್ಲಿ ರಾಜಕೀಯ ಉದ್ವಿಗ್ನತೆ ಮತ್ತು ಆರ್ಥಿಕ ಆತಂಕದಿಂದ ಜನರಿಗೆ ತಾತ್ಕಾಲಿಕ ಮುಕ್ತಿ ನೀಡುವ ತಾಣಗಳಾಗಿದ್ದವು. ಆದರೆ ಈಗ ಅವುಗಳು ಸಹ ಹೆಚ್ಚುತ್ತಿರುವ ಪೂರೈಕೆ ವೆಚ್ಚಗಳ ನಡುವೆ ಅಸ್ತಿತ್ವ ಉಳಿಸಿಕೊಳ್ಳಲು ಹೆಣಗಾಡುತ್ತಿವೆ ಎನ್ನಲಾಗಿದೆ.

# ಡೆಮೋಕ್ರಾಟ್ ಬೆಂಬಲಿತ ಮತದಾನ ತಡೆಯಲು ರಿಪಬ್ಲಿಕನ್ ಪಕ್ಷ ಪರದಾಟ

**ವಾಷಿಂಗ್ಟನ್, ಮೇ 22:** ಇರಾನ್ ಯುದ್ಧದಿಂದ ಹಿಂದೆ ಸರಿಯುವಂತೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮೇಲೆ ಒತ್ತಡ ಹೇರುವ ಡೆಮೋಕ್ರಾಟ್ ಬೆಂಬಲಿತ ಶಾಸನವನ್ನು ವಜಾಗೊಳಿಸಲು ಅಗತ್ಯವಿರುವ ಮತಗಳನ್ನು ಸಂಗ್ರಹಿಸಲು ರಿಪಬ್ಲಿಕನ್ನರು ಹೆಣಗಾಡುತ್ತಿರುವುದು ಕಂಡುಬಂದಿದೆ. ಇದರಿಂದಾಗಿ ಈ ವಿಷಯದ ಮೇಲಿನ ಯೋಜಿತ ಮತದಾನವನ್ನು ಜೂನ್ ತಿಂಗಳಿಗೆ ಮುಂದೂಡಲಾಗಿದೆ.

ಕಾಂಗ್ರೆಸ್ (ಸಂಸತ್) ಅನುಮೋದನೆಯಿಲ್ಲದೆ ಟ್ರಂಪ್ ಹಸಿರು ನಿಶಾನೆ ತೋರಿಸಿದ್ದ ಮಿಲಿಟರಿ ಕಾರ್ಯಾಚರಣೆಗೆ ಲಗಾಮು ಹಾಕಲು, ಡೆಮೋಕ್ರಾಟರು ತಂದಿದ್ದ ಯುದ್ಧ ಅಧಿಕಾರಗಳ ನಿರ್ಣಯದ ಮೇಲೆ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್ ಮತದಾನವನ್ನು ನಿಗದಿಪಡಿಸಿತ್ತು. ಮುಂಬರುವ ಈ ಮತದಾನವು ಜಿಒಪಿಗೆ (ರಿಪಬ್ಲಿಕನ್ ಪಕ್ಷ) ಲಭಿಸಿದ ಅಪರೂಪದ ಸೋಲಾಗಿದೆ. ಏಕೆಂದರೆ ಈ ಹಿಂದೆ ಡೆಮೋಕ್ರಾಟರು ಈ ಕಾರ್ಯಾಚರಣೆಯನ್ನು ವಜಾಗೊಳಿಸಲು ಹಲವು ಬಾರಿ ಮಂಡಿಸಿದ್ದ ನಿರ್ಣಯಗಳೆಲ್ಲವೂ ವಿಫಲವಾಗಿದ್ದವು. ಆದರೆ, ಈ ಬಾರಿ ರಿಪಬ್ಲಿಕನ್ ಪಕ್ಷಕ್ಕೆ ಈ ಮಸೂದೆಯನ್ನು ಸೋಲಿಸಲು ಸಂಖ್ಯಾಬಲವಿಲ್ಲ ಎಂಬುದು ಸ್ಪಷ್ಟವಾಗುತ್ತಿದ್ದಂತೆ, ಪಕ್ಷದ ನಾಯಕರು ಅದರ ಮೇಲೆ ಮತದಾನ ನಡೆಸಲು ನಿರಾಕರಿಸಿದರು. ಇದು ಟ್ರಂಪ್ ಅವರ ಯುದ್ಧ ನೀತಿಗೆ ಕಾಂಗ್ರೆಸ್‌ನಲ್ಲಿ ಬೆಂಬಲ ಕುಸಿಯುತ್ತಿರುವುದರ ಇತ್ತೀಚಿನ ಸಂಕೇತವಾಗಿದೆ.

"ನಮ್ಮ ಬಳಿ ಯಾವುದೇ ಸಂಶಯವಿಲ್ಲದೆ ಅಗತ್ಯ ಮತಗಳಿದ್ದವು ಮತ್ತು ಅದು ಅವರಿಗೂ ತಿಳಿದಿತ್ತು. ಅದರ ಪರಿಣಾಮವಾಗಿ ಅವರು ರಾಜಕೀಯ ಆಟವಾಡುತ್ತಿದ್ದಾರೆ," ಎಂದು ಮಸೂದೆಯ ಪ್ರಾಯೋಜಕರಾದ ಡೆಮೋಕ್ರಾಟ್ ಪ್ರತಿನಿಧಿ ಗ್ರೆಗೊರಿ ಮೀಕ್ಸ್ ಹೇಳಿದ್ದಾರೆ.

"ರಿಪಬ್ಲಿಕನ್ನರ ನಿಯಂತ್ರಣದಲ್ಲಿರುವ ಹೌಸ್, ಟ್ರಂಪ್ ಆಡಳಿತದ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಂತೆ ವರ್ತಿಸುವುದನ್ನು ಮುಂದುವರಿಸಿದೆ" ಎಂದು ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನ ಡೆಮೋಕ್ರಾಟ್ ನಾಯಕರು ಜಂಟಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

"ಉಭಯ ಪಕ್ಷಗಳ (ಬೈಪಾರ್ಟಿಸನ್) ಬೆಂಬಲದೊಂದಿಗೆ ಅಂಗೀಕಾರವಾಗಬಹುದಾಗಿದ್ದ ಮತ್ತು ಮಧ್ಯಪ್ರಾಚ್ಯದಲ್ಲಿನ ಸಂಘರ್ಷವನ್ನು ಕೊನೆಗೊಳಿಸಲು ಅಧ್ಯಕ್ಷರಿಗೆ ಆದೇಶಿಸಬಹುದಾಗಿದ್ದ ಯುದ್ಧ ಅಧಿಕಾರಗಳ ನಿರ್ಣಯದ ಮೇಲಿನ ನಿಗದಿತ ಮತದಾನವನ್ನು ರಿಪಬ್ಲಿಕನ್ನರು ಹೇಡಿತನದಿಂದ ಹಿಂದೆ ಪಡೆದಿದ್ದಾರೆ."

ಇದೇ ವೇಳೆ, ಸೆನೆಟ್‌ನಲ್ಲಿರುವ ರಿಪಬ್ಲಿಕನ್ನರು ಸಹ ಈ ವಾರದ ಆರಂಭದಲ್ಲಿ ಅಂತಿಮ ಮತದಾನದ ಹಂತಕ್ಕೆ ತಲುಪಿದ್ದ ಮತ್ತೊಂದು ಯುದ್ಧ ಅಧಿಕಾರಗಳ ನಿರ್ಣಯವನ್ನು ವಜಾಗೊಳಿಸಲು ಅಗತ್ಯ ಮತಗಳನ್ನು ಖಚಿತಪಡಿಸಿಕೊಳ್ಳಲು ಶ್ರಮಿಸುತ್ತಿದ್ದಾರೆ. ಈ ನಿರ್ಣಯಕ್ಕೆ ನಾಲ್ವರು ರಿಪಬ್ಲಿಕನ್ ಸೆನೆಟರ್‌ಗಳು ಬೆಂಬಲ ನೀಡಿದ್ದರು ಮತ್ತು ಇತರ ಮೂವರು ಮತದಾನಕ್ಕೆ ಗೈರುಹಾಜರಾಗಿದ್ದರು.

ಕಾಂಗ್ರೆಸ್ ನಾಯಕರ ಈ ಇತ್ತೀಚಿನ ಕ್ರಮಗಳು ಟ್ರಂಪ್ ಆಡಳಿತವು ಯುದ್ಧವನ್ನು ನಿಭಾಯಿಸುತ್ತಿರುವ ರೀತಿಗೆ ಬೆಂಬಲ ಕಡಿಮೆಯಾಗುತ್ತಿರುವುದನ್ನು ಸೂಚಿಸುತ್ತವೆ. ಈ ವಿಷಯವು ರಿಪಬ್ಲಿಕನ್ ಪಕ್ಷದೊಳಗೆ ತೀವ್ರ ಭಿನ್ನಾಭಿಪ್ರಾಯಕ್ಕೆ ಕಾರಣವಾಗಿದೆ.

# ಸನ್‌ರೈಸರ್ಸ್ ವಿರುದ್ಧ ಸೋತರೂ ಅಗ್ರಸ್ಥಾನದಲ್ಲೇ ಉಳಿದ ಆರ್‌ಸಿಬಿ



ಐಪಿಎಲ್ 67ನೇ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಿದ್ದವು. ಪಾಯಿಂಟ್ ಪಟ್ಟಿಯಲ್ಲಿ ಅಗ್ರ 2ರಲ್ಲಿ ಸ್ಥಾನ ಪಡೆಯಲು ಈ ಪಂದ್ಯದಲ್ಲಿ ಗೆಲ್ಲುವುದು ಉಭಯ ತಂಡಗಳಿಗೆ ಅತ್ಯಂತ ಮುಖ್ಯವಾಗಿತ್ತು. ಅದರಲ್ಲೂ ಸನ್‌ರೈಸರ್ಸ್ ಅಗ್ರಸ್ಥಾನಕ್ಕೇರಬೇಕೆಂದರೆ ಆರ್‌ಸಿಬಿ ವಿರುದ್ಧ ಭಾರೀ ಅಂತರದ ಗೆಲುವು ದಾಖಲಿಸಬೇಕಿತ್ತು. ಆದರೆ ಈ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ಗೆಲುವು ಸಾಧಿಸಿತ್ತಾದರೂ ಅಗ್ರ 2ರಲ್ಲಿ ಸ್ಥಾನ ಪಡೆಯುವಲ್ಲಿ ವಿಫಲವಾಯಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ಸ್ ತಂಡ 256 ರನ್ ಕಲೆಹಾಕಿತು. ಈ ಬೃಹತ್ ಗುರಿಯನ್ನು ಬೆನ್ನಟ್ಟುವಲ್ಲಿ ವಿಫಲವಾದ ಆರ್‌ಸಿಬಿ ಕೊನೆಯ ಲೀಗ್ ಪಂದ್ಯದಲ್ಲಿ ಸೋಲಿಗೆ ಕೊರಳೊಡ್ಡಬೇಕಾಯಿತು.

**ರನ್‌ಗಳ ಶಿಖರ ಕಟ್ಟಿದ ಸನ್‌ರೈಸರ್ಸ್**

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಹೈದರಾಬಾದ್ ತಂಡಕ್ಕೆ ಟ್ರಾವಿಸ್ ಹೆಡ್ ಮತ್ತು ಅಭಿಷೇಕ್ ಶರ್ಮಾ ಉತ್ತಮ ಆರಂಭ ನೀಡಿದರು. ಮೊದಲ ವಿಕೆಟ್‌ಗೆ ನಾಲ್ಕು ಓವರ್‌ಗಳಲ್ಲಿ 45 ರನ್ ಸೇರಿಸಿದರು. ಆದರೆ ರಸಿಕ್ ಸಲಾಂ ದಾರ್ ಬೌಲಿಂಗ್‌ನಲ್ಲಿ ಹೆಡ್ ಔಟಾಗುವ ಮೂಲಕ ಈ ಜೊತೆಯಾಟ ಮುರಿದುಬಿತ್ತು. ನಂತರ ಅಭಿಷೇಕ್ ಶರ್ಮಾ, ಇಶಾನ್ ಕಿಶಾನ್ ಅವರೊಂದಿಗೆ ಸ್ಫೋಟಕ ಜೊತೆಯಾಟ ಕಟ್ಟಿದರು. ಮೂರು ಜೀವದಾನಗಳ ಲಾಭ ಪಡೆದ ಅಭಿಷೇಕ್ ಕೇವಲ 20 ಎಸೆತಗಳಲ್ಲಿ ಅರ್ಧಶತಕ ಗಳಿಸಿ, 22 ಎಸೆತಗಳಲ್ಲಿ 56 ರನ್ ಬಾರಿಸಿ ಔಟಾದರು.

ಆ ನಂತರ ಜೊತೆಯಾದ ಇಶಾನ್ ಕಿಶಾನ್ ಹಾಗೂ ಹೆನ್ರಿಕ್ ಕ್ಲಾಸೆನ್ ಕೂಡ ತಲಾ ಅರ್ಧಶತಕ ಬಾರಿಸುವ ಮೂಲಕ ತಂಡವನ್ನು 200 ರನ್‌ಗಳ ಗಡಿ ದಾಟಿಸಿದರು. ಕ್ಲಾಸೆನ್ 24 ಎಸೆತಗಳಲ್ಲಿ 51 ರನ್ ಗಳಿಸಿದರೆ, ಇಶಾನ್ ಕಿಶಾನ್ 79 ರನ್ ಗಳಿಸಿದರು. ನಿತೀಶ್ ರೆಡ್ಡಿ ಕೂಡ ಐದನೇ ಸ್ಥಾನದಲ್ಲಿ ಬ್ಯಾಟಿಂಗ್ ಮಾಡಿ 12 ಎಸೆತಗಳಲ್ಲಿ ಅಜೇಯ 29 ರನ್ ಗಳಿಸಿದರು.

**ಆರ್‌ಸಿಬಿ 55 ರನ್‌ಗಳ ಸೋಲು**

ಈ ಗುರಿ ಬೆನ್ನಟ್ಟಿದ ಆರ್‌ಸಿಬಿಗೂ ಸ್ಫೋಟಕ ಆರಂಭ ಸಿಕ್ಕಿತು. ವೆಂಕಟೇಶ್ ಅಯ್ಯರ್ 19 ಎಸೆತಗಳಲ್ಲಿ 44 ರನ್ ಬಾರಿಸಿ ಉತ್ತಮ ಆರಂಭ ನೀಡಿದರು. ಆದರೆ ಎಹ್ಸಾನ್ ಮಾಲಿಂಗ, ವೆಂಕಟೇಶ್ ಅವರನ್ನು ಔಟ್ ಮಾಡುವ ಮೂಲಕ ರನ ವೇಗಕ್ಕೆ ಕಡಿವಾಣ ಹಾಕಿದರು. ನಂತರ ಶಕೀಬ್ ಹುಸೇನ್ ಆರ್‌ಸಿಬಿಗೆ ದೊಡ್ಡ ಹೊಡೆತ ನೀಡಿ, ವಿರಾಟ್ ಕೊಹ್ಲಿಯನ್ನು 15 ರನ್‌ಗೆ ಔಟ್ ಮಾಡಿದರು.

ದೇವದತ್ ಪಡಿಕ್ಕಲ್ ಕೂಡ 14 ಎಸೆತಗಳಲ್ಲಿ ಕೇವಲ 21 ರನ್ ಗಳಿಸಿ ಔಟಾದರು. ನಾಯಕನ ಇನ್ನಿಂಗ್ಸ್ ಆಡಿದ ರಜತ್ ಪಾಟಿದಾರ್ 56 ರನ್ ಗಳಿಸಿದರಾದರೂ ಅವರ ಇನ್ನಿಂಗ್ಸ್ ತುಂಬಾ ನಿಧಾನವಾಗಿತ್ತು. ಕೃನಾಲ್ ಪಾಂಡ್ಯ ಅಜೇಯ 41 ಮತ್ತು ಟಿಮ್ ಡೇವಿಡ್ ಅಜೇಯ 15 ರನ್ ಗಳಿಸಿದರು. ಕೊನೆಯಲ್ಲಿ, ಆರ್‌ಸಿಬಿ ಕೇವಲ 200 ರನ್ ಗಳಿಸಿ ಪಂದ್ಯವನ್ನು 55 ರನ್‌ಗಳಿಂದ ಸೋತಿತು.

# ಕೋಟ್ಯಂತರ ಮಹಿಳೆಯರ ಬಾಳಿಗೆ ಆಸರೆಯಾದ ಸರ್ಕಾರದ ಉಚಿತ ಬಸ್ ಪಯಣ

# ಪ್ರಯಾಣದ ಸ್ವಾತಂತ್ರ್ಯ ತಂದ ಶಕ್ತಿ ಯೋಜನೆ



## ಅಂಕಿ-ಅಂಶ

**₹18,943 ಕೋಟಿ**
ಈವರೆಗೆ 'ಶಕ್ತಿ'ಗೆ ವ್ಯಯಿಸಲಾದ ಮೊತ್ತ

**726 ಕೋಟಿಗೂ ಅಧಿಕ**
ವಿತರಿಸಲಾದ ಒಟ್ಟು ಉಚಿತ ಟಿಕೆಟ್‌ಗಳು

**ಗ್ಯಾರಂಟಿ ವಾರ್ತೆ**

**ಬೆಂಗಳೂರು:** 2023ರಲ್ಲಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಪ್ರಕಟಿಸಿದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಶಕ್ತಿ ಯೋಜನೆ ಮೊದಲನೆಯದಾಗಿದೆ. ರಾಜ್ಯದಾದ್ಯಂತ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣ ಕಲ್ಪಿಸುವ ಈ ಯೋಜನೆಗೆ 2023ರ ಜೂನ್ 11ರಂದು ಅಧಿಕೃತವಾಗಿ ಚಾಲನೆ ನೀಡಲಾಗಿತ್ತು. ಕಳೆದ ಮೂರು ವರ್ಷಗಳ ಅವಧಿಯಲ್ಲಿ, ಈ ಮಹತ್ವಾಕಾಂಕ್ಷಿ ಯೋಜನೆಯು ರಾಜ್ಯದಲ್ಲಿ ಕೋಟ್ಯಂತರ ಮಹಿಳೆಯರಿಗೆ ಪ್ರಯಾಣದ ಸ್ವಾತಂತ್ರ್ಯ ಕಲ್ಪಿಸಿ ಕ್ರಾಂತಿಕಾರಿ ಬದಲಾವಣೆಯನ್ನು ತಂದಿದೆ.

ದಿನನಿತ್ಯ ದುಡಿಮೆಗೆ ಹೋಗುವ ಗಾರ್ಮೆಂಟ್ಸ್ ಕಾರ್ಮಿಕರು, ಪೌರಕಾರ್ಮಿಕರು ಹಾಗೂ ಕೆಳ-ಮಧ್ಯಮ ವರ್ಗದ ಮಹಿಳೆಯರಿಗೆ ಪ್ರತಿ ತಿಂಗಳು ಸುಮಾರು 1,500 ರಿಂದ 2,000 ರೂಪಾಯಿಗಳವರೆಗೆ ಉಳಿತಾಯವಾಗುತ್ತಿದೆ. ಈ ಹಣವನ್ನು ಅವರು ಮಕ್ಕಳ ಶಿಕ್ಷಣ, ದಿನಸಿ ಖರ್ಚಿಗೆ, ಔಷಧಿ ಖರೀದಿ ಸೇರಿದಂತೆ ಇನ್ನಿತರ ಸಣ್ಣಪುಟ್ಟ ಉಳಿತಾಯ ಖಾತೆಗಳಲ್ಲೂ ತೊಡಗಿಸುತ್ತಿದ್ದಾರೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರು ಯಾವುದೇ ಆರ್ಥಿಕ ಹೊರೆಯಿಲ್ಲದೆ ಕಾಲೇಜು ಮತ್ತು ಉನ್ನತ ಶಿಕ್ಷಣಕ್ಕಾಗಿ ನಗರ ಪ್ರದೇಶಗಳಿಗೆ ಪ್ರಯಾಣಿಸಲು ಶಕ್ತಿ ನೆರವಾಗಿದೆ. ಯೋಜನೆಯ ಜಾರಿಯ ನಂತರ ರಾಜ್ಯದ ಪ್ರಮುಖ ದೇವಸ್ಥಾನಗಳು ಮತ್ತು ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಮಹಿಳಾ ಭಕ್ತರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿರುವುದು, ಧಾರ್ಮಿಕ ಪ್ರವಾಸೋದ್ಯಮಕ್ಕೂ ಉತ್ತೇಜನ ನೀಡಿದಂತಾಗಿದೆ.

## 726 ಕೋಟಿಗೂ ಅಧಿಕ ಪ್ರಯಾಣ

ಸರ್ಕಾರದ ಅಂಕಿ-ಅಂಶಗಳ ಪ್ರಕಾರ, ಯೋಜನೆ ಜಾರಿಯಾದಾಗಿನಿಂದ ಈವರೆಗೆ 726 ಕೋಟಿಗೂ ಅಧಿಕ ಬಾರಿ ಮಹಿಳಾ ಪ್ರಯಾಣಿಕರು 'ಶಕ್ತಿ' ಯೋಜನೆಯಲ್ಲಿ ಉಚಿತವಾಗಿ ಪ್ರಯಾಣಿಸಿದ್ದಾರೆ. ಇದಕ್ಕಾಗಿ ಸರ್ಕಾರವು ಈವರೆಗೆ 18,943 ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಟಿಕೆಟ್‌ಗಳನ್ನು ವಿತರಿಸಿದ್ದು, ಸಾರಿಗೆ ಸಂಸ್ಥೆಗಳಿಗೆ ಸಕಾಲದಲ್ಲಿ ಅನುದಾನ ಬಿಡುಗಡೆ ಮಾಡುತ್ತಿದೆ. ಹೆಚ್ಚುತ್ತಿರುವ ಪ್ರಯಾಣಿಕರ ಒತ್ತಡವನ್ನು ನಿಭಾಯಿಸಲು ಸಾವಿರಾರು ಹೊಸ ಬಸ್‌ಗಳನ್ನು ಸಾರಿಗೆ ಸಂಸ್ಥೆಗಳಿಗೆ ಸೇರ್ಪಡೆಗೊಳಿಸಲಾಗಿದೆ. ಯೋಜನೆಯನ್ನು ಇನ್ನಷ್ಟು ಸುಗಮಗೊಳಿಸಲು ಮತ್ತು ದುರುಪಯೋಗ ತಡೆಯಲು ಸರ್ಕಾರವು ಮಹಿಳೆಯರಿಗೆ 'ಶಕ್ತಿ ಸ್ಮಾರ್ಟ್ ಕಾರ್ಡ್' (Smart Card) ವಿತರಿಸುವ ಪ್ರಕ್ರಿಯೆಯನ್ನು ಕೂಡ ಶೀಘ್ರದಲ್ಲೇ ಜಾರಿಗೊಳಿಸುವತ್ತ ಹೆಜ್ಜೆ ಇಟ್ಟಿದೆ.

## ಇತರೆ ರಾಜ್ಯಗಳಿಗೆ ಮಾದರಿ

ಕರ್ನಾಟಕದ ಈ 'ಶಕ್ತಿ' ಯೋಜನೆ ಕೇವಲ ಉಚಿತ ಬಸ್ ಪ್ರಯಾಣಕ್ಕೆ ಸೀಮಿತವಾಗಿರದೆ, ಮಹಿಳೆಯರ ಪ್ರಯಾಣವನ್ನು ಹೆಚ್ಚಿಸುವ ಮೂಲಕ ಅವರಲ್ಲಿ ಹೊಸ ಆತ್ಮವಿಶ್ವಾಸವನ್ನು ತುಂಬಿದೆ. ಕರ್ನಾಟಕದ ಈ ಯಶಸ್ವಿ ಮಾದರಿಯನ್ನು ನೋಡಿ ದೇಶದ ಇತರೆ ರಾಜ್ಯಗಳು ಕೂಡ ಇಂತಹದೇ ಯೋಜನೆಗಳನ್ನು ಜಾರಿಗೆ ತರಲು ಮುಂದಾಗುತ್ತಿರುವುದು ಇದರ ಯಶಸ್ಸಿಗೆ ಸಾಕ್ಷಿಯಾಗಿದೆ. ಈಗಾಗಲೇ ತೆಲಂಗಾಣದಲ್ಲಿ 'ಮಹಾಲಕ್ಷ್ಮೀ', ಆಂಧ್ರಪ್ರದೇಶದಲ್ಲಿ 'ಸ್ತ್ರೀ ಶಕ್ತಿ' ಹಾಗೂ ಕೇರಳದಲ್ಲೂ ಕೂಡ ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಕೂಡ ಈ ಯೋಜನೆಯನ್ನು ಘೋಷಿಸಿ, ಅನುಷ್ಠಾನಕ್ಕೂ ಮುಂದಾಗಿದೆ.



## 3 ವರ್ಷಗಳ ಸಾಧನೆ, 'ಗ್ಯಾರಂಟಿ ಹಬ್ಬ' ಘೋಷಣೆ

ಜನಪರ ಆಡಳಿತದ ಯಶಸ್ವಿ ನಾಲ್ಕನೇ ವರ್ಷಕ್ಕೆ ಹೆಜ್ಜೆ ಇಡುತ್ತಿರುವ ರಾಜ್ಯ ಸರ್ಕಾರವು 3 ವರ್ಷಗಳ ಸಾಧನಾ ಸಮಾವೇಶವನ್ನು ಮೇ 19ರಂದು ತುಮಕೂರಿನಲ್ಲಿ ಯಶಸ್ವಿಯಾಗಿ ನಡೆಸಿದ್ದು, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಂಗಳು ಪೂರ್ತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಾಗಿ ಘೋಷಿಸಿದ್ದರು. ಅದರಂತೆ ರಾಜ್ಯ ಸರ್ಕಾರವು 'ಗ್ಯಾರಂಟಿ ಹಬ್ಬ' ಹೆಸರಿನಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ತಿಂಗಳು ಪೂರ್ತಿ ವಿವಿಧ ಅಭಿಯಾನಗಳು ನಡೆಯಲಿವೆ.

ಗ್ಯಾರಂಟಿ ಹಬ್ಬ
4ನೇ ವರ್ಷಕ್ಕೆ ಪಾದಾರ್ಪಣೆ



" ನಮ್ಮ ಹಳ್ಳೀಲಿ ದಿನವೂ ಕೆಲಸ ಸಿಗುತ್ತಿರಲಿಲ್ಲ, ಒಮ್ಮೆ ಕೆಲಸವಿದ್ದರೆ ಮತ್ತೊಮ್ಮೆ ಇರುತ್ತಿರಲಿಲ್ಲ. ಅಂತಹದ್ರಲ್ಲಿ ಆಸ್ಪತ್ರೆಗೆ ಹೋಗಬೇಕೆಂದರೆ ಬಸ್ ಚಾರ್ಜ್‌ಗೇ ಪರದಾಡಬೇಕಿತ್ತು. ಈಗ ಶಕ್ತಿ ಯೋಜನೆಯಿಂದಾಗಿ ಫ್ರೀ ಬಸ್ ಬಂದಿದ್ದರಿಂದ ಆಸ್ಪತ್ರೆಗೆ ಹೋಗಿ ಬರಲು ಅನುಕೂಲವಾಗಿದೆ. ಅಷ್ಟೇ ಅಲ್ಲ, ಮನಸ್ಸಿನ ಬೇಸರ ಕಳೆಯಲು ಧರ್ಮಸ್ಥಳಕ್ಕೂ ಹೋಗಿ ಬಂದೆ. ಬಸ್ ಚಾರ್ಜ್‌ನಿಂದ ಉಳಿತಾಯವಾಗುತ್ತಿರುವ ಹಣದಲ್ಲೇ ಅನಾರೋಗ್ಯ ಬಿದ್ದಾಗ ಗುಳಿಗೆಗಳನ್ನು ಕೊಂಡುಕೊಳ್ಳುತ್ತಿದ್ದೇನೆ.

○ **ಹನುಮವ್ವ, ಹಾವೇರಿ**



" ಮನೆಯ ಪರಿಸ್ಥಿತಿ ತೀರಾ ಹದಗೆಟ್ಟಿತ್ತು. ತವರು ಮನೆಗೆ ಹೋಗಬೇಕೆಂದರೂ ಬಸ್ ಚಾರ್ಜ್‌ಗೆ ದುಡ್ಡಿಲ್ಲದೆ, ಕಾಲಿನಲ್ಲಿ ಗುಳ್ಳೆಗಳು ಏಳುವಂತೆ ಮೈಲುಗಟ್ಟಲೆ ನಡೆದುಕೊಂಡು ಹೋಗುತ್ತಿದ್ದೆವು. ಬಡತನ ನಮ್ಮ ಕಾಲಿಗೆ ಬೇಡಿ ಹಾಕಿತ್ತು. ಆದರೆ ಇಂದು ಫ್ರೀ ಬಸ್ ಇರುವುದರಿಂದ ಮೈಸೂರಿನಲ್ಲಿರುವ ನನ್ನ ಮಗಳನ್ನು, ಮನಸ್ಸಿಗೆ ಬೇಸರವಾದಾಗ ದೇವರನ್ನು ನೋಡಿ ಬರುವ ಶಕ್ತಿ ನನಗೆ ಸಿಕ್ಕಿದೆ.

○ **ಲಕ್ಷ್ಮಮ್ಮ, ಕೊಪ್ಪಳ**



" ಬಂಡವಾಳದ ಕೊರತೆಯಿಂದಾಗಿ ಕಸೂತಿ ಉದ್ಯಮವನ್ನು ನಡೆಸಲಾಗದೆ ಕಂಗಾಲಾಗಿದ್ದೆ. ಕಸೂತಿ ಕೆಲಸಕ್ಕೆ ಬೇಕಾದ ಕಚ್ಚಾ ವಸ್ತುಗಳನ್ನು ತರಲು ಪೇಟೆಗೆ ಹೋಗಿ ಬರಲು ಬಸ್ ಟಿಕೆಟ್ ದುಡ್ಡೇ ದೊಡ್ಡ ಹೊರೆಯಾಗಿತ್ತು. ಆದರೆ, ಸರ್ಕಾರದ 'ಶಕ್ತಿ' ಯೋಜನೆಯ ಉಚಿತ ಬಸ್ ಸೌಲಭ್ಯ ಸಿಕ್ಕ ಮೇಲೆ ನಂಗೆ ಬಸ್ ಓಡಾಟದ ಖರ್ಚಿನ ಚಿಂತೆ ದೂರವಾಗಿದೆ.

○ **ಜಮಲಾ ಬಾಯಿ, ಯಾದಗಿರಿ**


## ಮಹಿಳಾ ಸಬಲೀಕರಣವೇ ಸಮೃದ್ಧ ಕರ್ನಾಟಕದ ಬುನಾದಿ



'ಶಕ್ತಿ' ಯೋಜನೆಯು ಕೇವಲ ಉಚಿತ ಸಾರಿಗೆ ಸೌಲಭ್ಯವಲ್ಲ; ಇದು ರಾಜ್ಯದ ಪ್ರತಿಯೊಬ್ಬ ಮಹಿಳೆಯ ಗೌರವ, ಸಮಾನತೆ ಮತ್ತು ಪ್ರಗತಿಗಾಗಿ ನಮ್ಮ ಸರ್ಕಾರ ಹೊಂದಿರುವ ಅಚಲ ಬದ್ಧತೆಯ ಸಂಕೇತವಾಗಿದೆ. ಕಳೆದ ಮೂರು ವರ್ಷಗಳಲ್ಲಿ ಕೋಟ್ಯಂತರ ಉಚಿತ ಪ್ರಯಾಣಗಳು ಮಹಿಳೆಯರಿಗೆ ಯಾವುದೇ ಆರ್ಥಿಕ ಅಡೆತಡೆಗಳಿಲ್ಲದೆ ಶಿಕ್ಷಣ, ಉದ್ಯೋಗ ಹಾಗೂ ಆರೋಗ್ಯ ಸೇವೆಗಳನ್ನು ಪಡೆದುಕೊಳ್ಳಲು ನೆರವಾಗಿವೆ. ಸಬಲ ಮಹಿಳೆಯೇ ಬಲಿಷ್ಠ ಕುಟುಂಬದ ಆಧಾರಸ್ತಂಭ, ಆ ಬಲಿಷ್ಠ ಕುಟುಂಬಗಳೇ ಸಮೃದ್ಧ ಕರ್ನಾಟಕದ ಬುನಾದಿ. ಸರ್ವರನ್ನೂ ಒಳಗೊಳ್ಳುವ ಇಂತಹ ಪ್ರಗತಿಪರ ಅಭಿವೃದ್ಧಿಗೆ ನಮ್ಮ ಸರ್ಕಾರ ಸದಾ ಕಟಿಬದ್ಧವಾಗಿದೆ.

• ಸಿದ್ದರಾಮಯ್ಯ, ಮುಖ್ಯಮಂತ್ರಿಗಳು

## ಸ್ವತಂತ್ರ ಪ್ರಯಾಣ: ಮಹಿಳಾ ಸಬಲೀಕರಣದ ಹೊಸ ಆಯಾಮ



ಮುಕ್ತ ಪ್ರಯಾಣವು ಮಹಿಳೆಯರ ಸಬಲೀಕರಣದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಇದರಿಂದಾಗಿ ಅವರಿಗೆ ಉದ್ಯೋಗ, ಶಿಕ್ಷಣ ಹಾಗೂ ಮಾರುಕಟ್ಟೆಯ ಅವಕಾಶಗಳು ಕೈಗೆಟುಕುತ್ತವೆ. ಶಕ್ತಿ ಯೋಜನೆಯು ಕುಟುಂಬಗಳ ಆರ್ಥಿಕ ಹೊರೆಯನ್ನು ಕಡಿಮೆ ಮಾಡಿದ್ದಲ್ಲದೆ, ಕರ್ನಾಟಕದ ಸಾಮಾಜಿಕ-ಆರ್ಥಿಕ ಪ್ರಗತಿಯಲ್ಲಿ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆಯನ್ನು ದ್ವಿಗುಣಗೊಳಿಸಿದೆ. ನಮ್ಮ ಆಡಳಿತದ ನಾಲ್ಕನೇ ವರ್ಷಕ್ಕೆ ಹೆಜ್ಜೆ ಇಡುತ್ತಿರುವ ಈ ಸುಸಂದರ್ಭದಲ್ಲಿ, ಹೆಚ್ಚು ಸಮಾನತೆಯ ಮತ್ತು ಸಬಲ ಕರ್ನಾಟಕದ ನಿರ್ಮಾಣಕ್ಕೆ ನಾವು ಮತ್ತೊಮ್ಮೆ ಸಂಕಲ್ಪ ತೊಡುತ್ತೇವೆ.

• ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿಗಳು

## ಪ್ರಗತಿಯ ಪಥದಲ್ಲಿ ಸಾರ್ವಜನಿಕ ಸಾರಿಗೆ



ಶಕ್ತಿ ಯೋಜನೆಯು ಕರ್ನಾಟಕದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮಹಿಳಾ ಪ್ರಗತಿಯ ಶಕ್ತಿಶಾಲಿ ವಾಹನವನ್ನಾಗಿ ಪರಿವರ್ತಿಸಿದೆ. ನಮ್ಮ ಸಾರಿಗೆ ಸಂಸ್ಥೆಗಳ ಬಸ್ಸುಗಳಲ್ಲಿ ವಿತರಿಸಲಾಗುವ ಪ್ರತಿಯೊಂದು ಉಚಿತ ಟಿಕೆಟ್ ಸಹ ರಾಜ್ಯದ ಮಹಿಳೆಯರ ಹಕ್ಕು, ಆರ್ಥಿಕ ಉಳಿತಾಯ ಮತ್ತು ಆತ್ಮವಿಶ್ವಾಸದ ಪ್ರತೀಕವಾಗಿದೆ. ಗ್ರಾಮೀಣ ಭಾಗದಿಂದ ಹಿಡಿದು ಮಹಾನಗರಗಳವರೆಗೆ ಮಹಿಳೆಯರು ಇಂದು ಎಂದಿಗಿಂತಲೂ ಹೆಚ್ಚು ಧೈರ್ಯದಿಂದ ಮತ್ತು ಸ್ವತಂತ್ರವಾಗಿ ಪ್ರಯಾಣಿಸುತ್ತಿದ್ದಾರೆ. ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ಈ ಐತಿಹಾಸಿಕ ಯೋಜನೆಯ ಲಾಭ ನಿರಂತರವಾಗಿ ಸಿಗುವಂತೆ ಮಾಡಲು ನಮ್ಮ ಇಲಾಖೆ ಬದ್ಧವಾಗಿದೆ.

•ರಾಮಲಿಂಗಾರೆಡ್ಡಿ, ಸಾರಿಗೆ ಹಾಗೂ ಮುಜರಾಯಿ ಸಚಿವರು